ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 253 RNI Number : KNKAN/25/A2770 26-09-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:253 ರಾಯಚೂರು 26-09-2026 ಶನಿವಾರ ಪುಟ 04 ಬೆಲೆ ರೂ.2/- ಮೊ:8660146563

ಪೌರಕಾರ್ಮಿಕರ ಭತ್ಯೆ ಹೆಚ್ಚಳ, ಉಪಹಾರ ಭತ್ಯೆ ಹೆಚ್ಚಳ: ಸಿಎಂ ಘೋಷಣೆ

ಬೆಂಗಳೂರು: ಶ್ರಮದಲ್ಲೇ ಶಿವನನ್ನು ಕಾಣುವ ನಿತ್ಯ ನೈರ್ಮಲ್ಯಗಾರರು ಪೌರಕಾರ್ಮಿಕರು. ಇವರು ನಿಜವಾದ ಕರ್ಮಯೋಗಿ, ಕಾಯಕಜೀವಿಗಳು, ಸ್ವಚ್ಛತೆ ಕ್ರಾಂತಿಯ ಸರದಾರರು. ಪೌರಕಾರ್ಮಿಕರ ಭತ್ಯೆ ಏರಿಕೆ, ಉಪಹಾರ ಭತ್ಯೆಯನ್ನು 35 ರಿಂದ 70 ರೂ.ಗೆ ಏರಿಕೆ ಮಾಡಿ ಸಧ್ಯದಲ್ಲೇ ಆದೇಶ ಹೋರಡಿಸಲಾಗುವುದು ಎಂದು ಸಿಎಂ ಡಿ.ಕೆ.ಶಿವಕುಮಾರ್ ಘೋಷಿಸಿದರು.

ಬೆಂಗಳೂರಿನ ಅರಮನೆ ಮೈದಾನದಲ್ಲಿ ಶುಕ್ರವಾರ ನಡೆದ ಪೌರಕಾರ್ಮಿಕ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡುತ್ತಾ, ನಿಮ್ಮೆಲ್ಲರ ಬದುಕಿನಲ್ಲಿ ನೀವು ಯಾವತ್ತಿಗೂ ಕೀಳರಿಮೆಯಿಂದ ಮಾನಸಿಕವಾಗಿ ಕುಗ್ಗಬಾರದು. ನೀವು ದೇಶಸೇವೆ ಮಾಡುತ್ತಿರುವುದಾಗಿ ಸ್ವಾಭಿಮಾನದಿಂದ ಬದುಕಿ. ಪೌರಕಾರ್ಮಿಕರಿಲ್ಲದೇ ನಾವು ಆರೋಗ್ಯವಾಗಿರಲು ಸಾಧ್ಯವಿಲ್ಲ. ನಮ್ಮ ಸರ್ಕಾರ ಬಂದ ನಂತರ ಏನೇ ಒತ್ತಡವಿದ್ದರೂ ಸಾವಿರಾರು ಜನ ಪೌರಕಾರ್ಮಿಕರನ್ನು ಖಾಯಂ ಮಾಡಿದ್ದು, ಉಳಿದವರನ್ನು ಖಾಯಂ ಮಾಡಲಾಗುವುದು. ಬಿಡ್ಬ್ಯೂಎಸ್ಎಸ್‌ಬಿ, ನೀರು ಸರಬರಾಜು ಇಲಾಖೆಗಳಲ್ಲಿ ಖಾಯಂ ಆಗಿ ಸ್ವಾಭಿಮಾನದ ಬದುಕು ನೀಡಲು ಕಾಂಗ್ರೆಸ್ ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಿದರು.

ನಿಮ್ಮ ಸಂಘಟನೆಯಲ್ಲಿ ಆಗುತ್ತಿರುವ ಸಮಸ್ಯೆಗಳ ಬಗ್ಗೆ ಹೇಳುವಂತೆ ನಾನು ಬಸವಂತಪ್ಪನವರಿಗೆ ಹೇಳಿದೆ. ನಿಮ್ಮ ಅಧ್ಯಕ್ಷರುಗಳೇ ನಿಮ್ಮ ಕೆಲಸ ಖಾಯಂ ಮಾಡಲು ಅಡ್ಡಿಪಡಿಸುತ್ತಿದ್ದಾರೆ ಎಂಬ ಅಂಶವನ್ನು ನನ್ನ ಗಮನಕ್ಕೆ ತಂದರು. ಈ ವಿಚಾರವನ್ನು ಜನರ ಮುಂದೆಯೇ ಪ್ರಸ್ತಾಪಿಸಿ ಎಂದು ನಾನು ಸೂಚಿಸಿದೆ. ಕಾರಣ ನೀವು ಜಾಗೃತರಾಗಬೇಕು. ನಾನು ಇಲ್ಲಿಂದಲೇ ಅಧಿಕಾರಿಗಳಿಗೆ ಆದೇಶ ನೀಡುತ್ತಿದ್ದೇನೆ ಎಂದು ಆತ್ಮಸ್ಥೈರ್ಯ ತುಂಬಿದರು.

ಪೌರ ಕಾರ್ಮಿಕರ ಬೇಡಿಕೆ ಈಡೇರಿಕೆಗೆ ಸಚಿವ ಸಂಪುಟ ಉಪ ಸಮಿತಿ ರಚನೆ: ಇಂತಹ ಸಮಸ್ಯೆಗಳನ್ನು ಬಗೆಹರಿಸಬೇಕು ಎಂಬ ಕಾರಣಕ್ಕೆ ನಾವು ಪ್ರಜಾಸೇವೆ ಇಲಾಖೆ ಆರಂಭಿಸಿದ್ದೇವೆ. ಯಾವ ಸಂಘಟನೆಯ ಮಧ್ಯವರ್ತಿಗಳು ಅಗತ್ಯವಿಲ್ಲ. ನಿಮ್ಮ ಸಮಸ್ಯೆಗಳನ್ನು ಬಾಲಕೃಷ್ಣ, ಯತೀಂದ್ರ, ಮುನಿಯಪ್ಪನವರು ಹಾಗೂ ಬಸವಂತಪ್ಪನವರು ತಿಳಿಸಿದ್ದಾರೆ. ನಿಮ್ಮ ಮಂಡಳಿ, ಯೋಗಕ್ಷೇಮ, ಕಲ್ಯಾಣ ನಿಧಿ ವಿಚಾರದಲ್ಲಿ ನಾನು ಗಮನಹರಿಸಬೇಕಾಗಿದ್ದು, ಇದಕ್ಕಾಗಿ ಸಮಾಜಕಲ್ಯಾಣ, ನಗರಾಭಿವೃದ್ಧಿ ಇಲಾಖೆ ಸೇರಿದಂತೆ ಬಸವಂತಪ್ಪನವರನ್ನು ಒಳಗೊಂಡಂತೆ ಸಂಪುಟ ಉಪಸಮಿತಿ ರಚಿಸಿ, ಆರ್ಥಿಕ ಇಲಾಖೆ ವಿಶ್ವಾಸ ಪಡೆದು ತೀರ್ಮಾನ ಮಾಡಲಾಗುವುದು ಎಂದು ಸಿಎಂ ಹೇಳಿದರು.

ಪ್ರತಿನಿತ್ಯ ನಿಮಗೆ ನೀಡುವ ಜವಾಬ್ದಾರಿಯಲ್ಲಿ ಶೇ 60ರಷ್ಟು ಜನ ಪ್ರಾಮಾಣಿಕವಾಗಿ ಮಾಡುತ್ತೀರಿ. ಉಳಿದಷ್ಟು ಜನ ಮೈಗಳ್ಳರು, ಮಹಿಳೆಯರ ಮೇಲೆ ದರ್ಪ ತೋರುವವರು ನಿಮ್ಮಲ್ಲೇ ಇದ್ದಾರೆ. ಇದರ ಬಗ್ಗೆ ಗಮನದಲ್ಲಿಟ್ಟುಕೊಂಡು ಕ್ರಮ ಕೈಗೊಳ್ಳಲಾಗುವುದು. ನೀವುಗಳು ಇಲ್ಲದಿದ್ದರೆ ನಗರ ತಿಪ್ಪೆಗುಂಡಿಯಾಗುತ್ತದೆ ಎಂಬ ಅರಿವಿದೆ. ನೀವಿದ್ದರೆ ರಸ್ತೆ, ನಗರ ಎಲ್ಲವೂ ಸುಂದರ. ಹೀಗಾಗಿ ನಿಮ್ಮನ್ನು ಸ್ವಚ್ಛತೆಯ ರಾಯಭಾರಿಗಳು ಎಂದು ಗೌರವಯುತವಾಗಿ ಕಾಣುತ್ತಿದೆ. ನಿಮ್ಮ ಆರೋಗ್ಯಕ್ಕೆ ಗ್ಯಾರಂಟಿ ನೀಡುವುದು ನಮ್ಮ ಬದ್ಧತೆಯಾಗಿದೆ. ಸಮಾಜ ನಿಮ್ಮ ಮೇಲೆ ಅವಲಂಬಿತವಾಗಿದೆ. ನಿಮ್ಮ ಕೆಲಸ ದೇವರ ಸೇವೆಗೆ ಸಮಾನ ಎಂದು ಅಧಿಕಾರಿಗಳು ಹಾಗೂ ಸಾಮಾನ್ಯ ಜನ ಕಾಣುವಂತಾಗಬೇಕು ಎಂದು ತಿಳಿಸಿದರು.

ಸರ್ವರಿಗೂ ಸಮಬಾಳು, ಸಮ ಪಾಲು ಎಂಬ ತತ್ವ ಪಾಲನೆ: ಇಡೀ ದೇಶಕ್ಕೆ ನಮ್ಮ ಸರ್ಕಾರ ಹೊಸ ಸಂದೇಶ ನೀಡಿದೆ. ನಿಮ್ಮ ಪೌರಕಾರ್ಮಿಕನ ಮಗನನ್ನು ಭಗವಂತನ ಸೇವೆ ಮಾಡುವ ಮುಜರಾಯಿ ಇಲಾಖೆ ಸಚಿವರನ್ನಾಗಿ ಮಾಡಿ ಸರ್ವರಿಗೂ ಸಮಬಾಳು, ಸಮ ಪಾಲು ಎಂಬ ತತ್ವವನ್ನು ಪಾಲಿಸಿದ್ದೇವೆ. ಒಂದು ಕಾಲದಲ್ಲಿ ದೇವಾಲಯದ ಒಳಗೆ ನಿರ್ಬಂಧ ಹೇರಲಾಗಿತ್ತು. ಅಂತಹ ತಾರತಮ್ಯ ನಿಲ್ಲಬೇಕು ಎಂದು ನಾನು ಪೌರಕಾರ್ಮಿಕನ ಮಗನಿಗೆ ಈ ಇಲಾಖೆ ಜವಾಬ್ದಾರಿ ನೀಡಲಾಗಿದೆ. ಅವರಿಗೆ ಗೌರವ ಹಾಗೂ ಶಕ್ತಿ ಬರಬೇಕು ಎಂದು ಮೀನುಗಾರಿಕೆ, ಬಂದರು ಸಚಿವಾಲಯವನ್ನು ನೀಡಲಾಗಿದೆ ಎಂದರು.

ನಿಮ್ಮ ಕೈಗೆ ಭದ್ರತೆ ನೀಡಬೇಕು ಎಂದು 2017ರಲ್ಲಿ ನಮ್ಮ ಸರ್ಕಾರ 10 ಸಾವಿರ ಪೌರ ಕಾರ್ಮಿಕರನ್ನು ನೇಮಕ ಮಾಡಲಾಗಿತ್ತು. 2023ರಲ್ಲಿ ಸಿದ್ದರಾಮಯ್ಯ ಅವರ ಸರ್ಕಾರ ಅಧಿಕಾರಕ್ಕೆ ಬಂದ ನಂತರ 12,609 ಪೌರ ಕಾರ್ಮಿಕರನ್ನು ಖಾಯಂ ಮಾಡಿ ಇತಿಹಾಸವನ್ನು ನಿರ್ಮಿಸಿದೆ. ಒಂದು ರೂಪಾಯಿ ಭ್ರಷ್ಟಾಚಾರವಿಲ್ಲದೇ ಸರ್ಕಾರಿ ಕೆಲಸ ನೀಡಿದ್ದೇವೆ. ನಿಮಗೆ 40 ಸಾವಿರ ವೇತನ ನೀಡುವಂತೆ ಆದೇಶ ಮಾಡಿದೆವು. ಸ್ಥಳೀಯ ಸಂಸ್ಥೆಗಳಲ್ಲಿ 6 ಸಾವಿರ ಜನರನ್ನು ನೇಮಕ ಮಾಡಲಾಗಿದೆ. ಇನ್ನಷ್ಟು ನೇಮಕಾತಿ ಮಾಡಬೇಕು ಎಂದು ಚರ್ಚೆ ಮಾಡಿದ್ದೇವೆ ಎಂದು ತಿಳಿಸಿದರು.

ದೇವರಾಜ ಅರಸು ಅವರ ಕಾಲದಿಂದ ಪೌರ ಕಾರ್ಮಿಕರ ಬಗ್ಗೆ ಸರ್ಕಾರ ಚಿಂತನೆ ನಡೆಸಿದ್ದರೆ ಅದು ಕಾಂಗ್ರೆಸ್ ಸರ್ಕಾರ. ಪೌರ ಕಾರ್ಮಿಕರು ಹಾಗೂ ಸರ್ಕಾರದ ನಡುವೆ ಇರುವುದು ಭಕ್ತ ಹಾಗೂ ಭಗವಂತ ನಡುವಣ ಸಂಬಂಧ. ನಿಮ್ಮ ಮನೆ ನಿರ್ಮಾಣಕ್ಕೆ 7.50 ಲಕ್ಷ ರೂ. ನೀಡಲು ತೀರ್ಮಾನಿಸಿದ್ದೇವೆ ಎಂದರು.

ಕೆಪಿಎಸ್ ಮಾದರಿಯಲ್ಲಿ ವಸತಿ ಶಾಲೆಗಳ ನಿರ್ಮಾಣ: ನಿಮ್ಮ ಮಕ್ಕಳಿಗಾಗಿ ನಗರ ಪ್ರದೇಶಗಳಲ್ಲಿ ಕೆಪಿಎಸ್ ಮಾದರಿಯ ವಸತಿ ಶಾಲೆಗಳನ್ನು ನಿರ್ಮಾಣ ಮಾಡುವ ಗುರಿ ಹೊಂದಿದೆ. ನಿಮ್ಮ ಮಕ್ಕಳು ಓದಿ, ನಾಯಕರಾಗಿ ಬೆಳೆದು, ಹೊಸ ಉದ್ಯೋಗಗಳನ್ನು ಸೃಷ್ಟಿಸುವಂತಾಗಬೇಕು. ನಿಮ್ಮ ಮಕ್ಕಳು ಐಎಎಸ್ ಹಾಗೂ ಕೆಎಎಸ್ ಆಗಬೇಕು ಎಂಬುದು ನಮ್ಮ ಚಿಂತನೆ. ಈ ಸಂಬಂಧ ಸಚಿವರೊಂದಿಗೆ ಚರ್ಚೆ ಮಾಡಲಾಗುವುದು. ನಿಮಗಾಗಿ ಪ್ರತ್ಯೇಕ

ಮೂರನೇಯ ಪುಟಕ್ಕೆ

ರೈಲ್ವೆ ಯೋಜನೆಗಳಿಗೆ ವೇಗ ನೀಡಲು ಮಹತ್ವದ ಸಭೆ

ರಾಯಚೂರು,ಸೆ.25-

ಹುಬ್ಬಳ್ಳಿ: ನೈಋತ್ಯ ರೈಲ್ವೆ () ಕಚೇರಿಯಲ್ಲಿ ಇಂದು ಪ್ರಧಾನ ವ್ಯವಸ್ಥಾಪಕರಾದ ಶ್ರೀ ಪಿ. ಅನಂತ್ ಅವರನ್ನು ರಾಯಚೂರು-ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೀ ಜಿ. ಕುಮಾರ ನಾಯಕ ಅವರು ಭೇಟಿ ಮಾಡಿ, ಕ್ಷೇತ್ರಕ್ಕೆ ಸಂಬಂಧಿಸಿದ ವಿವಿಧ ಪ್ರಮುಖ ರೈಲ್ವೆ ಯೋಜನೆಗಳ ಪ್ರಗತಿ ಕುರಿತು ಮಹತ್ವದ ಸಭೆ ನಡೆಸಿದರು.

ಸಭೆಯಲ್ಲಿ ರಾಯಚೂರು ಲೋಕಸಭಾ ಕ್ಷೇತ್ರದ ರೈಲ್ವೆ ಸಂಪರ್ಕವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಹಲವು ಪ್ರಮುಖ ವಿಷಯಗಳ ಕುರಿತು ವಿವರವಾಗಿ ಚರ್ಚಿಸಲಾಯಿತು. ಪ್ರಮುಖವಾಗಿ:

ರಾಯಚೂರು-ಗಿಣಿಗೇರಾ ರೈಲು ಮಾರ್ಗದ ಕಾಮಗಾರಿಯ ಪ್ರಗತಿ ಹಾಗೂ ಮುಂದಿನ ಹಂತದ ಕಾಮಗಾರಿಗಳನ್ನು ತ್ವರಿತಗೊಳಿಸುವ ಕುರಿತು ಚರ್ಚೆ.

ಗದಗವಾಡಿ ರೈಲು ಮಾರ್ಗದ ಕಾಮಗಾರಿಯನ್ನು ವೇಗಗೊಳಿಸಿ, ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವ ಕುರಿತು ಅಧಿಕಾರಿಗಳೊಂದಿಗೆ ಸಮಾಲೋಚನೆ.

ಪ್ರಸ್ತಾವಿತ ಆಲಮಟ್ಟಿ-ಯಾದಗಿರಿ ರೈಲು ಮಾರ್ಗಕ್ಕೆ ಗುತ್ತಿಗೆದಾರರಿಂದ ಅಂತಿಮ ಸ್ಥಳ ಸಮೀಕ್ಷೆ () ಕಾರ್ಯವನ್ನು ಶೀಘ್ರವಾಗಿ ಪ್ರಾರಂಭಿಸುವಂತೆ ಒತ್ತಾಯ.



ರೈಲ್ವೆ ಗೂಡ್ಸ್ ಶೆಡ್ ಸ್ಥಳಾಂತರ ಕುರಿತು ಚರ್ಚಿಸಿ, ಇದರಿಂದ ರೈಲ್ವೆ ಕಾರ್ಯಾಚರಣೆ ಹಾಗೂ ಸ್ಥಳೀಯ ಜನರಿಗೆ ಉಂಟಾಗುವ ಅನುಕೂಲಅನಾನುಕೂಲಗಳ ಬಗ್ಗೆ ಅಧಿಕಾರಿಗಳೊಂದಿಗೆ ಸಮಾಲೋಚನೆ.

ಕ್ಷೇತ್ರದ ರೈಲ್ವೆ ಯೋಜನೆಗಳಿಗೆ ಅಗತ್ಯವಿರುವ ಮುಂದಿನ ಹಂತದ ಆಡಳಿತಾತ್ಮಕ ಹಾಗೂ ತಾಂತ್ರಿಕ ಪ್ರಕ್ರಿಯೆಗಳನ್ನು ತ್ವರಿತಗೊಳಿಸುವಂತೆ ಮನವಿ.

ಬಾಕಿ ಇರುವ ಕಾಮಗಾರಿಗಳಲ್ಲಿ ವಿಳಂಬವಾಗದಂತೆ ಸಂಬಂಧಿಸಿದ ಅಧಿಕಾರಿಗಳು ನಿರಂತರವಾಗಿ ಮೇಲ್ವಿಚಾರಣೆ ನಡೆಸುವಂತೆ ಸೂಚನೆ.

ಸಭೆಯಲ್ಲಿ ಚರ್ಚಿಸಲಾದ ಪ್ರಮುಖ ಯೋಜನೆಗಳ ಕುರಿತು ರೈಲ್ವೆ ಇಲಾಖೆಯ ಹಿರಿಯ ಅಧಿಕಾರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಕಾಮಗಾರಿಗಳನ್ನು ತ್ವರಿತಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ರಾಯಚೂರು ಹಾಗೂ ಯಾದಗಿರಿ ಸುತ್ತಮುತ್ತಲಿನ ಪ್ರದೇಶಗಳ ರೈಲ್ವೆ ಸಂಪರ್ಕವನ್ನು ಸುಧಾರಿಸುವುದು ಪ್ರಯಾಣಿಕರ ಸಂಚಾರಕ್ಕೆ ಮಾತ್ರವಲ್ಲದೆ, ಕೃಷಿ ಉತ್ಪನ್ನಗಳ ಸಾಗಣೆ, ಕೈಗಾರಿಕಾ ಚಟುವಟಿಕೆ, ವ್ಯಾಪಾರ ವಹಿವಾಟು ಹಾಗೂ ಉದ್ಯೋಗಾವಕಾಶಗಳ ವೃದ್ಧಿಗೂ ಸಹಕಾರಿಯಾಗಲಿದೆ. ಪ್ರಮುಖ ರೈಲ್ವೆ ಯೋಜನೆಗಳು ಪೂರ್ಣಗೊಂಡಲ್ಲಿ ರಾಯಚೂರು ಭಾಗದ ಸಮಗ್ರ ಆರ್ಥಿಕ ಮತ್ತು ಕೈಗಾರಿಕಾ ಅಭಿವೃದ್ಧಿಗೆ ಮತ್ತಷ್ಟು ಉತ್ತೇಜನ ದೊರೆಯಲಿದೆ.

ರಾಯಚೂರು ಲೋಕಸಭಾ ಕ್ಷೇತ್ರದ ರೈಲ್ವೆ ಮೂಲಸೌಕರ್ಯ ಅಭಿವೃದ್ಧಿಗೆ ಕೇಂದ್ರ ಹಾಗೂ ರೈಲ್ವೆ ಇಲಾಖೆಯ ಮಟ್ಟದಲ್ಲಿ ನಿರಂತರವಾಗಿ ಪ್ರಯತ್ನಿಸಲಾಗುತ್ತಿದ್ದು, ಬಾಕಿ ಇರುವ ಯೋಜನೆಗಳಿಗೆ ವೇಗ ನೀಡಲು ಮುಂದೆಯೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಲಾಗುವುದು ಎಂದು ಸಂಸದ ಶ್ರೀ ಜಿ. ಕುಮಾರ ನಾಯಕ ತಿಳಿಸಿದ್ದಾರೆ.

ಮೂರನೇಯ ಪುಟಕ್ಕೆ



ಬರ, ಬೆಳೆನಷ್ಟ-ನೀರಿನ ಸಮಸ್ಯೆ: ಸೆ.28ರಂದು ರೈತರ ಧರಣಿ

ರಾಯಚೂರು, ಸೆ.25: ಮುಂಗಾರು ಮಳೆ ಕೊರತೆಯಿಂದ ಜಿಲ್ಲೆಯ ರೈತರು ಬೆಳೆನಷ್ಟ ಹಾಗೂ ನೀರಿನ ಸಮಸ್ಯೆಯಿಂದ ಸಂಕಷ್ಟಕ್ಕೆ ಸಿಲುಕಿದ್ದು, ಸರ್ಕಾರ ಕೂಡಲೇ ವೈಜ್ಞಾನಿಕ ಬೆಳೆನಷ್ಟ ಸಮೀಕ್ಷೆ ನಡೆಸಿ ಸೂಕ್ತ ಪರಿಹಾರ ನೀಡಬೇಕು ಹಾಗೂ ಕೃಷಿಗೆ ಸಮರ್ಪಕ ನೀರು ಮತ್ತು ವಿದ್ಯುತ್ ಪೂರೈಕೆ ಮಾಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಒತ್ತಾಯಿಸಿದೆ.

ರೈತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಸೆ.28ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ರಾಜ್ಯ ಗೌರವಾಧ್ಯಕ್ಷ ಚಾಮರಾಸ ಮಾಲಿಪಾಟೀಲ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಳೆಯ ಅಭಾವದಿಂದ ತೊಗರಿ, ಹತ್ತಿ, ಭತ್ತ, ಸಜ್ಜೆ ಸೇರಿದಂತೆ ವಿವಿಧ ಬೆಳೆಗಳು ಹಾನಿಗೊಳಗಾಗಿವೆ. ಜಿಲ್ಲೆಯ ಬರಪೀಡಿತ ಪ್ರದೇಶಗಳನ್ನು ಸಮಗ್ರವಾಗಿ ಗುರುತಿಸಿ ಎಲ್ಲ ಅರ್ಹ ರೈತರಿಗೆ ಬೆಳೆನಷ್ಟ ಪರಿಹಾರ ನೀಡಬೇಕು. ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವು ಒದಗಿಸಲು ಸರ್ಕಾರ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ರಾಜ್ಯದಲ್ಲಿ 178 ತಾಲೂಕುಗಳಲ್ಲಿ ಬರದ ಪರಿಸ್ಥಿತಿ ಇದ್ದರೂ 101 ತಾಲೂಕುಗಳನ್ನು ಮಾತ್ರ ಬರಪೀಡಿತವೆಂದು ಘೋಷಿಸಲಾಗಿದೆ. ಬರದ ಪರಿಣಾಮ ಎದುರಿಸುತ್ತಿರುವ ಉಳಿದ

ಮೂರನೇಯ ಪುಟಕ್ಕೆ

ಎಸ್ಐಆರ್ ಕೈಬಿಟ್ಟು ಮುಖ್ಯ ಚುನಾವಣಾ ಆಯುಕ್ತರನ್ನು ವಜಾಗೊಳಿಸಲು ಒತ್ತಾಯಿಸಿ ಪ್ರತಿಭಟನೆ

ರಾಯಚೂರು : ಪ್ರಕ್ರಿಯೆಯನ್ನು ರದ್ದುಗೊಳಿಸಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ ಕುಮಾರ ಅವರನ್ನು ವಜಾಗೊಳಿಸಲು ಆಗ್ರಹಿಸಿ ಸಿಪಿಐ(ಎಂಎಲ್) ಲಿಬರೇಶನ್ ರಾಯಚೂರು ತಾಲೂಕು ಸಮಿತಿಯಿಂದ ಶುಕ್ರವಾರ ಪ್ರತಿಭಟನೆ ನಡೆಯಿತು

ನಗರದ ಟಿಪ್ಪು ಸುಲ್ತಾನ್ ಉದ್ಯಾನದ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿ ಮುಖ್ಯ ಚುನಾವಣೆ ಆಯುಕ್ತರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಮುಖ್ಯ ಚುನಾವಣಾ ಆಯುಕ್ತರ ಕಚೇರಿಯು ತನ್ನ ಘನತೆಯನ್ನು ಕಳೆದುಕೊಂಡಿದೆ ಎಂಬುದಕ್ಕೆ ಇಂಡಿಯನ್ ಎಕ್ಸ್ ಪ್ರೆಸ್ ವರದಿಯೇ ಸಾಕ್ಷಿಯಾಗಿದೆ. ಆ ವರದಿಯಲ್ಲಿ ಮುಖ್ಯ ಚುನಾವಣೆ ಆಯುಕ್ತರಿಗೆ, ಇಬ್ಬರು ಆಯುಕ್ತರು ಲೋಪದೋಷಗಳ ಬಗ್ಗೆ 14 ಬಾರಿ ಪತ್ರ ಬರೆದು ಆಕ್ಷೇಪಣೆ ಸಲ್ಲಿಸಿದ್ದಾರೆ. ಆದರೆ ಸ್ಪಂದಿಸದೇ ಏಕ ಪಕ್ಷೀಯವಾಗಿ, ಸರ್ವಾಧಿಕಾರಿಯಂತೆ ವರ್ತಿಸುತ್ತಿದ್ದಾರೆ. ಇದು ಸಂವಿಧಾನ ವಿರೋಧಿಯಾಗಿದೆ ಎಂದು ಆರೋಪಿಸಿದರು

ಎಸ್ ಐ ಆರ್ ಅನ್ನು ವಿರೋಧ ಪಕ್ಷಗಳ ನಾಯಕರು, ಪ್ರಗತಿಪರ ಸಂಘಟಕರು, ಹೋರಾಟಗಾರರು ವಿರೋಧಿಸಿದರೂ ಕಿವಿಗೊಡದೇ ನಿಷ್ಪಕ್ಷಪಾತವಾಗಿ ಎಸ್ಐಆರ್ ಮಾಡುವುದಾಗಿ ಭರವಸೆ ನೀಡುತ್ತಲೇ ಕೋಟ್ಯಾಂತರ ಮತದಾರರ ಹೆಸರು ತೆಗೆದುಹಾಕಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಪ್ರತಿಭಟನೆಯಲ್ಲಿ ಪಕ್ಷದ ತಾಲೂಕ ಕಾರ್ಯದರ್ಶಿ ಅಜೀಜ್ ಜಾಗೀರ್ದಾರ್, ಮುಖಂಡರಾದ ಭೀಮಯ್ಯ, ಖಾದರ್ ಅಹ್ಮದ್, ನಿಸ್ಸಾರ್, ಜಗದೀಶ್, ಮಹೇಂದ್ರ, ಹನೀಫ್ ಅಬಕಾರಿ, ಎಲ್ಲಪ್ಪ, ವೀರೇಶ್, ಸಣ್ಣ ನರಸಪ್ಪ, ಮಾರಣ್ಣ ಇದ್ದರು.

ರಿಮ್ಸ್, ಓಪೆಕ್ ಆಸ್ಪತ್ರೆ ಸಿಬ್ಬಂದಿಗೆ ಮೂರು ತಿಂಗಳಿಂದ ವೇತನವಿಲ್ಲ



ರಾಯಚೂರು,ಸೆ.25-

ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ರಿಮ್ಸ್) ಹಾಗೂ ಓಪೆಕ್ ಆಸ್ಪತ್ರೆಗಳ ಸಿಬ್ಬಂದಿಗೆ ಕಳೆದ ಮೂರು ತಿಂಗಳಿಂದ ವೇತನ ಪಾವತಿಯಾಗದಿರುವುದು ಬೆಳಕಿಗೆ ಬಂದಿದೆ. ಅನುದಾನ ಬಿಡುಗಡೆಯಾಗದ ಹಿನ್ನೆಲೆಯಲ್ಲಿ ವೇತನ ಪಾವತಿಸಲು ಆರ್ಥಿಕ ಮುಗ್ಗಟ್ಟು ಎದುರಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ರಿಮ್ಸ್ ನಲ್ಲಿ ಸುಮಾರು 80ಕ್ಕೂ ಅಧಿಕ ಸಿಬ್ಬಂದಿ ಸೇರಿದಂತೆ ರಿಮ್ಸ್ ಆಸ್ಪತ್ರೆಯಲ್ಲಿ ಹೊರಗುತ್ತಿಗೆ ಹಾಗೂ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗೂ ಮೂರು ತಿಂಗಳಿಂದ ವೇತನ ಪಾವತಿಯಾಗಿಲ್ಲ. ವೇತನಕ್ಕಾಗಿ ಕಾಯುತ್ತಿರುವ ಸಿಬ್ಬಂದಿ ಇದೀಗ ಸರ್ಕಾರದ ಭರವಸೆಯ ನಿರೀಕ್ಷೆಯಲ್ಲಿದ್ದಾರೆ.

ಅನುದಾನ ಬಿಡುಗಡೆಯಲ್ಲಿ ವಿಳಂಬವಾಗಿರುವುದರಿಂದ ರಿಮ್ಸ್ ಮಾತ್ರವಲ್ಲದೆ ಹಾವೇರಿ ಸೇರಿದಂತೆ ರಾಜ್ಯದ ಹಲವು ವೈದ್ಯಕೀಯ ಸಂಸ್ಥೆಗಳಲ್ಲೂ ಸಿಬ್ಬಂದಿ ವೇತನ ಪಾವತಿಗೆ ಆರ್ಥಿಕ ಸಮಸ್ಯೆ ಎದುರಾಗಿದೆ ಎಂದು ತಿಳಿದುಬಂದಿದೆ. ಮಾಸಿಕ ವೇತನ ಪಾವತಿಗೆ ಕಂತಿನ ಪ್ರಸ್ತಾವನೆ ಸಲ್ಲಿಸುವ ಸಂದರ್ಭದಲ್ಲಿ ಬಳಕೆ ಪ್ರಮಾಣ ಪತ್ರದೊಂದಿಗೆ ಆರ್ಥಿಕ ಇಲಾಖೆಯ ಅನುಮೋದನೆ ಪಡೆಯಬೇಕು. ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದಿರುವ ಸಿಬ್ಬಂದಿಗೆ ಮಾತ್ರ ವೇತನ ಪಾವತಿಸಬೇಕು ಎಂದು ವೈದ್ಯಕೀಯ ಶಿಕ್ಷಣ ಇಲಾಖೆ ಸೂಚಿಸಿದೆ.

ಅನುಮೋದನೆ ಇಲ್ಲದೆ ಹೆಚ್ಚುವರಿ ಸಿಬ್ಬಂದಿಯನ್ನು ನೇಮಿಸಿಕೊಂಡು ವೇತನ ಪಾವತಿಸಿದರೆ ಸಂಬಂಧಿಸಿದ ವೈದ್ಯಕೀಯ ಸಂಸ್ಥೆಗಳ ಮುಖ್ಯಸ್ಥರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂಬ ಎಚ್ಚರಿಕೆಯನ್ನು ವೈದ್ಯಕೀಯ ಶಿಕ್ಷಣ ಇಲಾಖೆ ನೀಡಿದೆ.

ಕರ್ನಾಟಕ ಆರ್ಥಿಕ ಸಂಹಿತೆಯನ್ವಯ ಯಾವ ಉದ್ದೇಶಕ್ಕಾಗಿ ಅನುದಾನ ಮಂಜೂರಾಗಿದೆಯೋ ಅದೇ ಉದ್ದೇಶಕ್ಕೆ ಅನುದಾನ ಬಳಕೆ ಮಾಡಿಕೊಂಡು ಬಳಕೆ ಪ್ರಮಾಣ ಪತ್ರ ಸಲ್ಲಿಸಬೇಕು. ಇಲ್ಲವಾದಲ್ಲಿ ಮುಂದಿನ ವಾರ್ಷಿಕ ಅನುದಾನ ಬೇಡಿಕೆಯನ್ನು ಪರಿಗಣಿಸಲಾಗುವುದಿಲ್ಲ ಎಂದು ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನ ಕಾರ್ಯದರ್ಶಿಗಳು ಸೂಚಿಸಿದ್ದಾರೆ.

ಈ ನಡುವೆ, ಅನುಮೋದನೆ ಪಡೆದಿರುವ ಸಿಬ್ಬಂದಿಗೆ ವೇತನ ಬಿಡುಗಡೆಯಾಗದೇ ಇರುವಾಗ ಹೆಚ್ಚುವರಿ ಸಿಬ್ಬಂದಿಯನ್ನು ನೇಮಿಸಿಕೊಂಡಿರುವುದು ಮತ್ತೊಂದು ಸಮಸ್ಯೆಗೆ ಕಾರಣವಾಗಿದೆ. ಮೂರು ತಿಂಗಳ ವೇತನ ಬಾಕಿ ಇರುವ ಹಿನ್ನೆಲೆಯಲ್ಲಿ ಸಿಬ್ಬಂದಿ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಸರ್ಕಾರ ಕೂಡಲೇ ವೇತನ ಬಿಡುಗಡೆ ಮಾಡಬೇಕು ಎಂಬ ನಿರೀಕ್ಷೆಯಲ್ಲಿದ್ದಾರೆ.

ಬಳ್ಳಾರಿ-ಕೊಪ್ಪಳ ಅಧ್ಯಾಪಕರ, ವಿದ್ಯಾರ್ಥಿಗಳ ಸಮಸ್ಯೆ ಕುರಿತು ದೂರು



ಬಳ್ಳಾರಿ,ಸೆ.25-

ಕರ್ನಾಟಕ ಸರ್ಕಾರಿ ಕಾಲೇಜು ಅಧ್ಯಾಪಕರ ಸಂಘದ ಬಳ್ಳಾರಿ - ಕೊಪ್ಪಳ ವಿಶ್ವವಿದ್ಯಾಲಯಗಳ ವಲಯ ಅಧ್ಯಕ್ಷರಾದ ಡಾ.ಕರಿಗೂಳಿ ಯವರ ನೇತೃತ್ವದಲ್ಲಿ, ಸಂಘದ ವತಿಯಿಂದ ಮಾನ್ಯ ಉನ್ನತ ಶಿಕ್ಷಣ ಸಚಿವರಾದ ಸನ್ಮಾನ್ಯ ಶ್ರೀ ಬಸವರಾಜ ರಾಯರೆಡ್ಡಿ ರವರನ್ನು ಕೊಪ್ಪಳ ಜಿಲ್ಲೆಯ ಯಲಬುರ್ಗಾದ ಗೃಹಕಚೇರಿಯಲ್ಲಿದ್ದು ಭೇಟಿಮಾಡಿ, ಗೌರವ ಸನ್ಮಾನ ಮಾಡಲಾಯಿತು, ಇದೇ ಸಂದರ್ಭದಲ್ಲಿ ಅಧ್ಯಾಪಕರ ಹಾಗೂ ವಿದ್ಯಾರ್ಥಿಗಳ ಸಮಸ್ಯೆಗಳ ಕುರಿತು ಮನವಿ ಪತ್ರ ನೀಡಿ ಚರ್ಚಿಸಲಾಯಿತು,

ಸ್ಪಂದಿಸಿದ ಸಚಿವರು ನಿಯಮಾನುಸಾರ ಪರಿಶೀಲಿಸಿ ಶೀಘ್ರ ಪರಿಹಾರಕ್ಕೆ ಸೂಚಿಸಲಾಗುವುದು ಎಂದು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ, ವಲಯ ಕಾರ್ಯದರ್ಶಿಗಳಾದ ಡಾ.ಶೋಭರಾಣಿ, ಬಳ್ಳಾರಿ ವಿವಿ ಯ ಹಿರಿಯ ಪ್ರಾಧ್ಯಾಪ'ಕ'ರ'ಂಗ'ಳಾದ', ಡಾ.ಹೊನ್ನೂರಲಿ, ಡಾ.ಹೆಚ್. ರಾಮಕೃಷ್ಣ, ಡಾ.ಜ್ಞಾನ ಪ್ರಸುನಾಂಬ, ಡಾ.ಮಂಜುನಾಥ್, ಡಾ.ದೊಡ್ಡ ಬಸವರಾಜ ಹಾಗೂ ಪ್ರಾಚಾರ್ಯರಾದ ಡಾ.ಕೆಂಚರೆಡ್ಡಿ ಶಂಕರಯ್ಯ, ಹನುಮೇಶ್ ಶಶಿಕುಮಾರ್,ಧಾರವಾಡ ವಲಯದ ಮೋತಿಲಾಲ್ ರಾಠೋಡ್ ಹಾಗೂ ಅತಿಥಿ ಉಪನ್ಯಾಸಕರಾದ ಹನುಮನಗೌಡ ರವರು ಉಪಸ್ಥಿತರಿದ್ದರು.

ಪತ್ರಕರ್ತರ ಒತ್ತಡಕ್ಕೆ ಕ್ರೀಡಾಸ್ಫೂರ್ತಿ ಮದ್ದು

ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವದ ಕೇರಂ ಕ್ರೀಡಾಕೂಟಕ್ಕೆ ಚಾಲನೆ

ರಾಯಚೂರು,ಸೆ.25

ಸುದ್ದಿಯ ಹುಡುಕಾಟದಲ್ಲಿ ಸದಾ ನಿರತರಾಗಿರುವ ಪತ್ರಕರ್ತರಿಗೆ ಕ್ರೀಡಾಕೂಟಗಳು ಹೊಸ ಚೈತನ್ಯ ಹಾಗೂ ಉತ್ಸಾಹ ನೀಡಲಿವೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಸಮಿತಿ ಸದಸ್ಯ ಬಸವರಾಜ ನಾಗಡದಿನ್ನಿ ಹೇಳಿದರು.

ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನ ಬೆಳ್ಳಿ ಮಹೋತ್ಸವದ ಅಂಗವಾಗಿ ನಗರದ ಪತ್ರಿಕಾ ಭವನದ ಮೇಲ್ಮಹಡಿ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಕೇರಂ ಕ್ರೀಡಾಕೂಟಕ್ಕೆ ಚೀಟಿ ಎತ್ತಿ ಕೇರಂ ಆಡುವ ಮೂಲಕ ಅವರು ಚಾಲನೆ ನೀಡಿ ಮಾತನಾಡಿದರು.

ಗಿಲ್ಡ್‌ನ ಬೆಳ್ಳಿ ಮಹೋತ್ಸವದ ಅಂಗವಾಗಿ ಆಯೋಜಿಸಿರುವ ವಿವಿಧ ಕಾರ್ಯಕ್ರಮಗಳು ಪತ್ರಕರ್ತರ ವೃತ್ತಿಜೀವನದ ಒತ್ತಡದ ನಡುವೆ ಪರಸ್ಪರ ಒಡನಾಟ ಹಾಗೂ ಕ್ರೀಡಾಸ್ಫೂರ್ತಿ ಬೆಳೆಸಲು ಸಹಕಾರಿಯಾಗಿವೆ. ಪತ್ರಕರ್ತರು ನಡೆದು ಬಂದ ಹಾದಿಯನ್ನು ಸ್ಮರಿಸುವ ಇಂತಹ ಕಾರ್ಯಕ್ರಮಗಳು ಶ್ಲಾಘನೀಯ ಎಂದರು.



ಗಿಲ್ಡ್‌ನ ನಿಕಟಪೂರ್ವ ಸದಸ್ಯ ಶಿವಮೂರ್ತಿ ಹಿರೇಮಠ ಮಾತನಾಡಿ, ಬೆಳ್ಳಿ ಮಹೋತ್ಸವದ ಅಂಗವಾಗಿ ಪತ್ರಕರ್ತರಷ್ಟೇ ಅಲ್ಲದೆ ಪದವಿ ವಿದ್ಯಾರ್ಥಿಗಳಿಗೂ ವಿವಿಧ ಚಟುವಟಿಕೆಗಳಲ್ಲಿ ಅವಕಾಶ ನೀಡಿರುವುದು ಉತ್ತಮ ಬೆಳವಣಿಗೆ. ಎಲ್ಲರೂ ಕ್ರೀಡಾಸ್ಫೂರ್ತಿಯಿಂದ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆರ್. ಗುರುನಾಥ್ ಮಾತನಾಡಿ, ಸುದ್ದಿಯ ಹುಡುಕಾಟದಲ್ಲಿ ನಿರಂತರವಾಗಿ ತೊಡಗಿರುವ ಪತ್ರಕರ್ತರಿಗೆ ಇಂತಹ ಕ್ರೀಡಾಕೂಟಗಳು ಸ್ಫೂರ್ತಿ ನೀಡಲಿವೆ. ನಗರದ ಎಲ್ಲ ಪತ್ರಕರ್ತರು ಉತ್ಸಾಹದಿಂದ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯ ಜಾಗಟಗಲ್ ಮಾತನಾಡಿ, ಬೆಳ್ಳಿ ಮಹೋತ್ಸವದ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಪತ್ರಕರ್ತರು ಕ್ರೀಡಾಸ್ಫೂರ್ತಿಯಿಂದ ಪಾಲ್ಗೊಳ್ಳಬೇಕು ಎಂದರು.

ಗಿಲ್ಡ್ ಕಾರ್ಯದರ್ಶಿ ವೆಂಕಟೇಶ ಹೂಗಾರ, ಜಂಟಿ ಕಾರ್ಯದರ್ಶಿ ಶ್ರೀಕಾಂತ್ ಸಾವೂರ ಸೇರಿದಂತೆ ಹಲವು ಪತ್ರಕರ್ತರು ಉಪಸ್ಥಿತರಿದ್ದರು.

ರಾಜ್ಯ ಸರಕಾರದ ವಿರುದ್ಧ ಬಿಜೆಪಿಯಿಂದ ಅಣಕು ಶವಯಾತ್ರೆ

ಬೀದರ್,ಸೆ.25-

ರಾಜ್ಯ ಸರ್ಕಾರದ ಆರ್ಥಿಕ ಸ್ಥಿತಿಯನ್ನು ಪ್ರಶ್ನಿಸಿ ಹಾಗೂ ಕಾಂಗ್ರೆಸ್ ಸರ್ಕಾರದ ವಿರುದ್ಧ ಪ್ರತಿಭಟನೆಯಾಗಿ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಗುರುವಾರ ಅಣಕು ಶವಯಾತ್ರೆ ನಡೆಸಿದರು.

ನಗರದ ಅಂಬೇಡ್ಕರ್ ವೃತ್ತದಲ್ಲಿ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಪ್ರತಿಭಟನೆ ನಡೆಸಿದರು. ಈ ವೇಳೆ ಕಾರ್ಯಕರ್ತರೊಬ್ಬರನ್ನು ಹೆಗಲ ಮೇಲೆ ಹೊತ್ತು ಸರ್ಕಾರದ ಅಣಕು ಶವಯಾತ್ರೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಬಿಜೆಪಿ ಜಿಲ್ಲಾ ಅಧ್ಯಕ್ಷ ಸೋಮನಾಥ್ ಪಾಟೀಲ್, ರಾಜ್ಯದ ಕಾಂಗ್ರೆಸ್ ಸರ್ಕಾರ ಆರ್ಥಿಕ ಸಂಕಷ್ಟದಲ್ಲಿದ್ದು, ಅಭಿವೃದ್ಧಿ ಕಾರ್ಯಗಳು ಸ್ಥಗಿತಗೊಂಡಿವೆ ಎಂದು ಆರೋಪಿಸಿದರು. ರೈತರು, ಮಹಿಳೆಯರು, ಯುವಕರು ಹಾಗೂ ಜನಸಾಮಾನ್ಯರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸುತ್ತಿಲ್ಲ ಎಂದೂ ಅವರು ದೂರಿದರು.

ರಾಜ್ಯ ಸರ್ಕಾರದ ಸಾಲದ ಪ್ರಮಾಣ ಹೆಚ್ಚಾಗಿದ್ದು, ಹಣಕಾಸು ಇಲಾಖೆಯ ಪತ್ರವೇ ಆರ್ಥಿಕ ಸ್ಥಿತಿಯ ಬಗ್ಗೆ ಎಚ್ಚರಿಕೆ ನೀಡಿದೆ ಎಂದು



ಪಾಟೀಲ್ ಹೇಳಿದರು. ಸರ್ಕಾರವು ಲಕ್ಷಾಂತರ ಕೋಟಿ ರೂಪಾಯಿ ಸಾಲ ಮಾಡಿದ್ದು, ರಾಜ್ಯದ ಒಟ್ಟು ಸಾಲದ ಮೊತ್ತ 8 ಲಕ್ಷ ಕೋಟಿ ರೂಪಾಯಿಗೆ ತಲುಪಿದೆ ಎಂದು ಆರೋಪಿಸಿದರು.

ಬರ ಪರಿಹಾರ ಸೇರಿದಂತೆ ವಿವಿಧ ಯೋಜನೆಗಳಿಗೆ ಹಣದ ಕೊರತೆ ಇದೆ ಎಂದು ಹಣಕಾಸು ಇಲಾಖೆ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದರೂ, ಸುಮಾರು 32 ಸಾವಿರ ಕೋಟಿ ರೂ. ಮೌಲ್ಯದ ಹೊಸ ಯೋಜನೆಗಳನ್ನು ಸರ್ಕಾರ ಘೋಷಿಸಿದೆ. ರಸ್ತೆ ಅಭಿವೃದ್ಧಿಗೆ 10 ಸಾವಿರ ಕೋಟಿ ರೂ. ನೀಡುವುದಾಗಿ ಹೇಳಿರುವುದೂ ವಾಸ್ತವ ಸ್ಥಿತಿಗೆ ವಿರುದ್ಧವಾಗಿದೆ ಎಂದು ಅವರು ಟೀಕಿಸಿದರು. ವಿಕಲಚೇತನರ ಪಿಂಚಣಿ, ವೃದ್ಧಾಪ್ಯ ವೇತನ ಹಾಗೂ ವಿಧವಾ ವೇತನ ಸೇರಿದಂತೆ ಹಲವು ಸಾಮಾಜಿಕ ಭದ್ರತಾ ಯೋಜನೆಗಳ ಹಣ ಜಮೆಯಾಗುತ್ತಿಲ್ಲ ಎಂದು ಆರೋಪಿಸಿದ ಅವರು, ಶಿಕ್ಷಣ ಇಲಾಖೆಯಲ್ಲಿ ಶಾಲಾ ಮಕ್ಕಳಿಗೆ ವಿತರಿಸಿರುವ ಶೂ ಮತ್ತು ಸಾಕ್ಸ್ ಗಳ ಗುಣಮಟ್ಟದ ಬಗ್ಗೆ ಭ್ರಷ್ಟಾಚಾರದ ಅನುಮಾನವಿದೆ ಎಂದರು. ಶಿಕ್ಷಕರ ನೇಮಕಾತಿ ಹಾಗೂ ಸಂಬಳ ಪಾವತಿಗೂ ಹಣಕಾಸಿನ ಸಮಸ್ಯೆ ಎದುರಾಗಿದೆ ಎಂದು ಅವರು ದೂರಿದರು.

ರಾಜ್ಯದ ಹಣಕಾಸಿನ ನೈಜ ಸ್ಥಿತಿಯನ್ನು ಸರ್ಕಾರ ಸಾರ್ವಜನಿಕರ ಮುಂದೆ ಬಹಿರಂಗಪಡಿಸಬೇಕು. ಮುಖ್ಯಮಂತ್ರಿ ರಾಜ್ಯದ ಆರ್ಥಿಕ ಪರಿಸ್ಥಿತಿಯ ಕುರಿತು ಶ್ವೇತಪತ್ರ ಬಿಡುಗಡೆ ಮಾಡಬೇಕು ಎಂದು ಸೋಮನಾಥ್ ಪಾಟೀಲ್ ಆಗ್ರಹಿಸಿದರು.

ಈ ಸಂದರ್ಭದಲ್ಲಿ ರಾಜಶೇಖರ್ ನಾಗಮೂರ್ತಿ, ಬಾಬುವಾಲಿ, ಬಾಬುರಾವ್ ಕಾರುಬಾರಿ, ರಾಜರೆಡ್ಡಿ, ಬಸವರಾಜ್ ಪವಾರ್, ಮಹೇಶ್ವರ್ ಸ್ವಾಮಿ, ರಾಜಕುಮಾರ್ ಪಾಟೀಲ್ ನೇಮತಾಬಾದ್, ರಾಜಕುಮಾರ್ ಚಿದ್ರಿ, ಸಂಗಮೇಶ್ ನಾಸಿಗಾರ್ ಸೋಮಶೇಖರ್ ಪಾಟೀಲ್ ಗಾದಗಿ, ಶಶಿ ಹೊಸಳ್ಳಿ, ದೀಪಕ್ ಗಾದಗೆ, ರಾಜೇಂದ್ರ ಪೂಜಾರಿ, ಅಶೋಕಕುಮಾರ್ ಕರಂಜಿ, ಸಂಗಮೇಶ್ ಗುಮ್ಮೆ, ರೋಷನ್ ವರ್ಮಾ, ಸುನೀಲ್ ಗೌಳಿ, ವಿಶ್ವನಾಥ್ ಪಾಟೀಲ್ ಮುಗದಾಳ್, ಚಂದು ಪಾಟೀಲ್, ಗುರುನಾಥ್ ಜ್ಯಾಂತಿಕರ್ ಭೋಷಣ್ ಪಾಠಕ್, ವಿಕ್ರಮ್ ಮುದಾಳೆ, ಮಹೇಶ್, ನವೀನ್ ಚಿದ್ರೆ, ನರೇಶ್ ಗೌಳಿ, ವಿರಯ್ಯ ಸ್ವಾಮಿ, ಗೋಪಾಲ್, ಲುಂಬಿನಿ ಗೌತಮ್, ಹಣಮಂತ್ ಬುಳ್ಳಾ, ಶ್ರೀನಿವಾಸ್ ಚೌಧರಿ, ಗಣೇಶ್ ಭೋಸ್ಲೆ ಹಾಗೂ ಬಸವರಾಜ್ ಮೂಲಗೆ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಎನ್ನೆಸ್ಸೆಸ್ ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ ಬೆಳೆಸುತ್ತದೆ: ಡಾ. ರಾಜಶೇಖರ ಬೀರನಳ್ಳಿ

ಕಲಬುರಗಿ,ಸೆ.25-

ರಾಷ್ಟ್ರೀಯ ಸೇವಾ ಯೋಜನೆ (ಎನ್ನೆಸ್ಸೆಸ್) ಕೇವಲ ಸಮಾಜ ಸೇವೆಯ ಕಾರ್ಯಕ್ರಮವಲ್ಲ; ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ, ಶಿಸ್ತು, ಜವಾಬ್ದಾರಿ, ನಾಯಕತ್ವ ಹಾಗೂ ದೇಶಭಕ್ತಿಯನ್ನು ಬೆಳೆಸುವ ಮಹತ್ವದ ಚಳವಳಿಯಾಗಿದೆ ಎಂದು ಹೈಕ ಶಿಕ್ಷಣ ಸಂಸ್ಥೆಯ ಎಂ.ಎಸ್. ಇರಾಣಿ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ರಾಜಶೇಖರ ಬೀರನಳ್ಳಿ ಹೇಳಿದರು.

ನಗರದ ಎಂ.ಎಸ್. ಇರಾಣಿ ಪದವಿ ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಘಟಕಗಳ ವತಿಯಿಂದ ಆಯೋಜಿಸಿದ್ದ ಎನ್ನೆಸ್ಸೆಸ್ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

''ನಾನಲ್ಲ, ನೀನು'' ಎಂಬ ಸೇವಾ ಮನೋಭಾವವನ್ನು



ವಿದ್ಯಾರ್ಥಿಗಳಲ್ಲಿ ಬೆಳೆಸುವುದು ಎನ್ನೆಸ್ಸೆಸ್‌ನ ಪ್ರಮುಖ ಉದ್ದೇಶವಾಗಿದೆ. ಸಮಾಜದಿಂದ ಪಡೆಯುವುದಕ್ಕಿಂತ ಸಮಾಜಕ್ಕೆ ನಾವು ಏನು ಕೊಡುಗೆ ನೀಡಬಹುದು ಎಂಬ ಚಿಂತನೆ ವಿದ್ಯಾರ್ಥಿಗಳಲ್ಲಿ ಮೂಡಿಸುವುದೇ ಯೋಜನೆಯ ಆಶಯವಾಗಿದೆ ಎಂದು ತಿಳಿಸಿದರು.

ಎನ್ನೆಸ್ಸೆಸ್ ವಿದ್ಯಾರ್ಥಿಗಳನ್ನು ಕೇವಲ ಉತ್ತಮ ವಿದ್ಯಾರ್ಥಿಗಳನ್ನಾಗಿ ಮಾತ್ರವಲ್ಲ, ಜವಾಬ್ದಾರಿಯುತ ಮತ್ತು ಉತ್ತಮ ನಾಗರಿಕರನ್ನಾಗಿ ರೂಪಿಸುವ ಕಾರ್ಯ ಮಾಡುತ್ತಿದೆ. ಗಿಡ ನೆಡುವುದು, ಗ್ರಾಮ ಸ್ವಚ್ಛತೆ, ರಕ್ತದಾನ ಜಾಗೃತಿ, ಆರೋಗ್ಯ ಶಿಬಿರ ಹಾಗೂ ಸಾಕ್ಷರತಾ ಕಾರ್ಯಕ್ರಮಗಳಂತಹ ವಿವಿಧ ಸೇವಾ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಹೊಣೆಗಾರಿಕೆಯ ಅರಿವು ಮೂಡುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎನ್ನೆಸ್ಸೆಸ್ ಅ ಘಟಕದ ಕಾರ್ಯಕ್ರಮಾಧಿಕಾರಿ ಡಾ. ಪ್ರಾಣೇಶ ಅವರು ಸಂಸ್ಥಾಪನಾ ದಿನದ ಮಹತ್ವದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಎನ್ನೆಸ್ಸೆಸ್ ಬ ಘಟಕದ ಕಾರ್ಯಕ್ರಮಾಧಿಕಾರಿ ಡಾ. ಶಂಕ್ರೆಪ್ಪ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಪಟ್ಟಣದ ಸ್ವಚ್ಛತೆ ಕಾಪಾಡುವಲ್ಲಿ ಪೌರ ಕಾರ್ಮಿಕರ ಪಾತ್ರ ಮಹತ್ವದ್ದು: ಭಾರತಿ ದಂಡೋತಿ



ಚಿತ್ತಾಪುರ,ಸೆ.25-

ಪಟ್ಟಣದ ಸೌಂದರ್ಯ ಹಾಗೂ ಸ್ವಚ್ಛತೆಯನ್ನು ಕಾಪಾಡುವಲ್ಲಿ ಪೌರ ಕಾರ್ಮಿಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಚಿತ್ತಾಪುರ ಪುರಸಭೆ ಮುಖ್ಯಾಧಿಕಾರಿ ಭಾರತಿ ದಂಡೋತಿ ಹೇಳಿದರು.

ಪಟ್ಟಣದ ಕಿಂಗ್ ಪ್ಯಾಲೇಸ್ ಸಭಾಂಗಣದಲ್ಲಿ ಚಿತ್ತಾಪುರ ಪುರಸಭೆ ವತಿಯಿಂದ ಹಮ್ಮಿಕೊಂಡಿದ್ದ ಪೌರ ಕಾರ್ಮಿಕರ ದಿನಾಚರಣೆ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪೌರ ಕಾರ್ಮಿಕರು ಪ್ರತಿದಿನ ಬೆಳಿಗ್ಗೆ 5 ಗಂಟೆಯಿಂದಲೇ ಕರ್ತವ್ಯಕ್ಕೆ ಹಾಜರಾಗಿ, ಸಾರ್ವಜನಿಕರು ಎಚ್ಚರಗೊಳ್ಳುವ ಮುನ್ನವೇ ಪಟ್ಟಣದ ಪ್ರಮುಖ ಹಾಗೂ ಆಂತರಿಕ ರಸ್ತೆಗಳನ್ನು ಸ್ವಚ್ಛಗೊಳಿಸುತ್ತಾರೆ. ಅವರ ಈ ನಿಸ್ವಾರ್ಥ ಸೇವೆಗೆ ಸಮಾಜ ಕೃತಜ್ಞತೆ ಮತ್ತು ಗೌರವ ಸಲ್ಲಿಸಬೇಕು ಎಂದು ಹೇಳಿದರು. ಪೌರ ಕಾರ್ಮಿಕರು ದುಶ್ಚಟಗಳಿಂದ ದೂರವಿದ್ದು, ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಕೊಡುಗೆ ನೀಡಬೇಕು ಎಂದು ಸಲಹೆ ನೀಡಿದರು.

ಸಮಾರಂಭವನ್ನು ಉದ್ಘಾಟಿಸಿದ ಸಿಪಿಐ ಎಸ್.ಸಿ.ಪಾಟೀಲ್ ಮಾತನಾಡಿ, ಪೌರ ಕಾರ್ಮಿಕರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು. ಜೊತೆಗೆ ಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಿ ಅವರ ಉಜ್ವಲ ಭವಿಷ್ಯ ರೂಪಿಸಬೇಕು ಎಂದು ಕಿವಿಮಾತು ಹೇಳಿದರು.

ಇದೇ ವೇಳೆ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಪೌರ ಕಾರ್ಮಿಕರಿಗೆ ಬಹುಮಾನಗಳನ್ನು ವಿತರಿಸಲಾಯಿತು. ಇದಕ್ಕೂ ಮುನ್ನ ಪುರಸಭೆ ಕಚೇರಿಯಿಂದ ಲಾಡ್ಜಿಂಗ್ ಕ್ರಾಸ್ ವರೆಗೆ ಮೆರವಣಿಗೆ ನಡೆಯಿತು.

371ಜೆ ಅನುದಾನವನ್ನು ಸಾರ್ವಜನಿಕ ವಲಯದ ಅಭಿವೃದ್ಧಿಗೆ ಬಳಸಬೇಕು

ಕಲಬುರಗಿ,ಸೆ.25-

ಕಲ್ಯಾಣ ಕರ್ನಾಟಕ ಪ್ರದೇಶದ ಸಮಗ್ರ ಅಭಿವೃದ್ಧಿಗಾಗಿ ಸಂವಿಧಾನದ 371ಜೆ ಅಡಿಯಲ್ಲಿ ದೊರೆಯುವ ಅವಕಾಶಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು. ಕೆಕೆಆರ್‌ಡಿಬಿ ನಿಧಿಯನ್ನು ಶಿಕ್ಷಣ, ಆರೋಗ್ಯ, ಉದ್ಯೋಗ, ಕೃಷಿ ಹಾಗೂ ಸಾರ್ವಜನಿಕ ವಲಯದ ಮೂಲಸೌಕರ್ಯ ಅಭಿವೃದ್ಧಿಗೆ ಪರಿಣಾಮಕಾರಿಯಾಗಿ ವಿನಿಯೋಗಿಸಬೇಕು ಎಂದು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಹೋರಾಟ ಸಮಿತಿಯ ಪ್ರಧಾನ ಕಾರ್ಯದರ್ಶಿ ಕೆ.ನೀಲಾ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 371ಜೆ ಅನುಷ್ಠಾನಕ್ಕೆ ಸಂಬಂಧಿಸಿದ ಸಚಿವ ಸಂಪುಟ ಉಪಸಮಿತಿಯನ್ನು ಪುನರ್‌ರಚಿಸಿರುವುದನ್ನು ಸಮಿತಿ ಸ್ವಾಗತಿಸುತ್ತದೆ. ಕ್ಯಾಬಿನೆಟ್ ದರ್ಜೆಯ ಸಚಿವರನ್ನು ಒಳಗೊಂಡಿರುವ ಈ ಉಪಸಮಿತಿಯಿಂದ ಕಲ್ಯಾಣ ಕರ್ನಾಟಕದ ಸಮಸ್ಯೆಗಳ



ಪರಿಹಾರಕ್ಕೆ ಯೋಜನಾಬದ್ಧ ಹಾಗೂ ಪರಿಣಾಮಕಾರಿ ಕ್ರಮ ಕೈಗೊಳ್ಳುವ ನಿರೀಕ್ಷೆಯಿದೆ ಎಂದು ಹೇಳಿದರು.

ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಮಾನವ ಅಭಿವೃದ್ಧಿಯನ್ನು ಕೇಂದ್ರವಾಗಿಟ್ಟುಕೊಂಡು ಸ್ಪಷ್ಟ ಕ್ರಿಯಾ ಯೋಜನೆ ರೂಪಿಸಬೇಕು. 371ಜೆ ಅನುಷ್ಠಾನ ಹಾಗೂ ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಸಂಬಂಧಿಸಿದ ಹಕ್ಕೊತ್ತಾಯಗಳ ಕುರಿತು ವಿವಿಧ ಸಂಘಟನೆಗಳೊಂದಿಗೆ ಸಚಿವ ಸಂಪುಟ ಉಪಸಮಿತಿ ಸಭೆ ನಡೆಸಬೇಕು ಎಂದು ಒತ್ತಾಯಿಸಿದರು.

ನಗರ ಪ್ರದೇಶಗಳಲ್ಲಿ ಉದ್ಯೋಗಾವಕಾಶ ಹೆಚ್ಚಿಸಲು ನಗರ ಉದ್ಯೋಗ ಖಾತ್ರಿ ಯೋಜನೆ ಜಾರಿಗೆ ತರಬೇಕು. ಉದ್ಯೋಗಕ್ಕಾಗಿ ಬೆಂಗಳೂರಿಗೆ ಸೇರಿದಂತೆ ಇತರ ನಗರಗಳಿಗೆ ವಲಸೆ ಹೋಗುತ್ತಿರುವ ಕಾರ್ಮಿಕರಿಗೆ ಸ್ಥಳೀಯ ಮಟ್ಟದಲ್ಲೇ ಉದ್ಯೋಗ ಸೃಷ್ಟಿಸಲು ಸರ್ಕಾರ ಆದ್ಯತೆ ನೀಡಬೇಕು ಎಂದು ಅವರು ಹೇಳಿದರು.

ಕಲ್ಯಾಣ ಕರ್ನಾಟಕದಿಂದ ಬೆಂಗಳೂರಿಗೆ ಪ್ರಯಾಣಿಸುವ ಸಾರ್ವಜನಿಕರು ಹಾಗೂ ಕಾರ್ಮಿಕರಿಗೆ ರೈಲುಗಳಲ್ಲಿ ಹೆಚ್ಚಿನ ದಟ್ಟಣೆ ಸಮಸ್ಯೆಯಾಗಿದ್ದು, ಮುಂಬೈ ಬೆಂಗಳೂರು ಮಾರ್ಗದಲ್ಲಿ ಕನಿಷ್ಠ ಎರಡು ಹೆಚ್ಚುವರಿ ರೈಲುಗಳನ್ನು ಆರಂಭಿಸಬೇಕು. ಕಡಿಮೆ ದರದಲ್ಲಿ ಸಾಮಾನ್ಯ ಬೋಗಿಗಳ ವ್ಯವಸ್ಥೆ ಕಲ್ಪಿಸಿ ರೈಲು ಸೇವೆಯನ್ನು ವಿಸ್ತರಿಸಬೇಕು ಎಂದು ಆಗ್ರಹಿಸಿದರು.

ಕೆಕೆಆರ್‌ಡಿಬಿ ನಿಧಿಯನ್ನು ಖಾಸಗಿ ಸಂಸ್ಥೆಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ನೀಡುವ ಬದಲು ಸರ್ಕಾರಿ ಶಿಕ್ಷಣ, ಆರೋಗ್ಯ, ಕೃಷಿ, ಉದ್ಯೋಗ ಹಾಗೂ ಮೂಲ ಸೌಕರ್ಯ ಅಭಿವೃದ್ಧಿಗೆ ಬಳಸಬೇಕು. ಈ ಭಾಗದ ಜನರ ತಲಾ ಆದಾಯ ಹೆಚ್ಚಿಸಲು ವಿಶೇಷ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮುಂದಿನ ಒಂದು ವಾರದಲ್ಲಿ ಕಲ್ಯಾಣ ಕರ್ನಾಟಕದ 41 ಶಾಸಕರು ಹಾಗೂ ಸಚಿವರಿಗೆ ಮನವಿ ಸಲ್ಲಿಸಲಾಗುವುದು. ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಲ್ಲಿ 371ಜೆ ಮತ್ತು ಕಲ್ಯಾಣ ಕರ್ನಾಟಕದ ಹಕ್ಕುಗಳ ಕುರಿತು ಜಾಗೃತಿ ಮೂಡಿಸಲು ನವೆಂಬರ್‌ನಲ್ಲಿ ಕಲ್ಯಾಣ ಕರ್ನಾಟಕದಾದ್ಯಂತ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಸಮಿತಿಯ ಜಿಲ್ಲಾಧ್ಯಕ್ಷೆ ಮೀನಾಕ್ಷಿ ಬಾಳಿ ಮಾತನಾಡಿ, ಕಲ್ಯಾಣ ಕರ್ನಾಟಕದ ಜಿಲ್ಲೆಗಳು ಅಪೌಷ್ಟಿಕತೆ, ಬಾಲ್ಯವಿವಾಹ ಹಾಗೂ ಶಿಕ್ಷಕರ ಕೊರತೆ ಸೇರಿದಂತೆ ಹಲವು ಸಾಮಾಜಿಕ ಸಮಸ್ಯೆಗಳನ್ನು ಎದುರಿಸುತ್ತಿವೆ. ಸರ್ಕಾರ ಈ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ ತ್ವರಿತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಅರ್ಜುನ್ ಭದ್ರೆ, ನಾಗೇಂದ್ರ ಥಂಬೆ, ಸುಧಾಮ ಧನ್ನಿ ಹಾಗೂ ಮಹೇಶ್ ಎಸ್.ಬಿ. ಉಪಸ್ಥಿತರಿದ್ದರು.


ಜ್ಞಾನ, ಮೌಲ್ಯಗಳಿಂದ ವಿದ್ಯಾರ್ಥಿಗಳು ರಾಷ್ಟ್ರ ನಿರ್ಮಾತೃಗಳಾಗಬೇಕು: ಎ.ಕೆ.ರಾಮೇಶ್ವರ

ಸೇಡಂ,ಸೆ.25-

ವಿದ್ಯಾರ್ಥಿಗಳು ಜ್ಞಾನ, ಸಾಹಿತ್ಯ ಹಾಗೂ ಉತ್ತಮ ಮೌಲ್ಯಗಳನ್ನು ಅಳವಡಿಸಿಕೊಂಡು ನಾಡಿನ ದೊಡ್ಡ ಸಂಪತ್ತುಗಳಾಗಿ ಭವಿಷ್ಯದ ರಾಷ್ಟ್ರ ನಿರ್ಮಾತೃಗಳಾಗಬೇಕು ಹಾಗೂ ಸ್ವಾವಲಂಬಿ ಬದುಕು ರೂಪಿಸಿಕೊಳ್ಳಬೇಕು ಎಂದು ಮಕ್ಕಳ ಸಾಹಿತ್ಯ ಲೋಕದ ಹಿರಿಯ ಕವಿ ಹಾಗೂ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಸಾಹಿತಿ ಎ.ಕೆ. ರಾಮೇಶ್ವರ ಕರೆ ನೀಡಿದರು.

ಪಟ್ಟಣದ ಶ್ರೀ ಕೊತ್ತಲ ಬಸವೇಶ್ವರ ಭಾರತೀಯ ಶಿಕ್ಷಣ ಸಮಿತಿ ಸಂಚಾಲಿತ ಶ್ರೀಮತಿ ನಥಿಬಾಯಿ ಸೀತಾರಾಮ ಜೇಠಮಲ್ ತಾಪಾಡಿಯಾ ಮಾತೃಛಾಯಾ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜ್ಞಾನ ದಾಸೋಹವೇ ಶ್ರೇಷ್ಠ ದಾಸೋಹ ಎಂದು ಪ್ರತಿಪಾದಿಸಿದರು.

ಪಡೆದ ಜ್ಞಾನವನ್ನು ವೈಯಕ್ತಿಕ



ಬದುಕಿನ ಉನ್ನತಿಗೆ ಮಾತ್ರ ಸೀಮಿತಗೊಳಿಸದೆ ಸಮಾಜದ ಒಳಿತಿಗಾಗಿ ಹಂಚಿಕೊಳ್ಳುವ ಮನೋಭಾವವನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು. ಶಿಕ್ಷಣವು ಕೇವಲ ಉದ್ಯೋಗ ಪಡೆಯುವ ಸಾಧನವಲ್ಲ, ವ್ಯಕ್ತಿತ್ವ ನಿರ್ಮಾಣ ಮತ್ತು ಸಮಾಜ ಪರಿವರ್ತನೆಯ ಶಕ್ತಿಯಾಗಿದೆ ಎಂದು ಹೇಳಿದರು.

ರಂಗಭೂಮಿ ಕಲಾವಿದ, ಹಿರಿಯ ಸಾಹಿತಿ ಹಾಗೂ ಕಲಬುರಗಿ ರಂಗಾಯಣದ ನಿಕಟಪೂರ್ವ ನಿರ್ದೇಶಕ ಪ್ರಭಾಕರ ಜೋಶಿ ಮಾತನಾಡಿ, ಅಧ್ಯಯನವು ಪ್ರದರ್ಶನಕ್ಕಲ್ಲ, ಜ್ಞಾನ ಸಂಪಾದನೆ ಮತ್ತು ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳುವುದಕ್ಕಾಗಿ ಇರಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಸಂಸ್ಥೆಯ ಅಧ್ಯಕ್ಷ ಪರಮಪೂಜ್ಯ ಡಾ. ಸದಾಶಿವ ಮಹಾಸ್ವಾಮಿಗಳು ವಹಿಸಿದ್ದರು. ಸಾಹಿತಿ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಜಿಲ್ಲಾಧ್ಯಕ್ಷ ಮಹಿಪಾಲರೆಡ್ಡಿ ಮುನ್ನೂರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಸ್ಥೆಯ ಆಡಳಿತಾಧಿಕಾರಿ ಚನ್ನಬಸಪ್ಪಗವಿ, ಪ್ರಧಾನ ಗುರು ಮನಸೂರ ಅವಂಟಿ, ಸಹ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಹಿರಿಯ ಉಪನ್ಯಾಸಕ ರಾಜಕುಮಾರ ಚನ್ನಿರ ಕಾರ್ಯಕ್ರಮ ನಿರ್ವಹಿಸಿ ವಂದಿಸಿದರು.

ಪಠ್ಯದ ಕವಿಯಿಂದ ವಿದ್ಯಾರ್ಥಿಗಳಿಗೆ ಪುಸ್ತಕ ಉಡುಗೊರೆ : ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ, ಪ್ರಾಥಮಿಕ ಶಾಲಾ ಪಠ್ಯಪುಸ್ತಕದಲ್ಲಿ ಪದ್ಯ ರಚಿಸಿರುವ ಕವಿ ಎ.ಕೆ. ರಾಮೇಶ್ವರ ಅವರು ವಿದ್ಯಾರ್ಥಿಗಳಿಗೆ ಸ್ವತಃ ಪುಸ್ತಕಗಳನ್ನು ಉಡುಗೊರೆಯಾಗಿ ನೀಡಿದರು.

ತಾವು ಪಠ್ಯದಲ್ಲಿ ಓದಿದ್ದ ಕವಿಯನ್ನು ನೇರವಾಗಿ ಭೇಟಿ ಮಾಡಿ, ಅವರೊಂದಿಗೆ ಕೈಕುಲುಕಿದ ವಿದ್ಯಾರ್ಥಿಗಳು ಸಂತಸ ವ್ಯಕ್ತಪಡಿಸಿದರು. ಕವಿ ಎ.ಕೆ. ರಾಮೇಶ್ವರ ಅವರ ಕಲಬುರಗಿಯ ಶ್ರೀ ಶರಣಬಸವೇಶ್ವರರು ಕೃತಿಯನ್ನು ಸುಮಾರು 100 ವಿದ್ಯಾರ್ಥಿಗಳಿಗೆ ಉಚಿತವಾಗಿ ವಿತರಿಸಲಾಯಿತು.

ಮಕ್ಕಳು ಚೆನ್ನಾಗಿ ಅಭ್ಯಾಸ ಮಾಡಿ ಉಜ್ವಲ ಭವಿಷ್ಯ ರೂಪಿಸಿಕೊಳ್ಳಿ: ಡಾ.ದಾಕ್ಷಾಯಿಣಿ ಅವ್ವಾಜಿ



ಕಲಬುರಗಿ,ಸೆ.23-

ಇಂದಿನ ಮಕ್ಕಳು ನಾಳೆಯ ಪ್ರಜೆಗಳಾಗಿರುವುದರಿಂದ ಪ್ರತಿಯೊಬ್ಬ ವಿದ್ಯಾರ್ಥಿಯೂ ಮನಸ್ಸಿಟ್ಟು ಅಭ್ಯಾಸ ಮಾಡಿ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಕರೆ ನೀಡಿದರು.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದಡಿಯಲ್ಲಿರುವ ಶರಣಬಸವೇಶ್ವರ ಸಂಯುಕ್ತ ಪ್ರೌಢ ಶಾಲೆಯಲ್ಲಿ ''ಯುಥ್ ಫಾರ್ ಸೇವಾ'' ಸಂಸ್ಥೆ ವತಿಯಿಂದ ಆಯೋಜಿಸಿದ್ದ ಶಾಲಾ ಕಿಟ್ ವಿತರಣಾ ಸಮಾರಂಭದಲ್ಲಿ ಮಹಾದೇವಿ ಕನ್ಯಾ ಶಾಲೆಯ ವಿದ್ಯಾರ್ಥಿನಿಯರಿಗೆ ಶಾಲಾ ಕಿಟ್‌ಗಳನ್ನು ವಿತರಿಸಿ ಅವರು ಮಾತನಾಡಿದರು.

ಲಿಂಗೈಕ್ಯ ಪೂಜ್ಯ ದೊಡಪ್ಪ ಅಪ್ಪಾಜಿಯವರು ಸ್ಥಾಪಿಸಿದ ಶಿಕ್ಷಣ ಸಂಸ್ಥೆಗಳನ್ನು ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿಯವರು ವಿಶ್ವವಿದ್ಯಾಲಯದ ಮಟ್ಟಕ್ಕೆ ಬೆಳೆಸಿದ ಆಶಯದಂತೆ ವಿದ್ಯಾರ್ಥಿಗಳು ಶಿಕ್ಷಣದ ಮೂಲಕ ಉನ್ನತ ಸಾಧನೆ ಮಾಡಬೇಕು. ಮುಂದಿನ ದಿನಗಳಲ್ಲಿ ವೈದ್ಯರು, ಇಂಜಿನಿಯರ್‌ಗಳು, ಶಿಕ್ಷಕರು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸ್ಥಾನವನ್ನು ಅಲಂಕರಿಸಬೇಕು ಎಂದು ಅವರು ಹಾರೈಸಿದರು.

''ಯುಥ್ ಫಾರ್ ಸೇವಾ'' ಸಂಸ್ಥೆ ವಿದ್ಯಾರ್ಥಿಗಳಿಗೆ ಶಾಲಾ ಕಿಟ್ ವಿತರಿಸುವ ಮೂಲಕ ಸಮಾಜಮುಖಿ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ. ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ, ಶಾಲಾ ಕಿಟ್‌ಗಳು ಹಾಗೂ ಸ್ಮಾರ್ಟ್ ಬೋರ್ಡ್‌ಗಳಂತಹ ಸೌಲಭ್ಯಗಳನ್ನು ಒದಗಿಸುವ ಮೂಲಕ ಶಿಕ್ಷಣಕ್ಕೆ ಬೆಂಬಲ ನೀಡುತ್ತಿರುವುದು ಪ್ರಶಂಸನೀಯ ಕಾರ್ಯವಾಗಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ಸಮಾರಂಭದಲ್ಲಿ ಸುಮಾರು 150 ವಿದ್ಯಾರ್ಥಿಗಳಿಗೆ ಶಾಲಾ ಕಿಟ್‌ಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ''ಯುಥ್ ಫಾರ್ ಸೇವಾ'' ಸಂಸ್ಥೆಯ ಸಲಹಾ ಸಮಿತಿಯ ಅಧ್ಯಕ್ಷ ಮಹೇಶ್ ದೇಶಪಾಂಡೆ, ಸದಸ್ಯರಾದ ಪ್ರಹ್ಲಾದ್ ಪೂಜಾರಿ, ಶ್ರೀಪಾದ, ಸಂಚಾಲಕ ಮಲ್ಲಿಕಾರ್ಜುನ್, ಶಾಲೆಯ ಮುಖ್ಯೋಪಾಧ್ಯಾಯರು, ಪ್ರಾಧ್ಯಾಪಕರು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.


ಬರ ಪರಿಹಾರ, ರೈತರ ಸಾಲಮನ್ನಾ ಮಾಡಲು ಆಗ್ರಹಿಸಿ ಮನವಿ

ಚಿತ್ತಾಪುರ,ಸೆ.25-

ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿರುವ ಹಿನ್ನೆಲೆಯಲ್ಲಿ ರೈತರ ಸಾಲಮನ್ನಾ, ಬೆಳೆ ನಷ್ಟ ಪರಿಹಾರ ಹಾಗೂ ಜಾನುವಾರುಗಳಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸುವಂತೆ ಒತ್ತಾಯಿಸಿ ತಾಲೂಕು ಕೃಷಿಕ ಸಮಾಜದ ಪದಾಧಿಕಾರಿಗಳು ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ನಾಗರೆಡ್ಡಿ ಗೋಪಸೇನ್ ಅವರ ನೇತೃತ್ವದಲ್ಲಿ ಪದಾಧಿಕಾರಿಗಳು ಗ್ರೇಡ್-2 ತಹಶೀಲ್ದಾರ್ ರಾಜಕುಮಾರ ಮರತೂರ ಅವರ ಮೂಲಕ ಮನವಿ ಸಲ್ಲಿಸಿ, ಮಳೆಯ ಅಭಾವದಿಂದ ತಾಲೂಕಿನಲ್ಲಿ ತೀವ್ರ ಬರ ಪರಿಸ್ಥಿತಿ ನಿರ್ಮಾಣವಾಗಿದ್ದು ರೈತರು ಹಾಗೂ ಜಾನುವಾರುಗಳು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ತಿಳಿಸಿದರು.

ಮುಂಗಾರು ಹಂಗಾಮಿನಲ್ಲಿ ಸರ್ಕಾರದಿಂದ ನೀಡಲಾದ ಬಿತ್ತನೆ ಬೀಜ ಮತ್ತು ರಸಗೊಬ್ಬರವನ್ನು ರೈತರು ಭೂಮಿಗೆ



ಹಾಕಿದ್ದರೂ ಮಳೆ ಕೊರತೆಯಿಂದ ಬೆಳೆಗಳು ಮೊಳಕೆ ಬಾರದಿರುವುದು ಅಥವಾ ಮೊಳಕೆಯಾದ ಬೆಳೆಗಳು ಒಣಗಿ ನಾಶವಾಗಿವೆ ಎಂದು ಅವರು ವಿವರಿಸಿದರು. ಇದರಿಂದ ರೈತರು ಹಾಗೂ ಕೃಷಿಯನ್ನೇ ಅವಲಂಬಿಸಿರುವ ಜಾನುವಾರುಗಳ ಜೀವನ ಸಂಕಷ್ಟಕ್ಕೀಡಾಗಿದೆ ಎಂದು ಹೇಳಿದರು.

ತಾಲೂಕಿನ ಎಲ್ಲಾ ರೈತರಿಗೆ ಬೆಳೆ ನಷ್ಟ ಪರಿಹಾರವನ್ನು ತಕ್ಷಣ ಬಿಡುಗಡೆ ಮಾಡಬೇಕು. ಕುಡಿಯುವ ನೀರು ಮತ್ತು ಜಾನುವಾರುಗಳಿಗೆ ಮೇವು ಒದಗಿಸಲು ಬರ ನಿರ್ವಹಣೆಯಡಿ ವಿಶೇಷ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಬೆಳೆ ವಿಮೆ ಮಾಡಿಸಿರುವ ಎಲ್ಲಾ ರೈತರಿಗೆ ಮಧ್ಯಂತರ ವಿಮಾ ಪರಿಹಾರವನ್ನು ಶೀಘ್ರ ಬಿಡುಗಡೆ ಮಾಡಬೇಕು. ಕೃಷಿ ಪಂಪ್‌ಸೆಟ್‌ಗಳಿಗೆ ಕನಿಷ್ಠ ಏಳು ಗಂಟೆಗಳ ಕಾಲ ನಿರಂತರ ಗುಣಮಟ್ಟದ ತ್ರಿಫೇಸ್ ವಿದ್ಯುತ್ ಪೂರೈಕೆ ಮಾಡಬೇಕು ಎಂದು ಆಗ್ರಹಿಸಲಾಗಿದೆ.

ರೈತರು ವಾಣಿಜ್ಯ ಮತ್ತು ಸಹಕಾರ ಬ್ಯಾಂಕ್‌ಗಳಲ್ಲಿ ಪಡೆದಿರುವ ಬೆಳೆ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು. ಈಗಾಗಲೇ ಬೇರೆ ಮೂಲಗಳಿಂದ ಸಾಲ ತೀರಿಸಿರುವ ರೈತರನ್ನೂ ಸಾಲಮನ್ನಾ ಯೋಜನೆಯ ವ್ಯಾಪ್ತಿಗೆ ಸೇರಿಸಬೇಕು. ಸಣ್ಣ ರೈತ, ದೊಡ್ಡ ರೈತ ಅಥವಾ ಆದಾಯ ತೆರಿಗೆ ಪಾವತಿದಾರ ಎಂಬ ಆಧಾರದ ಮೇಲೆ ಯಾವುದೇ ತಾರತಮ್ಯ ಮಾಡದೆ ಎಲ್ಲಾ ರೈತರಿಗೂ ಸಾಲಮನ್ನಾ ಸೌಲಭ್ಯ ನೀಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಕೃಷಿಕ ಸಮಾಜದ ಜಿಲ್ಲಾ ಪ್ರತಿನಿಧಿ ವೀರಣ್ಣಗೌಡ ಪರಸರೆಡ್ಡಿ ನಾಲವಾರ, ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘದ ಅಧ್ಯಕ್ಷ ದೇವಿಂದ್ರ ಅರಣಕಲ್, ನಿರ್ದೇಶಕರಾದ ನಿಂಗಣ್ಣ ಹೇಗಲೇರಿ, ಬಾಬು ಕಾಶಿ ಹಾಗೂ ಚನ್ನಬಸಪ್ಪ ಗುಂಡಗುರ್ತಿ ಉಪಸ್ಥಿತರಿದ್ದರು.

ಬಂದ್ ಆಗಿದ್ದ ಕೆಮಿಕಲ್ ಫ್ಯಾಕ್ಟರಿಗಳು ಮತ್ತೆ ಕಾರ್ಯಾರಂಭ ಆರೋಪ : ಹುಮನಾಬಾದ್ ಬಂದ್ ಎಚ್ಚರಿಕೆ

ಹುಮನಾಬಾದ್,ಸೆ.25-

ಸರ್ಕಾರದಿಂದ ಬೀಗ ಜಡಿಯಲಾಗಿದ್ದ ಐದು ಕೆಮಿಕಲ್ ಫ್ಯಾಕ್ಟರಿಗಳು ಮತ್ತೆ ಕಾರ್ಯಾರಂಭ ಮಾಡಿರುವುದನ್ನು ವಿರೋಧಿಸಿ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯ ಉಪಾಧ್ಯಕ್ಷ ರವಿಸ್ವಾಮಿ ನಿರ್ಣಾ ಆಕ್ರೋಶ ವ್ಯಕ್ತಪಡಿಸಿದ್ದು, ಅಗತ್ಯವಿದ್ದರೆ ಹುಮನಾಬಾದ್ ಬಂದ್‌ಗೆ ಕರೆ ನೀಡುವುದಾಗಿ ಎಚ್ಚರಿಕೆ ನೀಡಿದ್ದಾರೆ.

ನಗರದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸತ್ಯದೀಪಾ, ಲಕ್ಷ್ಮೀ ದುರ್ಗಾ, ಎನ್‌ಎಸ್ ಸಿಕ್ಸ್, ಕೆಜಿಎನ್ ಸೇರಿದಂತೆ ಐದು ಕೆಮಿಕಲ್ ಫ್ಯಾಕ್ಟರಿಗಳನ್ನು ಬಂದ್ ಮಾಡಬೇಕು ಎಂದು ಈ ಹಿಂದೆ ಶಾಸಕರು, ಮಾಜಿ ಸಚಿವರು, ಮಾಣಿಕ್ ಪ್ರಭು ದೇವಸ್ಥಾನದ ಪೂಜ್ಯರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಹೋರಾಟ ನಡೆಸಿದ್ದರು. ಅದರ ಪರಿಣಾಮ ಸರ್ಕಾರ ಫ್ಯಾಕ್ಟರಿಗಳಿಗೆ ಬೀಗ ಜಡಿಸಿತ್ತು ಎಂದು ಹೇಳಿದರು.

ಆದರೆ ಸರ್ಕಾರದ ಆದೇಶವನ್ನು ಪಾಲಿಸದೇ ನಾಲ್ಕು ಫ್ಯಾಕ್ಟರಿಗಳು ಮತ್ತೆ ಕಾರ್ಯನಿರ್ವಹಿಸುತ್ತಿವೆ ಎಂದು ಅವರು ಆರೋಪಿಸಿದರು.

ಬೀಗ ಹಾಕಿದ ಬಳಿಕವೂ ಫ್ಯಾಕ್ಟರಿಗಳು ಪುನಃ ಆರಂಭಗೊಂಡಿದ್ದು, ಅಲ್ಲಿ ಕಾರ್ಮಿಕರು ಪ್ರತಿದಿನ ಕೆಲಸಕ್ಕೆ ಹೋಗಿ ಬರುತ್ತಿದ್ದಾರೆ ಎಂದು ತಿಳಿಸುತ್ತಿದ್ದಾರೆ ಎಂದು ಹೇಳಿದರು.

ಒಂದನೇಯ ಪುಟದಿಂದ

ಪೌರಕಾರ್ಮಿಕರ ಭತ್ಯೆ ಹೆಚ್ಚಳ, ಉಪಹಾರ ಭತ್ಯೆ ಹೆಚ್ಚಳ: ಸಿಎಂ ಘೋಷಣೆ

ಭವನ ನಿರ್ಮಾಣಕ್ಕೆ ಬೇಡಿಕೆ ಇಟ್ಟಿದ್ದು, ಇದನ್ನು ನಿರ್ಮಾಣ ಮಾಡುವ ಜಾಗ ನನ್ನ ತಲೆಯಲ್ಲಿದೆ. ಮುಂದಿನ ಎರಡು ತಿಂಗಳಲ್ಲಿ ಪೌರ ಭವನ ನಿರ್ಮಾಣ ಪ್ರಾರಂಭಿಸಲಾಗುವುದು. ಪ್ರತಿ ವರ್ಷ ಪೌರ ಕಾರ್ಮಿಕ ದಿನ ಕಾರ್ಯಕ್ರಮವನ್ನು ಸರ್ಕಾರದಿಂದ ನಡೆಸಲಾಗುವುದು ಎಂದು ತಿಳಿಸಿದರು.

ಉಪಾಹಾರ, ಊಟವಷ್ಟೇ ನಮ್ಮ ಚಿಂತನೆಯಲ್ಲ. ನಿಮ್ಮ ಬದುಕಿನ ಬಗ್ಗೆ ನಾವು ಆಲೋಚಿಸುತ್ತಿದ್ದೇವೆ. ಕೋವಿಡ್ ಸಮಯದಲ್ಲಿ ಕಾರ್ಮಿಕರಿಂದ ಮೂರು ಪಟ್ಟು ಬಸ್ ಟಿಕೆಟ್ ದರ ಪಡೆಯುವಾಗ ನಾವು ಕಾಂಗ್ರೆಸ್ ಪಕ್ಷದಿಂದ 1 ಕೋಟಿ ನೀಡಿ ಉಚಿತ ಪ್ರಯಾಣಕ್ಕೆ ಆಗ್ರಹಿಸಿದೆವು. ನಿಮ್ಮಲ್ಲಿ ಅನೇಕ ಆಟೋ ಚಾಲಕರು ಇದ್ದಾರೆ. ಮುಂದಿನ ವಾರ ಚಾಲಕರನ್ನು ಕರೆಸಿ ಸಮಸ್ಯೆ ಆಲಿಸಲಾಗುವುದು. ಡಿ.ಕೆ.ಶಿವಕುಮಾರ್ ಹಾಗೂ ಕಾಂಗ್ರೆಸ್ ಸರ್ಕಾರ ನಿಮ್ಮ ಜೊತೆಗೆ ನಿಲ್ಲುತ್ತೇವೆ. ನಿಮ್ಮದು ಕೇವಲ ಕಸ ತೆಗೆಯುವ ಕೈಗಳಲ್ಲ, ಕರ್ನಾಟಕವನ್ನು ಕಾಪಾಡುವ ಕೈಗಳು ಎಂದು ಸಿಎಂ ಬಣ್ಣಿಸಿದರು.

ರೈಲ್ವೆ ಯೋಜನೆಗಳಿಗೆ ವೇಗ ನೀಡಲು ಮಹತ್ವದ ಸಭೆ

ಈ ಸಂದರ್ಭದಲ್ಲಿ ಎಜಿಎಂ ಶ್ರೀ ಶ್ರೀನಿವಾಸ್, ಪ್ರಿನ್ಸಿ ಪಲ್ ಚೀಫ್ ಆಪರೇಷನ್ಸ್ ಆಫೀಸರ್ ಶ್ರೀ ಬಾಲಾಜಿ ಅರುಣ್‌ಕುಮಾರ್, ಪ್ರಿನ್ಸಿ ಪಲ್ ಚೀಫ್ ಎಂಜಿನಿಯರ್ ಶ್ರೀ ಸುನಿಲ್ ಎನ್. ಮಾಸ್ಕೆ ಹಾಗೂ ಡಿಆರ್‌ಎಂ ಶ್ರೀಮತಿ ಬೇಲಾ ಮೀನಾ ಅವರು ಉಪಸ್ಥಿತರಿದ್ದರು.

ಬರ, ಬೆಳೆನಷ್ಟ-ನೀರಿನ ಸಮಸ್ಯೆ : ಸೆ.28ರಂದು ರೈತರ ಧರಣಿ

ಪ್ರದೇಶಗಳನ್ನೂ ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ತುಂಗಭದ್ರಾ ಎಡದಂಡೆ ಹಾಗೂ ನಾರಾಯಣಪುರ ಬಲದಂಡೆ ನಾಲೆಗಳ ಕೊನೆಯ ಭಾಗದ ರೈತರಿಗೂ ನೀರು ತಲುಪುವಂತೆ ಕ್ರಮ ಕೈಗೊಳ್ಳಬೇಕು. ರೈತರಿಗೆ ಅನುಕೂಲವಾಗುವ ರೀತಿಯಲ್ಲಿ ವಾರಾಬಂದಿ ಜಾರಿಗೊಳಿಸಿ, ಕೃಷಿ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಸಬೇಕು ಎಂದು ಹೇಳಿದರು.

ಜೋಳ ಖರೀದಿ ಕೇಂದ್ರಗಳಲ್ಲಿ ಸೂಕ್ತ ಬೆಲೆ ನೀಡಬೇಕು. ರೈತರು ಬೆಳೆದ ಜೋಳವನ್ನು ಎಕರೆ ಉತ್ಪಾದನೆ ಆಧಾರದ ಮೇಲೆ ಖರೀದಿಸುವ ವ್ಯವಸ್ಥೆ ರೂಪಿಸಬೇಕು. ಲಿಂಗಸುಗೂರು ಹಾಗೂ ಮುದಗಲ್ ಎಪಿಎಂಸಿಗಳಲ್ಲಿ ಕಮಿಷನ್ ಹಾಗೂ ಸೂಟ್ ಹೆಸರಿನಲ್ಲಿ ಅನಧಿಕೃತ ಹಣ ವಸೂಲಿ ಮಾಡಲಾಗುತ್ತಿದೆ ಎಂಬ ದೂರುಗಳಿದ್ದು, ಅಧಿಕಾರಿಗಳು ತನಿಖೆ ನಡೆಸಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಫಸಲ್ ಬಿಮಾ ಯೋಜನೆಯ ಪರಿಹಾರವನ್ನು ಯಾವುದೇ ಮಧ್ಯವರ್ತಿಗಳ ಹಸ್ತಕ್ಷೇಪವಿಲ್ಲದೆ ನೇರವಾಗಿ ರೈತರ ಖಾತೆಗೆ ಜಮೆ ಮಾಡುವ ವ್ಯವಸ್ಥೆ ಕಲ್ಪಿಸಬೇಕು. ಬೇಡಿಕೆಗಳಿಗೆ ಸರ್ಕಾರ ಸ್ಪಂದಿಸದಿದ್ದರೆ ಹೋರಾಟ ತೀವ್ರಗೊಳಿಸುವುದಾಗಿ ರೈತ ಸಂಘ ಎಚ್ಚರಿಸಿದೆ.

ಧರಣಿಯಲ್ಲಿ ಜಿಲ್ಲೆಯ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಸಂಘ ಮನವಿ ಮಾಡಿದೆ.

ಸುದ್ದಿಗೋಷ್ಠಿಯಲ್ಲಿ ರಾಜ್ಯ ಕಾರ್ಯದರ್ಶಿ ಸೂಗುರಯ್ಯ ಆರ್.ಎಸ್. ಮಠ, ಜಿಲ್ಲಾಧ್ಯಕ್ಷ ಪ್ರಭಾಕರ ಪಾಟೀಲ ಇಂಗಳದಾಳ ಸೇರಿದಂತೆ ರೈತ ಮುಖಂಡರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಕಾರ್ಮಿಕರಿಗೆ ಕೂಲಿ ಬಾಕಿ ಬಿಡುಗಡೆ ಹಾಗೂ ನಿವೇಶನ ರಹಿತರಿಗೆ ನಿವೇಶನ ನೀಡಲು ಕೂಲಿ ಕಾರ್ಮಿಕರು ಒತ್ತಾಯ



ಕೊಟ್ಟೂರು: ತಾಲೂಕಿನ ಕಾಳಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿ ಬಿ ಜಿ ರಾಮ್ ಜಿ ಯೋಜನೆಯಡಿ ವಡ್ಡರಹಳ್ಳಿ ಹಾಗು ಮೂರ್ತಿನಾಯಕನಹಳ್ಳಿ ಕಾರ್ಮಿಕರು ಕೂಲಿ ಕೆಲಸ ಮಾಡಿದ ಕೂಲಿಕಾರ್ಮಿಕರಿಗೆ ಎರಡು ತಿಂಗಳಿಂದ ಕೂಲಿ ಹಣ ಪಾವತಿಯಾಗದಿರುವುದನ್ನು ಖಂಡಿಸಿ ಹಾಗೂ ನಿವೇಶನ ರಹಿತರಿಗೆ ಉಚಿತ ನಿವೇಶನ ಕಲ್ಪಿಸುವಂತೆ ಆಗ್ರಹಿಸಿ 'ಗ್ರಾಮೀಣ ಕೂಲಿಕಾರ್ಮಿಕರ ಸಂಘಟನೆ (ಗ್ರಾಕೂಸ್)' ಪಧಾದಿಕಾರಿಗಳು. ಸದಸ್ಯರು. ಕೂಲಿ ಕಾರ್ಮಿಕರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ವಿಜಯನಗರ ಜಿಲ್ಲೆ ಇವರಿಗೆ ಮನವಿ ಸಲ್ಲಿಸಲು ಕಾಳಪುರ ಗ್ರಾಮ ಪಂಚಾಯಿತಿ ಮುಂಭಾಗದಲ್ಲಿ ಕಾರ್ಯದರ್ಶಿ ಅಧಿಕಾರಿಗಳಿಗೆ 22-9-2026 ಮಂಗಳವಾರ ರಂದು ಮನವಿ ಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಕೂಸ್ ಸಂಘಟನೆಯ ಜಿಲ್ಲಾ ಸಂಚಾಲಕಿ ಅಕ್ಕಮಹಾದೇವಿ ಮಾತನಾಡಿ ವಿಬಿಜಿ ರಾಮ್ ಜಿ ಯೋಜನೆಯಡಿ ಕೂಲಿಕಾರ್ಮಿಕರು ಶ್ರಮವಹಿಸಿ ಕೆಲಸ ಮಾಡಿದ್ದಾರೆ.

ಆದರೆ ಕೆಲಸ ಮುಗಿದು ಎರಡು ತಿಂಗಳು ಕಳೆದರೂ ಇಲ್ಲಿಯವರೆಯೂ ಕಾರ್ಮಿಕರ ಖಾತೆಗೆ ಕೂಲಿ ಹಣ ಜಮೆಯಾಗಿಲ್ಲ. ಈ ಬಗ್ಗೆ ಪಂಚಾಯಿತಿ ಅಧಿಕಾರಿಗಳನ್ನು ಹಲವು ಬಾರಿವಿಚಾರಿಸಿದರೂ ಯಾವುದೇ ಸೂಕ್ತ ಮಾಹಿತಿ ನೀಡದೆ ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಂಘಟನೆಯ ತಾಲೂಕು ಸಂಚಾಲಕಿ ನೇತ್ರಾವತಿ ಯವರು ಮಾತನಾಡಿ ನಿಯಮಗಳ ಪ್ರಕಾರ ಕೆಲಸ ಮಾಡಿದ 15 ದಿನಗಳ ಒಳಗೆ ಕೂಲಿ ಹಣ ಜಮೆಯಾಗಬೇಕಿದ್ದು, ಅಧಿಕಾರಿಗಳು ತಾಂತ್ರಿಕ ತೊಂದರೆಗಳ ನೆಪ ಹೇಳಿ ವಿಳಂಬ ಮಾಡುತ್ತಿದ್ದಾರೆ, ಗ್ರಾಮದಲ್ಲಿ ನೂರಾರು ಕುಟುಂಬಗಳು ಸ್ವಂತ ಮನೆ ಇಲ್ಲದೆ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದು, ಕೂಲಿ ಮಾಡಿ ಜೀವನ ನಡೆಸುತ್ತಿದ್ದಾರೆ. ಆದ್ದರಿಂದ ನಿವೇಶನ ರಹಿತರಿಗೆ ಉಚಿತ ನಿವೇಶನ ಕಲ್ಪಿಸಿಕೊಡಬೇಕು ಹಾಗೂ ಬಾಕಿ ಇರುವ ಕೂಲಿ ಹಣವನ್ನು ಭತ್ಯೆ ಸಮೇತ ಕೂಡಲೇ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಶಾರದಮ್ಮ. ಮಾಯಮ್ಮ.ಮಾಬೀನಿ. ಗೌರಮ್ಮ .ಮಲ್ಲಮ್ಮ. ಕರಿಬಸಪ್ಪ. ದರ್ಗಪ್ಪ . ಎ ಎಮ್ ನಾಗರಾಜ. ಬಸವರಾಜ ಲೋಕಪ್ಪ. ಸಂಘಟನೆ ಪಧಾದಿಕಾರಿಗಳು ಸದಸ್ಯರು ಸೇರಿದಂತೆ ಗ್ರಾಮಗಳ ಹಲವಾರು ಕೂಲಿಕಾರ್ಮಿಕರು ಭಾಗವಹಿಸಿದ್ದರು.

ಬಂದ್ ಆಗಿದ್ದ ಕೆಮಿಕಲ್ ಫ್ಯಾಕ್ಟರಿಗಳು ಮತ್ತೆ ಕಾರ್ಯಾರಂಭ ಆರೋಪ : ಹುಮನಾಬಾದ್ ಬಂದ್ ಎಚ್ಚರಿಕೆ

ಹುಮನಾಬಾದ್,ಸೆ.25-

ಸರ್ಕಾರದಿಂದ ಬೀಗ ಜಡಿಯಲಾಗಿದ್ದ ಐದು ಕೆಮಿಕಲ್ ಫ್ಯಾಕ್ಟರಿಗಳು ಮತ್ತೆ ಕಾರ್ಯಾರಂಭ ಮಾಡಿರುವುದನ್ನು ವಿರೋಧಿಸಿ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯ ಉಪಾಧ್ಯಕ್ಷ ರವಿಸ್ವಾಮಿ ನಿರ್ಣಾ ಆಕ್ರೋಶ ವ್ಯಕ್ತಪಡಿಸಿದ್ದು, ಅಗತ್ಯವಿದ್ದರೆ ಹುಮನಾಬಾದ್ ಬಂದ್‌ಗೆ ಕರೆ ನೀಡುವುದಾಗಿ ಎಚ್ಚರಿಕೆ ನೀಡಿದ್ದಾರೆ.

ನಗರದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸತ್ಯದೀಪಾ, ಲಕ್ಷ್ಮೀ ದುರ್ಗಾ, ಎನ್‌ಎಸ್ ಸಿಕ್ಸ್, ಕೆಜಿಎನ್ ಸೇರಿದಂತೆ ಐದು ಕೆಮಿಕಲ್ ಫ್ಯಾಕ್ಟರಿಗಳನ್ನು ಬಂದ್ ಮಾಡಬೇಕು ಎಂದು ಈ ಹಿಂದೆ ಶಾಸಕರು, ಮಾಜಿ ಸಚಿವರು, ಮಾಣಿಕ್ ಪ್ರಭು ದೇವಸ್ಥಾನದ ಪೂಜ್ಯರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಹೋರಾಟ ನಡೆಸಿದ್ದರು. ಅದರ ಪರಿಣಾಮ ಸರ್ಕಾರ ಫ್ಯಾಕ್ಟರಿಗಳಿಗೆ ಬೀಗ ಜಡಿಸಿತ್ತು ಎಂದು ಹೇಳಿದರು.

ಆದರೆ ಸರ್ಕಾರದ ಆದೇಶವನ್ನು ಪಾಲಿಸದೇ ನಾಲ್ಕು ಫ್ಯಾಕ್ಟರಿಗಳು ಮತ್ತೆ ಕಾರ್ಯನಿರ್ವಹಿಸುತ್ತಿವೆ ಎಂದು ಅವರು ಆರೋಪಿಸಿದರು.

ಬೀಗ ಹಾಕಿದ ಬಳಿಕವೂ ಫ್ಯಾಕ್ಟರಿಗಳು ಪುನಃ ಆರಂಭಗೊಂಡಿದ್ದು, ಅಲ್ಲಿ ಕಾರ್ಮಿಕರು ಪ್ರತಿದಿನ ಕೆಲಸಕ್ಕೆ ಹೋಗಿ ಬರುತ್ತಿದ್ದಾರೆ ಎಂದು ತಿಳಿಸುತ್ತಿದ್ದಾರೆ ಎಂದು ಹೇಳಿದರು.

ಪರಂಪರೆ ತಾಣಗಳ ಸಂರಕ್ಷಣೆಗೆ ಯುವಜನರಲ್ಲಿ ಅರಿವು ಅಗತ್ಯ : ಡಿಸಿ ಇಕ್ರಮ್ ಶರೀಫ್



ಕಲಬುರಗಿ,ಸೆ.25-

ಐತಿಹಾಸಿಕ ಹಾಗೂ ಸಾಂಸ್ಕೃತಿಕ ಪರಂಪರೆಯ ಅರಿವಿನಿಂದಲೇ ಅದನ್ನು ಮುಂದಿನ ಪೀಳಿಗೆಗೆ ಸಂರಕ್ಷಿಸಲು ಸಾಧ್ಯ. ವಿದ್ಯಾರ್ಥಿಗಳು ಹಾಗೂ ಯುವಜನರು ಜಿಲ್ಲೆಯ ಐತಿಹಾಸಿಕ ತಾಣಗಳಿಗೆ ಭೇಟಿ ನೀಡಿ ಅವುಗಳ ಮಹತ್ವವನ್ನು ಅರಿತುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಹೇಳಿದರು.

ವಿಶ್ವ ಪ್ರವಾಸೋದ್ಯಮ ದಿನ-2026ರ ಅಂಗವಾಗಿ ಕರ್ನಾಟಕ ಪ್ರವಾಸೋದ್ಯಮ ವೇದಿಕೆ, ಪ್ರವಾಸೋದ್ಯಮ ಇಲಾಖೆ ಕಲಬುರಗಿ, ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕೆಗಳ ಚೇಂಬರ್ ಹಾಗೂ ಕಲಬುರಗಿ ಅಧ್ಯಾಯದ ಸಹಯೋಗದಲ್ಲಿ ಆಯೋಜಿಸಿದ್ದ ಕಲಬುರಗಿ ಪರಂಪರೆ ಶೈಕ್ಷಣಿಕ ಪ್ರವಾಸಕ್ಕೆ ನಗರದ ಬುದ್ಧ ವಿಹಾರದಲ್ಲಿ ಚಾಲನೆ ನೀಡಿ ಅವರು ಮಾತನಾಡಿದರು. ಕಲಬುರಗಿ ಜಿಲ್ಲೆ ಶ್ರೀಮಂತ ಐತಿಹಾಸಿಕ, ಸಾಂಸ್ಕೃತಿಕ ಹಾಗೂ ವಾಸ್ತುಶಿಲ್ಪ ಪರಂಪರೆಯನ್ನು ಹೊಂದಿದ್ದು, ಪೂರ್ವಜರು ಬಿಟ್ಟುಹೋದ ಸ್ಮಾರಕಗಳು ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಹಸ್ತಾಂತರಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಹೇಳಿದರು.

ಪರಂಪರೆ ತಾಣಗಳಿಗೆ ಶೈಕ್ಷಣಿಕ ಪ್ರವಾಸಗಳನ್ನು ಆಯೋಜಿಸುವುದರಿಂದ ವಿದ್ಯಾರ್ಥಿಗಳಲ್ಲಿ ಇತಿಹಾಸ, ಕಲೆ ಮತ್ತು ಸಂಸ್ಕೃತಿಯ ಬಗ್ಗೆ ಆಸಕ್ತಿ ಹೆಚ್ಚುತ್ತದೆ. ಪ್ರವಾಸೋದ್ಯಮವು ಕೇವಲ ಮನರಂಜನೆಯ ಮಾಧ್ಯಮವಲ್ಲ; ಜ್ಞಾನ, ಸಂಸ್ಕೃತಿ ಮತ್ತು ಪರಂಪರೆಯನ್ನು ಪರಿಚಯಿಸುವ ಪ್ರಮುಖ ಸಾಧನವಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಕಲಬುರಗಿಯ ಐತಿಹಾಸಿಕ ವೈಭವ ಹಾಗೂ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ದೇಶದಾದ್ಯಂತ ಪರಿಚಯಿಸುವ ಮೂಲಕ ಜಿಲ್ಲೆಯ ಪ್ರವಾಸೋದ್ಯಮಕ್ಕೆ ಹೆಚ್ಚಿನ ಅವಕಾಶಗಳನ್ನು ಸೃಷ್ಟಿಸಬಹುದು. ಜಿಲ್ಲೆಯ ಪರಂಪರೆ ತಾಣಗಳ ಸಂರಕ್ಷಣೆಯ ಜೊತೆಗೆ ಅವುಗಳ ಕುರಿತು ಯುವಜನರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಅವರು ಹೇಳಿದರು.

ಕರ್ನಾಟಕ ಪ್ರವಾಸೋದ್ಯಮ ವೇದಿಕೆ, ಪ್ರವಾಸೋದ್ಯಮ ಇಲಾಖೆ, ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕೆಗಳ ಚೇಂಬರ್ ಹಾಗೂ ಕಲಬುರಗಿ ಅಧ್ಯಾಯದ ಸಹಯೋಗದಲ್ಲಿ ಆಯೋಜಿಸಿರುವ ಈ ಶೈಕ್ಷಣಿಕ ಪ್ರವಾಸವು ಜಿಲ್ಲೆಯ ಐತಿಹಾಸಿಕ ಹಾಗೂ ಸಾಂಸ್ಕೃತಿಕ ತಾಣಗಳ ಪರಿಚಯದ ಜೊತೆಗೆ ಅವುಗಳ ಸಂರಕ್ಷಣೆಯ ಕುರಿತು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶ ಹೊಂದಿದೆ.

ಕಾರ್ಯಕ್ರಮದಲ್ಲಿ ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕೆಗಳ ಚೇಂಬರ್ ಅಧ್ಯಕ್ಷ ಶರಣಬಸಪ್ಪ ಎಂ. ಪಪ್ಪ, ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕಿ ಬೇಬಿ ಮೊಗೇರ, ಕರ್ನಾಟಕ ಪ್ರವಾಸೋದ್ಯಮ ವೇದಿಕೆ ಅಧ್ಯಕ್ಷ ಪ್ಯಾಟ್ರಿಕ್ ಜಾರ್ಜ್, ಕಲಬುರಗಿ ಅಧ್ಯಾಯದ ಡಾ. ಎಸ್.ಎಸ್. ವಾಣಿ, ಕೆಕೆ ಯುಎನ್ ಏಡೆಡ್ ಸಂಸ್ಥೆಗಳ ಅಧ್ಯಕ್ಷ ಸುನೀಲ್ ಕುಮಾರ್ ಹುಡ್ಗಿ, ಅಖಿಲ ಭಾರತ ಉರ್ದು ಮಂಚ್ ಅಧ್ಯಕ್ಷ ಸೈಯದ್ ರವೂಫ್ ಕ್ವಾದ್ರಿ, ಆರ್.ಟಿ.ಡಿ. ಪ್ರಾಚಾರ್ಯ ಶಂಕರಪ್ಪ ಎಸ್. ಹಟ್ಟಿ, ಸದಾನಂದ ತರ್ಲೆ, ಸಂಧ್ಯರಾಜ್ ಶಾಮುವೆಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ವಿದ್ಯಾರ್ಥಿಯ ಮೇಲೆ ಬಸ್ ನಿರ್ವಾಹಕನ ಹಲ್ಲೆ ಖಂಡಿಸಿ ಎಬಿವಿಪಿಯಿಂದ ಪ್ರತಿಭಟನೆ

ಔರಾದ್,ಸೆ.23-

ವಿದ್ಯಾರ್ಥಿಯೊಬ್ಬರ ಮೇಲೆ ಬಸ್ ನಿರ್ವಾಹಕ ಹಲ್ಲೆ ನಡೆಸಿದ ಘಟನೆ ಖಂಡಿಸಿ ಹಾಗೂ ಔರಾದ್ ತಾಲೂಕಿನ ವಿವಿಧ ಗ್ರಾಮಗಳಿಗೆ ಸಮರ್ಪಕ ಬಸ್ ಸೌಲಭ್ಯ ಕಲ್ಪಿಸುವಂತೆ ಆಗ್ರಹಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ಕಾರ್ಯಕರ್ತರು ಬುಧವಾರ ಔರಾದ್ ಬಸ್ ನಿಲ್ದಾಣದ ಎದುರು ಬಸ್ ತಡೆದು ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ವಿದ್ಯಾರ್ಥಿಗಳು, ಬಸ್ ಸಿಬ್ಬಂದಿಯಿಂದ ವಿದ್ಯಾರ್ಥಿಗಳ ಮೇಲೆ ಯಾವುದೇ ರೀತಿಯ ದೌರ್ಜನ್ಯ ನಡೆಯಬಾರದು. ವಿದ್ಯಾರ್ಥಿಗಳೊಂದಿಗೆ ಗೌರವಯುತವಾಗಿ ವರ್ತಿಸಬೇಕು. ಹಲ್ಲೆ ಆರೋಪದ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಔರಾದ್ ತಾಲೂಕಿನ ವಿವಿಧ ಗ್ರಾಮಗಳಿಗೆ ಸಮರ್ಪಕ ಹಾಗೂ ನಿಯಮಿತ ಬಸ್ ಸೌಲಭ್ಯ ಇಲ್ಲದಿರುವುದರಿಂದ ವಿದ್ಯಾರ್ಥಿಗಳು, ರೈತರು, ಕಾರ್ಮಿಕರು ಸೇರಿದಂತೆ ಸಾರ್ವಜನಿಕರು ಪ್ರತಿನಿತ್ಯ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಔರಾದ್‌ಬೀದರ್ ಮಾರ್ಗದಲ್ಲಿ ಬೆಳಿಗ್ಗೆ ಮತ್ತು ಸಂಜೆ ಹೆಚ್ಚುವರಿ ಬಸ್‌ಗಳನ್ನು ಸಂಚರಿಸಬೇಕು. ಗ್ರಾಮೀಣ ಪ್ರದೇಶಗಳಿಗೆ ಅಗತ್ಯಕ್ಕೆ ಅನುಗುಣವಾಗಿ ನಿಯಮಿತ ಬಸ್ ಸೇವೆ ಒದಗಿಸುವಂತೆ ಸಾರಿಗೆ ಇಲಾಖೆಯನ್ನು ಆಗ್ರಹಿಸಿದರು.

ಬಸ್ ಕೊರತೆಯಿಂದ ದೂರದ ಗ್ರಾಮಗಳಿಂದ ಔರಾದ್ ಪಟ್ಟಣಕ್ಕೆ ಬರುವ ವಿದ್ಯಾರ್ಥಿಗಳು ಸಮಯಕ್ಕೆ ಸರಿಯಾಗಿ ಶಾಲೆ-ಕಾಲೇಜುಗಳಿಗೆ ತಲುಪಲು ಸಾಧ್ಯವಾಗುತ್ತಿಲ್ಲ. ಈ ಸಮಸ್ಯೆಯನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಎಬಿವಿಪಿ ಕಾರ್ಯಕರ್ತರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಎಬಿವಿಪಿ ವಿಭಾಗ ಸಂಚಾಲಕ ಪವನ್ ಕುಂಬಾರ್ ಜಿಲ್ಲಾ ಸಂಚಾಲಕ ನಾಗರಾಜ್ ಸುಲ್ತಾನಪುರೆ, ಸುರೇಶ್ ಮಾರ್ಥುಲೆ, ಪವನ್ ಪಾಂಚಳ್, ಮಹೇಶ್, ಮಾರುತಿ, ಸಂತೋಷ್, ಅಭಿಷೇಕ್ ಪಾಟೀಲ್, ಸಿದ್ದು ನಾಗರಾಳೆ,ಉಮಾಕಾಂತ್ ಕುರುಳ್ಳೆ, ಅಲ್ಕಾ, ಅಂಬಿಕಾ, ಭಾಗ್ಯಲತಾ, ಹಾವಪ್ಪಾ ದ್ಯಾಡೆ, ಅಶೋಕ್ ಶೇಂಬೆಳ್ಳಿ ಹಾಗೂ ಅಂಬಾದಾಸ್ ನಳಗೆ ಸೇರಿದಂತೆ ಅನೇಕ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕಲಬುರಗಿ ಸ್ಪೋರ್ಟ್ಸ್ ಹಬ್ಬ-2026ಕ್ಕೆ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಚಾಲನೆ



ಕಲಬುರಗಿ,ಸೆ.25-

ಕ್ರೀಡಾ ಸಂಸ್ಕೃತಿಯನ್ನು ಪ್ರೋತ್ಸಾಹಿಸುವ ಹಾಗೂ ಸ್ಥಳೀಯ ಪ್ರತಿಭೆಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ಆಯೋಜಿಸಿರುವ ಕಲಬುರಗಿ ಸ್ಪೋರ್ಟ್ಸ್ ಹಬ್ಬ-2026 ಕ್ರೀಡಾಕೂಟಕ್ಕೆ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಗುರುವಾರ ಚಾಲನೆ ನೀಡಿದರು.

ನಗರದ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕಲಬುರಗಿ ನೆಕ್ಸ್ಟ್ ಫೌಂಡೇಷನ್ ಸಹಯೋಗದಲ್ಲಿ ನಡೆದ ಸಮಾರಂಭದಲ್ಲಿ ಸುಮಾರು 12.50 ಲಕ್ಷ ರೂ. ಪ್ರಾಯೋಜಕತ್ವದ ಕ್ರೀಡಾಕೂಟದ ಜೆರ್ಸಿಯನ್ನು ಅನಾವರಣಗೊಳಿಸಿ, ಆರಂಭಿಕ ವಾಲಿಬಾಲ್ ಪಂದ್ಯಕ್ಕೆ ಸರ್ವಿಸ್ ಮಾಡುವ ಮೂಲಕ ಕ್ರೀಡಾಕೂಟಕ್ಕೆ ಅಧಿಕೃತ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ಸ್ಥಳೀಯ ಕ್ರೀಡಾಪಟುಗಳ ಪ್ರತಿಭೆಯನ್ನು ಗುರುತಿಸಿ ಅವರಿಗೆ ಉತ್ತಮ ವೇದಿಕೆ ಕಲ್ಪಿಸುವ ಉದ್ದೇಶದಿಂದ ಈ ಕ್ರೀಡಾಕೂಟ ಆಯೋಜಿಸಲಾಗಿದೆ. ನಾಲ್ಕು ದಿನಗಳ ಕಾಲ ಏಳು ವಿವಿಧ ಕ್ರೀಡೆಗಳಲ್ಲಿ ಸ್ಪರ್ಧೆಗಳು ನಡೆಯಲಿದ್ದು, ಕ್ರೀಡಾಪಟುಗಳು ಕ್ರೀಡಾ ಮನೋಭಾವನೆಯಿಂದ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು ಎಂದು ಕರೆ ನೀಡಿದರು. ಮುಂದಿನ ವರ್ಷ ಇನ್ನಷ್ಟು ಕ್ರೀಡೆಗಳನ್ನು ಸೇರಿಸುವ ಪ್ರಯತ್ನ ಮಾಡಲಾಗುವುದು ಎಂದರು.

ನಗರ ಪೊಲೀಸ್ ಆಯುಕ್ತ ಡಾ. ಎಸ್.ಡಿ. ಶರಣಪ್ಪ ಮಾತನಾಡಿ, ಕಲಬುರಗಿ ಸ್ಪೋರ್ಟ್ಸ್ ಹಬ್ಬ ಸ್ಥಳೀಯ ಕ್ರೀಡಾಪಟುಗಳಿಗೆ ತಮ್ಮ ಸಾಮರ್ಥ್ಯ ಪ್ರದರ್ಶಿಸಲು ಉತ್ತಮ ಅವಕಾಶವಾಗಿದೆ. ಯುವಕರು ಈ ಕ್ರೀಡಾಕೂಟವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ಬೆಂಗಳೂರಿನ ಸ್ಪೆಂಜೋ ಸಂಸ್ಥೆ ಹಾಗೂ ಸ್ಥಳೀಯ ಕ್ರೀಡಾ ಸಂಘಗಳ ಸಹಯೋಗದಲ್ಲಿ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ವಾಲಿಬಾಲ್, ಬ್ಯಾಡ್ಮಿಂಟನ್ ಮತ್ತು ಟೇಬಲ್ ಟೆನ್ನಿಸ್ ಪಂದ್ಯಗಳು ನಡೆಯಲಿವೆ. ಸರ್ಕಾರಿ ಪದವಿ ಕಾಲೇಜು ಆವರಣದಲ್ಲಿ ಕ್ರಿಕೆಟ್, ಎಂ.ಎಸ್.ಐ. ಪದವಿ ಪೂರ್ವ ಕಾಲೇಜಿನ ಒಳಾಂಗಣ ಕ್ರೀಡಾಂಗಣದಲ್ಲಿ ಚೆಸ್ ಹಾಗೂ ವೀರೇಂದ್ರ ಪಾಟೀಲ ಬಡಾವಣೆಯಲ್ಲಿ ಫುಟ್‌ಬಾಲ್ ಪಂದ್ಯಗಳು ಆಯೋಜಿಸಲಾಗಿದೆ.

ಕ್ರೀಡಾ ಹಬ್ಬದ ಅಂಗವಾಗಿ ಸೆಪ್ಟೆಂಬರ್ 27ರಂದು ಬೆಳಿಗ್ಗೆ 6 ಗಂಟೆಗೆ ಶ್ರೀ ಶರಣಬಸವೇಶ್ವರ ದೇವಸ್ಥಾನದಿಂದ ಸೈಕ್ಲೋಥಾನ್‌ಗೆ ಚಾಲನೆ ನೀಡಲಾಗುತ್ತದೆ. ಜಗತ್ ವೃತ್ತ, ಸರ್ಕಾರಿ ವಸ್ತು ಸಂಗ್ರಹಾಲಯ, ಖರ್ಗೆ ಪೆಟ್ರೋಲ್ ಪಂಪ್ ವೃತ್ತ, ಬುದ್ಧ ವಿಹಾರ, ಜಯದೇವ ಹೃದ್ರೋಗ ಆಸ್ಪತ್ರೆ ಹಾಗೂ ಮಿನಿ ವಿಧಾನಸೌಧ ಮಾರ್ಗವಾಗಿ ಚಂಪಾ ಕ್ರೀಡಾಂಗಣದಲ್ಲಿ ಸೈಕ್ಲೋಥಾನ್ ಸಮಾರೋಪಗೊಳ್ಳಲಿದೆ.

ಕಾರ್ಯಕ್ರಮದಲ್ಲಿ ಎಸ್‌ಪಿ ಅಡ್ಡೂರು ಶ್ರೀನಿವಾಸುಲು, ಗುಪ್ತಚರ ವಿಭಾಗದ ಎಸ್‌ಪಿ ಸ್ವಪ್ನಿಲ್ ಮಾನೆ, ಜಿಲ್ಲಾ ಪಂಚಾಯತ್ ಸಿಇಒ ರಾಹುಲ್ ಸಂಕನೂರ್, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಡಿಸಿಪಿ ಶಾಲು, ಸಹಾಯಕ ಆಯುಕ್ತೆ ರಿತಿಕಾ ವರ್ಮಾ, ಸ್ಪೆಂಜೋ ಸಂಸ್ಥೆಯ ಪ್ರವೃತ್, ವಿವಿಧ ಕ್ರೀಡಾ ಸಂಘಗಳ ಪದಾಧಿಕಾರಿಗಳು ಹಾಗೂ ಕ್ರೀಡಾ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು. ಸ್ಪೋರ್ಟ್ಸ್ ಹಬ್ಬದ ನೋಡಲ್ ಅಧಿಕಾರಿಯಾಗಿರುವ ಜಿಲ್ಲಾ ಅಲ್ಪಸಂಖ್ಯಾತ ಕಲ್ಯಾಣಾಧಿಕಾರಿ ಸಂಗಮೇಶ ಅವರು ಕಾರ್ಯಕ್ರಮಕ್ಕೆ ಸ್ವಾಗತ ಕೋರಿದರು.

ಸಮಾಜ ಸೇವೆಯ ಮೂಲಕ ರಾಷ್ಟ್ರ ನಿರ್ಮಾಣಕ್ಕೆ ವಿದ್ಯಾರ್ಥಿಗಳು ಕೈಜೋಡಿಸಬೇಕು: ಪ್ರೊ.ಘಂಟಾ ರಮೇಶ್



ಕಲಬುರಗಿ,ಸೆ.25-

ಸಾಮಾಜಿಕ ಪರಿವರ್ತನೆ ಹಾಗೂ ರಾಷ್ಟ್ರ ನಿರ್ಮಾಣದಲ್ಲಿ ರಾಷ್ಟ್ರೀಯ ಸೇವಾ ಯೋಜನೆ (ಎನ್ನೆಸ್ಸೆಸ್) ಮಹತ್ವದ ಪಾತ್ರ ವಹಿಸುತ್ತದೆ. ವಿದ್ಯಾರ್ಥಿಗಳು ಸಮುದಾಯದೊಂದಿಗೆ ನೇರವಾಗಿ ಬೆರೆತು, ಅಗತ್ಯವಿರುವವರಿಗೆ ನೆರವಾಗುವ ಮೂಲಕ ಸಮಾಜದ ಅಭಿವೃದ್ಧಿಗೆ ಸಕ್ರಿಯವಾಗಿ ಕೊಡುಗೆ ನೀಡಬೇಕು ಎಂದು ಹೈದರಾಬಾದ್‌ನ ಮೌಲಾನಾ ಆಜಾದ್ ರಾಷ್ಟ್ರೀಯ ಉರ್ದು ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಪ್ರೊ. ಘಂಟಾ ರಮೇಶ್ ಹೇಳಿದರು.

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ (ಸಿಯುಕೆ) ಎನ್ನೆಸ್ಸೆಸ್ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಸಾಮಾಜಿಕ ಪರಿವರ್ತನೆ ಮತ್ತು ರಾಷ್ಟ್ರನಿರ್ಮಾಣ ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಎನ್ನೆಸ್ಸೆಸ್ ಸ್ವಯಂಸೇವಕರು ಶಿಕ್ಷಣ, ಸಾಕ್ಷರತೆ, ಕಾನೂನು ಹಾಗೂ ಆರೋಗ್ಯ ಜಾಗೃತಿ, ಹಕ್ಕುಗಳ ಅರಿವು, ಚುನಾವಣಾ ಜಾಗೃತಿ ಮತ್ತು ಆರ್ಥಿಕ ಸಾಕ್ಷರತೆ ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸಬೇಕು. ಅಗತ್ಯವಿರುವವರಿಗೆ ಸೇವೆ ಸಲ್ಲಿಸುವುದು ಹಾಗೂ ಸಮಾಜದ ಅಭಿವೃದ್ಧಿಗೆ ಕೊಡುಗೆ ನೀಡುವುದು ಶಿಕ್ಷಣದ ಅವಿಭಾಜ್ಯ ಭಾಗವಾಗಿದೆ ಎಂದು ಹೇಳಿದರು.

ಯುವಜನರ ಸಹಾಯಹಸ್ತ ಸಮಾಜಕ್ಕೆ ಅಗತ್ಯವಿದ್ದು, ಸಾಮಾಜಿಕ ಪರಿವರ್ತನೆಗೆ ಎನ್ನೆಸ್ಸೆಸ್ ಅನ್ನು ಪರಿಣಾಮಕಾರಿ ಸಾಧನವಾಗಿ ಬಳಸಿಕೊಂಡು ಸಮುದಾಯ ಸೇವೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು. ಸಮಾಜ ಸೇವೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಅವರು ತಿಳಿಸಿದರು.

ಸಿಯುಕೆ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಮಾತನಾಡಿ, ವಿದ್ಯಾರ್ಥಿಗಳು ಎನ್ನೆಸ್ಸೆಸ್ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವ ಮೂಲಕ ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡಬೇಕು ಎಂದರು.

ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ)-2020 ಸಮಗ್ರ ಶಿಕ್ಷಣಕ್ಕೆ ಒತ್ತು ನೀಡಿದ್ದು, ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಯಲ್ಲಿ ಎನ್ನೆಸ್ಸೆಸ್ ಹಾಗೂ ಎನ್‌ಸಿಸಿಯಂತಹ ಚಟುವಟಿಕೆಗಳ ಮಹತ್ವವನ್ನು ಗುರುತಿಸಿದೆ. ಶೈಕ್ಷಣಿಕ ಜ್ಞಾನದ ಜೊತೆಗೆ ಸಮಾಜ ಸೇವೆಯಿಂದ ದೊರೆಯುವ ಪ್ರಾಯೋಗಿಕ ಅನುಭವವು ವಿದ್ಯಾರ್ಥಿಗಳ ವೈಯಕ್ತಿಕ ಬೆಳವಣಿಗೆ ಹಾಗೂ ಭವಿಷ್ಯದ ವೃತ್ತಿಜೀವನಕ್ಕೂ ಸಹಕಾರಿಯಾಗುತ್ತದೆ ಎಂದು ಹೇಳಿದರು.

ಕುಲಸಚಿವ ಪ್ರೊ. ಆರ್.ಆರ್. ಬಿರಾದಾರ್ ಮಾತನಾಡಿ, ಇತರರಿಗೆ ನೆರವಾಗುವುದು ಮತ್ತು ಸಮಾಜಕ್ಕೆ ಸೇವೆ ಸಲ್ಲಿಸುವುದೇ ಎನ್ನೆಸ್ಸೆಸ್‌ನ ಮೂಲ ಆಶಯವಾಗಿದೆ. ವಿದ್ಯಾರ್ಥಿಗಳು ಎನ್ನೆಸ್ಸೆಸ್ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವುದರ ಜೊತೆಗೆ ವಿಶ್ವವಿದ್ಯಾಲಯದ ಆವರಣವನ್ನು ಸ್ವಚ್ಛ ಹಾಗೂ ಹಸಿರಾಗಿಡುವ ಜವಾಬ್ದಾರಿಯನ್ನೂ ನಿರ್ವಹಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳು ಕ್ಯಾಂಪಸ್ ಸ್ವಚ್ಛತೆ, ಪ್ಲಾಸ್ಟಿಕ್ ಬಳಕೆಯಿಂದಾಗುವ ದುಷ್ಪರಿಣಾಮಗಳು ಹಾಗೂ ಸಾಮಾಜಿಕ ಜವಾಬ್ದಾರಿ ಕುರಿತು ಕಿರುನಾಟಕ ಪ್ರದರ್ಶಿಸಿದರು. ವಿಶ್ವವಿದ್ಯಾಲಯದ ಆವರಣದಲ್ಲಿ 60ಕ್ಕೂ ಹೆಚ್ಚು ಗುಲಾಬಿ ಗಿಡಗಳನ್ನು ನೆಟ್ಟು ಗುಲಾಬಿ ತೋಟಕ್ಕೆ ಚಾಲನೆ ನೀಡಲಾಯಿತು.

ಎನ್ನೆಸ್ಸೆಸ್ ಅಧಿಕಾರಿ ಹಾಗೂ ಕಾರ್ಯಕ್ರಮ ಸಂಯೋಜಕ ಡಾ.ಬುಚಿ ರೆಡ್ಡಿ ಪೊರೆಡ್ಡಿ ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಪ್ರೊ. ಜಿ.ಆರ್. ಅಂಗಡಿ, ಪ್ರೊ. ಎನ್. ಸತ್ಯನಾರಾಯಣ, ಪ್ರೊ. ದೊಡ್ಡಿ, ಡಾ. ಪಿ.ಎಸ್. ಕಟ್ಟಿಮನಿ, ಡಾ. ವಿ. ಸಾಯಿ ಅಭಿನವ, ಪ್ರೊ. ಪ್ರಶಾಂತ್, ಡಾ. ನಲ್ಲಸ್ವಾಮಿ, ಪ್ರೊ. ಜಯವೇಲ್, ಪ್ರೊ. ಅಮರೇಂದ್ರ ಮಸ್ತ, ಪ್ರೊ. ಆನಗುಂಟಿ ಸುರೇಶ್, ಡಾ. ಮಯೂರ್ ಪೂಜಾರ್, ಡಾ. ಮಿಶ್ರಾ, ಡಾ. ಆಶಾಲತ್ ಎಸ್., ಡಾ. ಬಾಗೇವಾಡಿ, ಡಾ. ಎಂ. ಶ್ರೀದೇವಿ, ಡಾ. ನಿಶಾ ಪ್ರಜಾಪತಿ, ಡಾ. ಮಂಡಲ ಚಂದ್ರಶೇಖರಗೌಡ್ ಸೇರಿದಂತೆ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಕನಿಷ್ಠ ಸೌಕರ್ಯಗಳಿಲ್ಲದ ಸರಕಾರಿ ಶಾಲೆಗಳು

ಜನಸಾಮಾನ್ಯರ ಮಕ್ಕಳು ಓದುವ ಸರಕಾರಿ ಶಾಲೆಗಳ ಬಗ್ಗೆ ಸರಕಾರ ಯಾಕೆ ನಿರ್ಲಕ್ಷ್ಯ ಧೋರಣೆ ತಾಳಿದೆಯೋ ಅರ್ಥವಾಗುತ್ತಿಲ್ಲ. ನಮ್ಮ ಮಂತ್ರಿಗಳು, ಶಾಸಕರು ಸೇರಿದಂತೆ ಅಧಿಕಾರದಲ್ಲಿರುವ ರಾಜಕಾರಣಿಗಳು ಭಾಷಣಗಳಲ್ಲಿ ಸರಕಾರಿ ಕನ್ನಡ ಶಾಲೆಗಳ ಬಗ್ಗೆ ಸಾಕಷ್ಟು ಮಾತಾಡುತ್ತಾರೆ. ಆದರೆ ಆಚರಣೆಯಲ್ಲಿ ಮಾತ್ರ ಯಾವುದೇ ಆಸಕ್ತಿಯನ್ನು ತೋರಿಸುವುದಿಲ್ಲ. ಸರಕಾರಿ ಕನ್ನಡ ಶಾಲೆಗಳು ಮುಚ್ಚಿ ಹೋಗುತ್ತಿರುವುದಕ್ಕೆ ಈ ನಿರ್ಲಕ್ಷ್ಯ ನೀತಿಯೇ ಕಾರಣ ಎಂದು ಹೇಳಿದರೆ ತಪ್ಪಾಗುವುದಿಲ್ಲ. ಅಧಿಕಾರದಲ್ಲಿರುವ ಬಹುತೇಕ ರಾಜಕಾರಣಿಗಳಿಗೆ ತಮ್ಮ ಒಡೆತನದ ಸ್ವಂತದ ಶಾಲೆ, ಕಾಲೇಜುಗಳಿವೆ. ಹೀಗಾಗಿ ಸರಕಾರಿ ಶಾಲೆಗಳ ಬಗ್ಗೆ ಅವರಿಗೆ ಆಸಕ್ತಿ ಕಡಿಮೆ ಎಂಬ ಟೀಕೆಗಳು ಆಗಾಗ ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತವೆ.

ರಾಜ್ಯದ ಸರಕಾರಿ ಕನ್ನಡ ಶಾಲೆಗಳು ತೀವ್ರವಾದ ಮೂಲಭೂತ ಸೌಕರ್ಯಗಳ ಕೊರತೆಯನ್ನು ಎದುರಿಸುತ್ತಿವೆ. ರಾಜ್ಯದಲ್ಲಿರುವ ಒಟ್ಟು 46,112 ಸರಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಪೈಕಿ 22,078 ಶಾಲೆಗಳ ಕಟ್ಟಡಗಳು ಯಾವಾಗ ಬೀಳುತ್ತವೆಯೋ ಎಂದು ಹೇಳಲಾಗದಷ್ಟು ಶಿಥಿಲಾವಸ್ಥೆಯಲ್ಲಿವೆ. ಈ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಲಕ್ಷಾಂತರ ವಿದ್ಯಾರ್ಥಿಗಳ ಸುರಕ್ಷತೆ ಅಪಾಯದಲ್ಲಿ ಇದೆ. ಈ ಶಾಲೆಗಳ ಪೈಕಿ 36,338ಕ್ಕೂ ಹೆಚ್ಚು ತರಗತಿ ಕೊಠಡಿಗಳನ್ನು ವಿಳಂಬ ಮಾಡದೆ ತಕ್ಷಣ ದುರಸ್ತಿ ಹಾಗೂ ಮರು ನಿರ್ಮಾಣ ಮಾಡಬೇಕಾಗಿದೆ. ಅದರಲ್ಲೂ ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದ ಕಲಬುರಗಿ ಜಿಲ್ಲೆಯಲ್ಲಿ ಗರಿಷ್ಠ ಅಂದರೆ 1,572 ಕೊಠಡಿಗಳು ತೀವ್ರ ಅಪಾಯದ ಸ್ಥಿತಿಯಲ್ಲಿವೆ. ಅದೇ ರೀತಿ ಬೆಳಗಾವಿ, ರಾಯಚೂರು, ಬಿಜಾಪುರ, ಮೈಸೂರು ಮೊದಲಾದ ಜಿಲ್ಲೆಗಳ ಪರಿಸ್ಥಿತಿ ಕೂಡ ಭಿನ್ನವಾಗಿಲ್ಲ. ರಾಜ್ಯದ ಸುಮಾರು 18,196(ಶೇಕಡ 40 ರಷ್ಟು) ಶಾಲೆಗಳಲ್ಲಿ ಆಟದ ಮೈದಾನಗಳೇ ಇಲ್ಲ. ಬಹುತೇಕ ಶಾಲೆಗಳಲ್ಲಿ ಶೌಚಾಲಯಗಳಿಲ್ಲ, ಇದ್ದರೂ ನಿರ್ವಹಣೆಯ ಕೊರತೆಯಿಂದ ಹಾಳಾಗಿ ಹೋಗಿವೆ. ಇದರಿಂದ ಮಕ್ಕಳ ಸರ್ವಾಂಗೀಣ ವಿಕಾಸಕ್ಕೆ ತೊಡಕಾಗಿದೆ.

ಶಿಕ್ಷಣ ಕ್ಷೇತ್ರಕ್ಕೆ ಸರಕಾರ ಹಣ ಖರ್ಚು ಮಾಡುವುದಿಲ್ಲವೆಂದಲ್ಲ. ರಾಜ್ಯದ ಮುಂಗಡ ಪತ್ರದಲ್ಲಿ ಒಟ್ಟು ವೆಚ್ಚದ ಸುಮಾರು ಶೇ.10ರಷ್ಟು ಅಂದರೆ 44,000 ಕೋಟಿ ರೂ.ಗೂ ಹೆಚ್ಚು ಅನುದಾನವನ್ನು ಮೀಸಲಿಡಲಾಗುತ್ತದೆ.ಮುಂಗಡಪತ್ರದಲ್ಲಿ ಇಷ್ಟು ಭಾರೀ ಪ್ರಮಾಣದ ಸಾರ್ವಜನಿಕರ ಬೊಕ್ಕಸದ ಹಣವನ್ನು ನೀಡಿದರೂ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮೂಲ ಸೌಕರ್ಯಗಳನ್ನು ಸುಧಾರಣೆ ಮಾಡಲು ಯಾಕೆ ಸಾಧ್ಯವಾಗಿಲ್ಲ? ಮುಂಗಡ ಪತ್ರದಲ್ಲಿ ಒದಗಿಸಲಾದ ಹಣ ಎಲ್ಲಿಗೆ ಹೋಗುತ್ತದೆ? ಇದಕ್ಕೆ ಮುಖ್ಯ ಕಾರಣ ಆಡಳಿತಾತ್ಮಕ ವೈಫಲ್ಯವಲ್ಲದೆ ಬೇರೇನೂ ಅಲ್ಲ. ಸರಕಾರಿ ಕನ್ನಡ ಶಾಲೆಗಳಿಗೆ ಸುರಕ್ಷಿತ ಕಟ್ಟಡ, ಕುಡಿಯುವ ನೀರಿನ ಪೂರೈಕೆ, ಶೌಚಾಲಯ ಹಾಗೂ ಆಟದ ಮೈದಾನಗಳಂಥ ಕನಿಷ್ಠ ಅಗತ್ಯಗಳನ್ನು ಒದಗಿಸಲು ಆಗುವುದಿಲ್ಲ ಅಂದರೆ ಹೇಗೆ? ಇದು ಶಿಕ್ಷಣ ಹಕ್ಕು ಕಾಯ್ದೆಗೆ ಅಪಚಾರ ಮಾಡಿದಂತಲ್ಲವೇ?

ಅಸುರಕ್ಷಿತ ಶಾಲೆಗಳಲ್ಲಿ ನಮ್ಮ ಮಕ್ಕಳು ಭಯಭೀತರಾಗಿ ಅಕ್ಷರ ಕಲಿಯಬೇಕಾಗಿರುವುದು ಆತಂಕಕಾರಿ ಸಂಗತಿಯಾಗಿದೆ. ಹಲವಾರು ಶಾಲೆಗಳಲ್ಲಿ ಆಟದ ಮೈದಾನಗಳಿಲ್ಲದೆ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಬಡ ವಿದ್ಯಾರ್ಥಿಗಳು ಕ್ರೀಡಾ ಚಟುವಟಿಕೆಗಳಿಂದ ವಂಚಿತರಾಗುತ್ತಿದ್ದಾರೆ. ಹಾಗಾಗಿ ಸರಕಾರಿ ಶಾಲೆಗಳಲ್ಲಿ ಆಟದ ಮೈದಾನಗಳನ್ನು ಒದಗಿಸುವುದು ತುರ್ತು ಅಗತ್ಯವಾಗಿದೆ.

ಒಂದೆಡೆ ಅಸುರಕ್ಷಿತ ಕೊಠಡಿಗಳಲ್ಲಿ ಮಕ್ಕಳು ವ್ಯಾಸಂಗ ಮಾಡುತ್ತಿದ್ದರೆ, ಇನ್ನೊಂದೆಡೆ ಅಕ್ಷರ ಕಲಿಯಬೇಕಾದ ಶಿಕ್ಷಕರ ಕೊರತೆಯನ್ನು ನಿವಾರಿಸಲು ಈವರೆಗೆ ಸಾಧ್ಯವಾಗಿಲ್ಲ. ಈಗ ತರಗತಿಗೊಬ್ಬ ಶಿಕ್ಷಕನೂ ಇಲ್ಲ. ಹೆಚ್ಚಿನ ಶಾಲೆಗಳು ಅತಿಥಿ ಶಿಕ್ಷಕರನ್ನು ಅವಲಂಬಿಸಿ ನಡೆಯುತ್ತಿವೆ. ಇದರ ಪರಿಣಾಮವಾಗಿ ಸರಕಾರಿ ಕನ್ನಡ ಶಾಲೆಗಳಲ್ಲಿ ಮಕ್ಕಳ ದಾಖಲಾತಿಯ ಪ್ರಮಾಣವು ತೀವ್ರವಾಗಿ ಕುಸಿಯುತ್ತಿದೆ. ಹಾಗಾಗಿ ಸರಕಾರ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ತುರ್ತಾಗಿ ಭರ್ತಿ ಮಾಡಿಕೊಳ್ಳಬೇಕಾಗಿದೆ. ಇದರ ಜೊತೆಗೆ ಕೆಪಿಎಸ್ ಶಾಲೆಗಳ ಆರಂಭದ ನೆಪದಲ್ಲಿ ಯಾವುದೇ ಕಾರಣಕ್ಕೂ ಗ್ರಾಮೀಣ ಪ್ರದೇಶಗಳಲ್ಲಿ ಇರುವ ಸರಕಾರಿ ಶಾಲೆಗಳನ್ನು ಮುಚ್ಚಬಾರದು.

ಸರಕಾರಿ ಕನ್ನಡ ಶಾಲೆಗಳು ಖಾಸಗಿ ಶಾಲೆಗಳ ಜೊತೆಗೆ ಪೈಪೋಟಿ ನಡೆಸಬೇಕಾಗಿದೆ. ಅದಕ್ಕಾಗಿ ಈ ಶಾಲೆಗಳಿಗೆ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕ್ರಮವನ್ನು ಕೈಗೊಳ್ಳಬೇಕು. ಇಲ್ಲದಿದ್ದರೆ ಪೋಷಕರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಸೇರಿಸಲು ಹಿಂಜರಿಯುವುದಿಲ್ಲ. ಸರಕಾರ ಈ ಸಮಸ್ಯೆಗೆ ಶಾಶ್ವತ ಪರಿಹಾರವನ್ನು ಕಂಡು ಹಿಡಿಯಬೇಕಾಗಿದೆ. ಕುಸಿಯುವ ಸ್ಥಿತಿಯಲ್ಲಿ ಇರುವ ಶಾಲಾ ಕಟ್ಟಡಗಳನ್ನು ಹಾಗೂ ಕೊಠಡಿಗಳನ್ನು ಪುನರ್‌ನಿರ್ಮಾಣ ಮಾಡಬೇಕು. ಯಾವುದೇ ಅನಾಹುತ ಸಂಭವಿಸುವ ಮುನ್ನ ಶಿಕ್ಷಣ ಇಲಾಖೆ ಎಚ್ಚೆತ್ತು ರಾಜ್ಯದ ಪ್ರತಿಯೊಂದು ಸರಕಾರಿ ಕನ್ನಡ ಶಾಲೆಯನ್ನು ಸುರಕ್ಷಿತ ಹಾಗೂ ಗುಣಮಟ್ಟದ ಕಲಿಕಾ ಕೇಂದ್ರವನ್ನಾಗಿ ಮಾಡಲು ಸಂಕಲ್ಪ ಮಾಡಬೇಕಾಗಿದೆ.

ಸರಕಾರಿ ಕನ್ನಡ ಶಾಲೆಗಳನ್ನು ಉಳಿಸಿಕೊಳ್ಳಲು ಅಧಿಕಾರದಲ್ಲಿರುವವರು ಆಸಕ್ತಿ ತೋರಿಸುವುದು ಅಗತ್ಯವಾಗಿದೆ. ವೇದಿಕೆಗಳಲ್ಲಿ ನಿಂತು ಸರಕಾರಿ ಕನ್ನಡ ಶಾಲೆಗಳ ಬಗ್ಗೆ ತುಟಿ ಸೇವೆ ಸಲ್ಲಿಸಿದರೆ ಸಾಲದು. ಸರಕಾರಿ ಶಾಲೆಗಳು ವಿದ್ಯಾರ್ಥಿಗಳ ಕೊರತೆಯಿಂದ ಮುಚ್ಚುತ್ತಿರುವಾಗ ಖಾಸಗಿ ಶಾಲೆಗಳಿಗೆ ಪರವಾನಿಗೆ ನೀಡುತ್ತಿರುವುದನ್ನು ಕೈ ಬಿಡಬೇಕು. ಅಧಿಕಾರದಲ್ಲಿರುವ ಎಷ್ಟು ಜನ ಮಂತ್ರಿಗಳು ಹಾಗೂ ಶಾಸಕರ ಮಕ್ಕಳು ಸರಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಾರೆ ಎಂಬ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಬೇಕು. ಅಷ್ಟೇ ಅಲ್ಲ ಎಷ್ಟು ಜನ ರಾಜಕಾರಣಿಗಳು ಮತ್ತು ಅಧಿಕಾರಿಗಳು ತಮ್ಮದೇ ಆದ ಶಾಲೆ, ಕಾಲೇಜುಗಳನ್ನು ಹೊಂದಿದ್ದಾರೆ ಎಂಬುದನ್ನು ಬಹಿರಂಗ ಪಡಿಸಲಿ. ತಮ್ಮದೇ ಆದ ಸ್ವಂತದ ಶಾಲೆಗಳನ್ನು ಹೊಂದಿದವರಿಗೆ ಸರಕಾರಿ ಶಾಲೆಗಳ ಅಭಿವೃದ್ಧಿಗಿಂತ ತಮ್ಮ ಶಾಲೆಗಳ ಹಿತಾಸಕ್ತಿ ಮುಖ್ಯವಾಗಿರುತ್ತದೆ. ಹಾಗಾಗಿ ಸರಕಾರ ಇವೆಲ್ಲ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಸರಕಾರಿ ಕನ್ನಡ ಶಾಲೆಗಳನ್ನು ಉಳಿಸಿ ಬೆಳೆಸಬೇಕಾಗಿದೆ.

ಕಾವಲು ನಾಯಿ ಮನೆಯ ಒಡೆಯನನ್ನೇ ಕಚ್ಚಿದೆ

ಪ್ರಜಾಸತ್ತೆಯ ಬಾಗಿಲು ಕಾಯಬೇಕಾಗಿದ್ದ ಮುಖ್ಯ ಚುನಾವಣಾ ಆಯುಕ್ತರು ಪ್ರಜಾಸತ್ತೆಯ ಬೆನ್ನಿಗಿರಿದಿರುವುದು ಇದೀಗ ದೇಶಾದ್ಯಂತ ಚರ್ಚೆಯಲ್ಲಿದೆ. ದೇಶದ ಚುನಾವಣೆಯು ಸುಸೂತ್ರವಾಗಿ ನಡೆಯುವಂತೆ ನೋಡಿಕೊಳ್ಳಬೇಕಾದ ಚುನಾವಣಾ ಆಯೋಗವೇ ಚುನಾವಣೆಯನ್ನು ಅಸ್ತವ್ಯಸ್ತಗೊಳಿಸಿರುವುದು, ತನ್ನ ಹಸ್ತಕ್ಷೇಪದ ಮೂಲಕ ಜನಾದೇಶವನ್ನೇ ಹೈಜಾಕ್ ಮಾಡಿರುವುದು ಇಂದಿರಾಗಾಂಧಿ ಈ ದೇಶದ ಮೇಲೆ ತುರ್ತು ಪರಿಸ್ಥಿತಿ ಹೇರಿರುವುದಕ್ಕಿಂತಲೂ ಭೀಕರವಾಗಿದೆ. ಇಂದಿರಾಗಾಂಧಿಯವರು 70ರ ದಶಕದಲ್ಲಿ ಸಂವಿಧಾನವನ್ನು ಅಮಾನತಿನಲ್ಲಿಟ್ಟರೆ, ಇಂದು ಸಂವಿಧಾನವನ್ನು ದುರ್ಬಳಕೆ ಮಾಡಿಕೊಂಡು ಪ್ರಜಾಪ್ರಭುತ್ವವನ್ನು ಅಮಾನತಿನಲ್ಲಿಡಲಾಗಿದೆ. ಚುನಾವಣಾ ಆಯೋಗವನ್ನು ಬಳಸಿಕೊಂಡು, ದೇಶದ ಪ್ರಧಾನಿ ತನಗೆ ಪೂರಕವಾದ ಜನಾದೇಶವನ್ನು ಸಿದ್ಧಪಡಿಸಿಕೊಳ್ಳುವುದು ಪರೋಕ್ಷವಾಗಿ ದೇಶದ ಮೇಲೆ ತುರ್ತುಪರಿಸ್ಥಿತಿಯನ್ನು ಹೇರಿದಂತೆಯೇ ಸರಿ.

ದೇಶಾದ್ಯಂತ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆಯ ಮೇಲಿರುವ ಆರೋಪ ಇದೀಗ ನಿರ್ಣಾಯಕ ಹಂತವನ್ನು ತಲುಪಿದೆ. ಈವರೆಗೆ ಇದನ್ನು ಚುನಾವಣಾ ಆಯೋಗದ ನಿರ್ಧಾರವೆಂದು ಭಾವಿಸಿಕೊಂಡು ಬರಲಾಗಿತ್ತಾದರೆ, ಇದೀಗ ಈ ನಿರ್ಧಾರಕ್ಕೆ ಸ್ವತಃ ಚುನಾವಣಾ ಆಯೋಗದೊಳಗೇ ಆಕ್ಷೇಪಗಳಿದ್ದಿರುವುದು ಬಹಿರಂಗವಾಗಿದೆ. ಎಸ್‌ಐಆರ್ ಪ್ರಕ್ರಿಯೆಗಳ ಬಗ್ಗೆ ಚುನಾವಣಾ ಆಯುಕ್ತರಾದ ಸುಖ್ಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿಯವರು ಹತ್ತು ತಿಂಗಳ ಅವಧಿಯಲ್ಲಿ 14 ಬಾರಿ ಆಕ್ಷೇಪಗಳನ್ನು ಸಲ್ಲಿಸಿರುವುದು ಆಂಗ್ಲ ಪತ್ರಿಕೆಯೊಂದರ ವಿಶೇಷ ವರದಿಯಿಂದ ಬಹಿರಂಗವಾಗಿದೆ. ಮತದಾರರ ಹೆಸರುಗಳ ಅಳಿಸುವಿಕೆ, ಚುನಾವಣಾ ದತ್ತಾಂಶದ ನಿರ್ವಹಣೆ, ಹೊಸ ಮತದಾರರ ಸೇರ್ಪಡೆ, ಮತದಾರರ ಪಟ್ಟಿಗೆ ಸಂಬಂಧಿಸಿದ ನಿರ್ಧಾರಗಳ ಕುರಿತು ಈ ಇಬ್ಬರು ಚುನಾವಣಾ ಆಯುಕ್ತರು ಪದೇ ಪದೇ ಕಳವಳ ಮತ್ತು ಆಕ್ಷೇಪಗಳನ್ನು ವ್ಯಕ್ತಪಡಿಸಿದ್ದರೂ, ಮುಖ್ಯ ಚುನಾವಣಾ ಆಯುಕ್ತರು ಏಕ ಪಕ್ಷೀಯವಾಗಿ ನಿರ್ಧಾರಗಳನ್ನು ತೆಗೆದುಕೊಂಡಿದ್ದರು ಎನ್ನುವ ಅಂಶ ಬಹಿರಂಗವಾಗಿದೆ. ವಿಪರ್ಯಾಸವೆಂದರೆ, ಚುನಾವಣಾ ಆಯುಕ್ತರು ವ್ಯಕ್ತಪಡಿಸಿದ್ದರೆನ್ನಲಾದ ಆಕ್ಷೇಪಗಳನ್ನು ಆಯೋಗವು ನಿರಾಕರಿಸಿಲ್ಲ. ಯಾವುದೇ ಸಂಸ್ಥೆಯಲ್ಲಿ ಚರ್ಚೆ-ಸಮಾಲೋಚನೆಗಳ ವೇಳೆ ವಿಭಿನ್ನ ದೃಷ್ಟಿಕೋನಗಳು ಮತ್ತು ಅಭಿಪ್ರಾಯಗಳು ವ್ಯಕ್ತವಾಗುವುದು ಸಹಜ ಪ್ರಕ್ರಿಯೆ ಎಂದು ಪರೋಕ್ಷವಾಗಿ ಮುಖ್ಯ ಚುನಾವಣಾ ಆಯುಕ್ತರು ತೆಗೆದುಕೊಂಡ ನಿರ್ಧಾರಗಳನ್ನು ಸಮರ್ಥಿಸಿಕೊಂಡಿದೆ.

ಇಷ್ಟಕ್ಕೂ ವ್ಯಕ್ತವಾಗಿರುವ ಆಕ್ಷೇಪಣೆಗಳಾದರೂ ಎಂತಹದು? ಚುನಾವಣಾ ಆಯೋಗದ ಅನುಮತಿಯಿಲ್ಲದೆ ತನ್ನ ಹೆಸರಿನಲ್ಲಿ ಪತ್ರಗಳು, ಆದೇಶಗಳು ಬಿಡುಗಡೆಯಾಗುತ್ತಿರುವ ಬಗ್ಗೆ ಕಳೆದ ವರ್ಷ ಅಕ್ಟೋಬರ್‌ನಲ್ಲಿ ಸಂಧು ಆಕ್ಷೇಪ ವ್ಯಕ್ತಪಡಿಸಿದ್ದರು. ಚುನಾವಣಾ ಆಯೋಗದ ಹೊಸ ಮಾಹಿತಿ ತಂತ್ರಜ್ಞಾನ ಸಲಕರಣೆಗಳು ಮತ್ತು ವೆಬ್ ಸೈಟ್‌ಗಳ ಬಗ್ಗೆ ನನಗೆ ಯಾವುದೇ ಮಾಹಿತಿಯಿರಲಿಲ್ಲ ಎನ್ನುವುದನ್ನು ಸಂಧು ಇದೇ ಎಪ್ರಿಲ್‌ನಲ್ಲಿ ಕಳವಳ ವ್ಯಕ್ತಪಡಿಸಿದ್ದರು. ಒಂದು ವರ್ಷಕ್ಕಿಂತಲೂ ಹೆಚ್ಚಿನ ಅವಧಿಯಿಂದ ನನಗೆ ಯಾವುದೇ ಜವಾಬ್ದಾರಿ ನೀಡಲಾಗಿಲ್ಲ, ಆಯೋಗದ ಸಭೆಗಳ ಬಳಿಕ ಅದರ ನಿರ್ಣಯಗಳನ್ನು ನನಗೆ ತೋರಿಸುತ್ತಿಲ್ಲ ಎಂದು ಜೋಶಿಯವರು ಎ. 16ರಂದು ಆಕ್ಷೇಪವನ್ನು ಮಾಡಿದ್ದರು. ಮತದಾರರ ಪಟ್ಟಿಯ ದತ್ತಾಂಶ ಕೋಶವನ್ನು ಕೇಂದ್ರೀಕರಿಸಲಾಗುತ್ತಿದೆ. ಅದರ ಪರಿಶೀಲನೆ ಅಗತ್ಯ ಎಂದು ಮೇ 16ರಂದು ಜೋಶಿಯವರು ಅಭಿಪ್ರಾಯ ಪಟ್ಟಿದ್ದರು. ಆದರೆ ಇದನ್ನೂ ಮುಖ್ಯ ಚುನಾವಣಾ ಆಯುಕ್ತರು ನಿರ್ಲಕ್ಷಿಸಿದ್ದರು. ಆಯೋಗಕ್ಕೆ ಮಾಹಿತಿಯಿಲ್ಲದೆ ಆಯೋಗದ ಕೆಲಸವನ್ನು ಮರು ಹಂಚಿಕೆ ಮಾಡಲಾಗುತ್ತಿದೆ ಎಂದು ಜೋಶಿಯವರು ಜು. 29ರಂದು ಸಂಪುಟ ಕಾರ್ಯದರ್ಶಿಗೆ ತಮ್ಮ ಆಕ್ಷೇಪವನ್ನು ಸಲ್ಲಿಸಿದ್ದರು. ನಮೂನೆ 6ರಲ್ಲಿನ ಬದಲಾವಣೆಯು ಅನಧಿಕೃತ ಮತ್ತು ಕಾನೂನು ಬಾಹಿರ ಎಂದು ಸಂಧು ಅವರು ಆಗಸ್ಟ್ 13ರಂದು ಆಕ್ಷೇಪಣೆ ವ್ಯಕ್ತಪಡಿಸಿದ್ದರು. ಹಾಗೆಯೇ ಆಗಸ್ಟ್ 14ರಂದು ಸಂಧು ಅವರು, ಚುನಾವಣಾ ಆಯೋಗದ ವೆಬ್ ಸೈಟ್‌ಗಳಿಗೆ ಕ್ಷೇತ್ರಾಧಿಕಾರಿಗಳಿಗೆ ಪ್ರವೇಶ ಸಿಗುತ್ತಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದ್ದರು. ಪ್ರವೇಶ ನಿರ್ಬಂಧಿಸಲು ಐಟಿ ಮಹಾನಿರ್ದೇಶಕರಿಗೆ ಅಧಿಕಾರವಿಲ್ಲ ಎಂದು ಹೇಳಿದ್ದರು. ಇವೆಲ್ಲವೂ ವಿಭಿನ್ನ ದೃಷ್ಟಿಕೋನಗಳು, ಭಿನ್ನಾಭಿಪ್ರಾಯಗಳು ಎಂದು ತಳ್ಳಿ ಹಾಕುವ ಆಕ್ಷೇಪಗಳೆ? ಇಡೀ ಚುನಾವಣಾ ಆಯೋಗದಲ್ಲಿ ಇಬ್ಬರು ಆಯುಕ್ತರ ಅಸ್ತಿತ್ವವನ್ನು ಸಂಪೂರ್ಣ ನಿರ್ಲಕ್ಷಿಸಿ ಮುಖ್ಯ ಆಯುಕ್ತರು ಸರ್ವಾಧಿಕಾರಿಯಂತೆ ನಿರ್ಧಾರಗಳನ್ನು ತೆಗೆದುಕೊಂಡಿದ್ದಾರೆ ಎನ್ನುವುದನ್ನು ಇದು ಸ್ಪಷ್ಟಪಡಿಸುತ್ತದೆ. ಪರಿಣಾಮವಾಗಿ ಇಂದು ಈ ದೇಶದ ಕೋಟ್ಯಂತರ ಮತದಾರರು ತಮ್ಮ ಮತದಾನದ ಹಕ್ಕುಗಳನ್ನು ಕಳೆದುಕೊಳ್ಳುವುದಕ್ಕೆ ಅವರೇ ನೇರ ಹೊಣೆಯಾಗಿದ್ದಾರೆ.

ಟಿ.ಎನ್. ಶೇಷನ್‌ನಂತಹ ನಿಷ್ಠುರ, ಮುತ್ಸದ್ದಿ ಮುಖ್ಯಚುನಾವಣಾ ಆಯುಕ್ತರು ಚುನಾವಣಾ ಆಯೋಗದ ಅಸ್ತಿತ್ವವನ್ನು ಎತ್ತಿ ಹಿಡಿದಿದ್ದರು. ಈ ದೇಶದ ಜನತೆಗೆ ಪ್ರಜಾಸತ್ತೆಯ ಮೇಲೆ ಭರವಸೆ ಮೂಡುವಂತೆ ಅವರು ಕೆಲಸ ಮಾಡಿದ್ದರು. ಆ ಬಳಿಕದ ಕೆಲವು ಚುನಾವಣಾ ಆಯುಕ್ತರಿಗೆ ಅವರಂತೆ ನಿಷ್ಠುರವಾಗಿ ಕೆಲಸ ಮಾಡಲು ಸಾಧ್ಯವಾಗದೇ ಇದ್ದರೂ, ಆಳುವವರ ಗುಲಾಮರಾಗಿ ತಮ್ಮ ಹುದ್ದೆಯ ಘನತೆಗೆ ಧಕ್ಕೆ ತಂದಿರಲಿಲ್ಲ. ಆದರೆ, ಜ್ಞಾನೇಶ್ ಕುಮಾರ್ ಅವರು ಚುನಾವಣಾ ಆಯೋಗವನ್ನು ಚುನಾವಣಾ ವ್ಯವಸ್ಥೆಯನ್ನು ಬುಡಮೇಲುಗೊಳಿಸುವುದಕ್ಕೆ ಬಳಸಿಕೊಂಡರು. ವಿರೋಧ ಪಕ್ಷದ ನಾಯಕರು ಆರೋಪಿಸುವಂತೆ, ಜ್ಞಾನೇಶ್ ಅವರು ಮಾಡಿರುವುದು ಸಂವಿಧಾನ ದ್ರೋಹದ ಕೆಲಸ, ದೇಶ ದ್ರೋಹದ ಕೆಲಸ. ಸಂವಿಧಾನಕ್ಕೆ ಚೇತರಿಸಿಕೊಳ್ಳಲಾಗದಷ್ಟು ಹಾನಿಯನ್ನು ಅವರು ಈಗಾಗಲೇ ಮಾಡಿದ್ದಾರೆ.

ತೆಲಂಗಾಣ ಬೆಳೆ ರಕ್ಷಣೆಗೆ 3 ಟಿಎಂಸಿ ನೀರು: ಅಚ್ಚುಕಟ್ಟು ಪ್ರದೇಶದ ರೈತರ ಭವಿಷ್ಯವೇನು?

ಕೃಷ್ಣಾ ನದಿಯ ನೀರು ಮತ್ತೊಮ್ಮೆ ಕರ್ನಾಟಕ-ತೆಲಂಗಾಣದ ನಡುವಿನ ಪ್ರಮುಖ ವಿಚಾರವಾಗಿ ಮುನ್ನೆಲೆಗೆ ಬಂದಿದೆ. ತೆಲಂಗಾಣದ ಕೃಷಿ ಪ್ರದೇಶದಲ್ಲಿನ ನಿಂತಿರುವ ಬೆಳೆಗಳನ್ನು ರಕ್ಷಿಸಲು ಕರ್ನಾಟಕದಿಂದ ಕೃಷ್ಣಾ ನೀರು ಬಿಡುಗಡೆ ಮಾಡುವಂತೆ ಆ ರಾಜ್ಯದ ಸಚಿವರು ಹಾಗೂ ಶಾಸಕರ ನಿಯೋಗ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭೇಟಿಯಾಗಿ ಮನವಿ ಮಾಡಿರುವ ಬೆನ್ನಲ್ಲೇ, ಆಲಮಟ್ಟಿ-ನಾರಾಯಣಪುರ ಜಲಾಶಯಗಳ ನೀರಿನ ಲೆಕ್ಕಾಚಾರ ಕೃಷ್ಣಾ ಅಚ್ಚುಕಟ್ಟು ಪ್ರದೇಶದ ರೈತರಲ್ಲಿ ಹೊಸ ಆತಂಕ ಮೂಡಿಸಿದೆ.



ಸೆ.22ರಂದು ಬೆಂಗಳೂರಿನಲ್ಲಿ ತೆಲಂಗಾಣದ ಸಚಿವರಾದ ಜೂಪಲ್ಲಿ ಕೃಷ್ಣರಾವ್ ಹಾಗೂ ವಕಿಟಿ ಶ್ರೀಹರಿ ನೇತೃತ್ವದ ನಿಯೋಗ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿ, ಜುರಾಲಾ, ಭೀಮಾ, ನೆಟ್ಟೆಂಪಾಡು ಹಾಗೂ ಕೊಯಿಲ್‌ಸಾಗರ ನೀರಾವರಿ ಯೋಜನೆಗಳ ವ್ಯಾಪ್ತಿಯ ಸುಮಾರು 5.5 ಲಕ್ಷ ಎಕರೆ ಬೆಳೆಗಳನ್ನು ರಕ್ಷಿಸಲು 5,000 ಕ್ಯುಸೆಕ್ ಕೃಷ್ಣಾ ನೀರನ್ನು ಒಂದು ತಿಂಗಳ ಕಾಲ ನಿರಂತರವಾಗಿ ಬಿಡುಗಡೆ ಮಾಡುವಂತೆ ಮನವಿ ಮಾಡಿದೆ.

ಈ ಬೇಡಿಕೆಯ ಬೆನ್ನಲ್ಲೇ ಕರ್ನಾಟಕವು ನಾರಾಯಣಪುರ ಜಲಾಶಯದಿಂದ 3 ಟಿಎಂಸಿ ನೀರನ್ನು ಹಂತ ಹಂತವಾಗಿ ಬಿಡುಗಡೆ ಮಾಡಲು ಒಪ್ಪಿಗೆ ನೀಡಿದೆ ಎಂಬ ವರದಿಗಳು ಹೊರಬಿದ್ದಿವೆ.

''ತೆಲಂಗಾಣದ ಬೆಳೆಗಳಿಗೆ ನೀರು ಬೇಕು ಎಂಬುದು ಸತ್ಯ. ಆದರೆ ಕರ್ನಾಟಕದ ಹಿಂಗಾರು ಬೆಳೆ, ಜಾನುವಾರು, ಕುಡಿಯುವ ನೀರು ಹಾಗೂ ಮುಂದಿನ ಮುಂಗಾರು ತನಕದ ನೀರಿನ ಭದ್ರತೆಯ ಲೆಕ್ಕವೇನು?

ಆಲಮಟ್ಟಿಯಲ್ಲಿ ನೀರು ಇದೆ ಆದರೆ ಅದು ಸಂಪೂರ್ಣವಾಗಿ ಹೆಚ್ಚುವರಿ ನೀರೇ?

ಪ್ರಸ್ತುತ ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳಲ್ಲಿ ಗಮನಾರ್ಹ ಪ್ರಮಾಣದ ನೀರು ಸಂಗ್ರಹವಾಗಿದೆ. ಆದರೆ ಜಲಾಶಯದಲ್ಲಿ ಕಾಣುವ ಒಟ್ಟು ನೀರಿನ ಪ್ರಮಾಣವನ್ನೇ ಬಳಕೆಗೆ ಲಭ್ಯವಿರುವ ನೀರು ಎಂದು ಪರಿಗಣಿಸಲು ಸಾಧ್ಯವಿಲ್ಲ. ಡೆಡ್ ಸ್ಟೋರೇಜ್, ಕುಡಿಯುವ ನೀರು, ನೀರಾವರಿ, ಕೈಗಾರಿಕೆ ಹಾಗೂ ಇತರ ಅಗತ್ಯಗಳಿಗಾಗಿ ನೀರನ್ನು ಕಾಯ್ದಿರಿಸಬೇಕಾಗುತ್ತದೆ.

ರೈತರ ಲೆಕ್ಕಾಚಾರದ ಪ್ರಕಾರ, ಎರಡೂ ಜಲಾಶಯಗಳಲ್ಲಿ ಡೆಡ್ ಸ್ಟೋರೇಜ್ ಹೊರತುಪಡಿಸಿ ಸುಮಾರು 106.447 ಟಿಎಂಸಿ ನೀರು ಬಳಕೆಗೆ ಲಭ್ಯವಿದೆ. ಇದರಲ್ಲಿ ವಿವಿಧ ಉದ್ದೇಶಗಳಿಗೆ ಸುಮಾರು 80 ಟಿಎಂಸಿ ನೀರು ಬಳಕೆಯಾಗಬೇಕಿದ್ದು, ಉಳಿಯುವ ನೀರಿನ ಪ್ರಮಾಣ ಸೀಮಿತವಾಗಲಿದೆ ಎಂಬುದು ರೈತರ ವಾದ.

ಅಂದರೆ ಜಲಾಶಯದಲ್ಲಿ ನೀರು ಕಾಣುತ್ತಿದೆ ಎಂಬ ಕಾರಣಕ್ಕೆ ಅದನ್ನು ಸಂಪೂರ್ಣವಾಗಿ ಹೊರಗೆ ಹರಿಸಲು ಸಾಧ್ಯವಿಲ್ಲ.ಇಂದಿನ ನೀರಿನ ಒಂದು ಟಿಎಂಸಿ ನಾಳೆಯ ಹಿಂಗಾರು ಬೆಳೆಗೆ, ನಾಳಿನ ಕುಡಿಯುವ ನೀರಿಗೆ ಅಥವಾ ಬೇಸಿಗೆಯ ಸಂಕಷ್ಟಕ್ಕೆ ಬೇಕಾಗಬಹುದು.

ತೆಲಂಗಾಣದ ನಿಯೋಗವು 5,000 ಕ್ಯುಸೆಕ್ ನೀರನ್ನು 30 ದಿನಗಳ ಕಾಲ ನಿರಂತರವಾಗಿ ಬಿಡುಗಡೆ ಮಾಡುವಂತೆ ಕೇಳಿತ್ತು. ಈ ಬೇಡಿಕೆಯ ಹಿನ್ನೆಲೆ ಜುರಾಲಾ, ಭೀಮಾ, ನೆಟ್ಟೆಂಪಾಡು ಹಾಗೂ ಕೊಯಿಲ್‌ಸಾಗರ ಯೋಜನೆಗಳ ವ್ಯಾಪ್ತಿಯ 5.5 ಲಕ್ಷ ಎಕರೆ ಬೆಳೆಗಳನ್ನು ಉಳಿಸುವ ಅಗತ್ಯವನ್ನು ತೆಲಂಗಾಣ ಸರ್ಕಾರ ಮುಂದಿಟ್ಟಿದೆ.ಆದರೆ ಕರ್ನಾಟಕಕ್ಕೆ ಇದು ಕೇವಲ ಒಂದು ತಿಂಗಳ ನೀರಿನ ಪ್ರಶ್ನೆಯಲ್ಲ.

ಆಲಮಟ್ಟಿ ಮತ್ತು ನಾರಾಯಣಪುರದ ನೀರನ್ನು ಹಿಂಗಾರು ಹಂಗಾಮು, ಕುಡಿಯುವ ನೀರು ಮತ್ತು ಮುಂದಿನ ಮಳೆಗಾಲದವರೆಗೆ ಲೆಕ್ಕ ಹಾಕಬೇಕಾಗಿದೆ. ಇದರಿಂದಲೇ ಕೃಷ್ಣಾ ಅಚ್ಚುಕಟ್ಟು ಪ್ರದೇಶದ ರೈತರ ಆತಂಕ ಹೆಚ್ಚಾಗಿದೆ.

ತೆಲಂಗಾಣದ ರೈತರಿಗೆ ಬೆಳೆ ಉಳಿಸಿಕೊಳ್ಳಲು ನೀರು ಬೇಕಾಗಿದೆ. ಅದೇ ರೀತಿ ವಿಜಯಪುರ, ಬಾಗಲಕೋಟೆ, ಯಾದಗಿರಿ, ರಾಯಚೂರು ಸೇರಿದಂತೆ ಕೃಷ್ಣಾ ಅಚ್ಚುಕಟ್ಟು ಪ್ರದೇಶದ ರೈತರೂ ನೀರಿನ ಮೇಲೆ ಅವಲಂಬಿತರಾಗಿದ್ದಾರೆ.

ಒಂದು ರಾಜ್ಯದ ಬೆಳೆ ಉಳಿಸುವ ನಿರ್ಧಾರ ಮತ್ತೊಂದು ರಾಜ್ಯದ ರೈತರ ಭವಿಷ್ಯದ ನೀರಿನ ಲೆಕ್ಕಾಚಾರಕ್ಕೆ ಧಕ್ಕೆಯಾಗಬಾರದು ಎಂಬುದು ಇಲ್ಲಿನ ರೈತರ ಪ್ರಮುಖ ವಾದ.ವಿಶೇಷವಾಗಿ ಬರ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಜಲಾಶಯದಲ್ಲಿರುವ ಪ್ರತಿಯೊಂದು ಟಿಎಂಸಿ ನೀರಿಗೂ ಮುಂದಿನ ಬಳಕೆಯ ಲೆಕ್ಕ ಇರಬೇಕು ಎಂದು ರೈತರು ಒತ್ತಾಯಿಸುತ್ತಿದ್ದಾರೆ.

ನೀರಾವರಿಯಷ್ಟೇ ಅಲ್ಲ; ವಿಜಯಪುರ, ಬಾಗಲಕೋಟೆ ಸೇರಿದಂತೆ ಕೃಷ್ಣಾ ನದಿ ಹಾಗೂ ಜಲಾಶಯಗಳ ಮೇಲೆ ಅವಲಂಬಿತವಾಗಿರುವ ನಗರಗ್ರಾಮೀಣ ಪ್ರದೇಶಗಳ ಕುಡಿಯುವ ನೀರಿನ ಭದ್ರತೆಯೂ ಈ ಚರ್ಚೆಯ ಭಾಗವಾಗಿದೆ.

ಹೀಗಾಗಿ ರೈತರ ಪ್ರಶ್ನೆ ಸರಳವಾಗಿದೆ: ''ಹಿಂಗಾರು ಬೆಳೆಗೂ ನೀರು ಬೇಕು. ಬೇಸಿಗೆಯಲ್ಲೂ ಕುಡಿಯುವ ನೀರು ಬೇಕು. ಮುಂದಿನ ಮುಂಗಾರಿನವರೆಗೆ ಜಲಾಶಯದಲ್ಲಿ ಕನಿಷ್ಠ ಭದ್ರತಾ ಸಂಗ್ರಹ ಇರಬೇಕು. ಈ ಎಲ್ಲ ಅಗತ್ಯಗಳನ್ನು ಪೂರೈಸಿದ ನಂತರವೇ ಹೆಚ್ಚುವರಿ ನೀರಿನ ಲೆಕ್ಕ ಹಾಕಲಾಗುತ್ತಿದೆಯೇ?''ಈ ಪ್ರಶ್ನೆಗೆ ಸರ್ಕಾರದಿಂದ ಸ್ಪಷ್ಟವಾದ ನೀರಿನ ಲೆಕ್ಕಾಚಾರ ಹೊರಬರಬೇಕು ಎಂಬ ಬೇಡಿಕೆ ಕೇಳಿಬರುತ್ತಿದೆ.

ಕರ್ನಾಟಕವು 3 ಟಿಎಂಸಿ ನೀರನ್ನು ಹಂತ ಹಂತವಾಗಿ ಬಿಡುಗಡೆ ಮಾಡಲು ಒಪ್ಪಿಕೊಂಡಿರುವುದು ತೆಲಂಗಾಣದ ತುರ್ತು ಕೃಷಿ ಅಗತ್ಯಕ್ಕೆ ಪ್ರತಿಕ್ರಿಯೆಯಾಗಿದೆ. ಆದರೆ ತೆಲಂಗಾಣದ ಆರಂಭಿಕ ಬೇಡಿಕೆ 5,000 ಕ್ಯುಸೆಕ್‌ನ್ನು 30 ದಿನಗಳ ಕಾಲ ಬಿಡುಗಡೆ ಮಾಡುವುದಾಗಿತ್ತು.ಹೀಗಾಗಿ ಈಗ ಚರ್ಚೆಯ ಕೇಂದ್ರಬಿಂದು ಎಷ್ಟು ನೀರು ಬಿಡುಗಡೆ ಆಗುತ್ತದೆ ಎಂಬುದಕ್ಕಿಂತ, ಬಿಡುಗಡೆ ನಂತರ ಕರ್ನಾಟಕದ ಜಲಾಶಯಗಳಲ್ಲಿ ಉಳಿಯುವ ನೀರಿನ ಪ್ರಮಾಣ ಎಷ್ಟು? ಎಂಬುದಾಗಿದೆ.

ಇದೇ ಲೆಕ್ಕಾಚಾರವನ್ನು ಸಾರ್ವಜನಿಕವಾಗಿ ಪ್ರಕಟಿಸಿ, ಹಿಂಗಾರು ಬೆಳೆ ಹಾಗೂ ಕುಡಿಯುವ ನೀರಿನ ಅಗತ್ಯವನ್ನು ಖಾತ್ರಿಪಡಿಸಬೇಕು ಎಂದು ಕೃಷ್ಣಾ ಅಚ್ಚುಕಟ್ಟು ಪ್ರದೇಶದ ರೈತರು ಆಗ್ರಹಿಸುತ್ತಿದ್ದಾರೆ.

''ನಮ್ಮ ರೈತರ ಹಿತ ಮರೆತರೆ ಹೋರಾಟ''

''ಹಿಂಗಾರು ಹಂಗಾಮಿನ ಬೆಳೆಗಳು ಹಾಗೂ ಕುಡಿಯುವ ನೀರಿನ ಅಗತ್ಯತೆ ಪರಿಗಣಿಸದೆ ತೆಲಂಗಾಣಕ್ಕೆ ನೀರು ಹರಿಸಿದರೆ ನಮ್ಮ ರೈತರಿಗೆ ತೊಂದರೆಯಾಗಲಿದೆ. ನೀರು ಬಿಡುಗಡೆ ಮಾಡುವ ನಿರ್ಧಾರ ಕೈಗೊಳ್ಳುವ ಮೊದಲು ಕೃಷ್ಣಾ ಅಚ್ಚುಕಟ್ಟು ಪ್ರದೇಶದ ರೈತರ ಹಿತವನ್ನು ಸರ್ಕಾರ ಪರಿಗಣಿಸಬೇಕು. ಇಲ್ಲದಿದ್ದರೆ ರಾಜ್ಯ ಸರ್ಕಾರದ ವಿರುದ್ಧ ಹೋರಾಟ ನಡೆಸಬೇಕಾಗುತ್ತದೆ.''ಎಂದು ಅಖಂಡ ಕರ್ನಾಟಕ ರೈತ ಸಂಘದ ಅರವಿಂದ ಕುಲಕರ್ಣಿ ಎಚ್ಚರಿಸಿದ್ದಾರೆ.

ಸರ್ಕಾರದ ಮುಂದಿರುವ ಮೂರು ಪ್ರಶ್ನೆಗಳು

ತೆಲಂಗಾಣಕ್ಕೆ ನೀರು ಬಿಟ್ಟ ನಂತರ ಆಲಮಟ್ಟಿ-ನಾರಾಯಣಪುರದಲ್ಲಿ ಉಳಿಯುವ ನೀರು ಎಷ್ಟು?

ಹಿಂಗಾರು ಬೆಳೆ ಮತ್ತು ಮುಂದಿನ ಬೇಸಿಗೆಯ ಕುಡಿಯುವ ನೀರಿಗೆ ಅಗತ್ಯವಿರುವ ಪ್ರಮಾಣವನ್ನು ಸರ್ಕಾರ ಈಗಾಗಲೇ ಕಾಯ್ದಿರಿಸಿದೆಯೇ?

ಮುಂದಿನ ಮುಂಗಾರು ಬರುವವರೆಗೆ ಕೃಷ್ಣಾ ಕಣಿವೆಯಲ್ಲಿ ನಿರೀಕ್ಷಿತ ಒಳಹರಿವು ಎಷ್ಟು ಎಂಬ ವೈಜ್ಞಾನಿಕ ಲೆಕ್ಕಾಚಾರದ ಆಧಾರದ ಮೇಲೆಯೇ ನೀರು ಬಿಡುಗಡೆ ನಿರ್ಧಾರವಾಗಿದೆಯೇ?

ಈ ಮೂರು ಪ್ರಶ್ನೆಗಳಿಗೆ ಸ್ಪಷ್ಟ ಉತ್ತರ ದೊರೆಯದೆ ನೀರು ಬಿಡುಗಡೆ ಮಾಡಿದರೆ, ಆಲಮಟ್ಟಿಯ ನೀರು ಇಂದು ಹರಿಯಬಹುದು; ಆದರೆ ಅದರ ಪರಿಣಾಮದ ಲೆಕ್ಕವನ್ನು ಕೃಷ್ಣಾ ಅಚ್ಚುಕಟ್ಟು ಪ್ರದೇಶದ ರೈತರು ನಾಳೆ ಕಟ್ಟಬೇಕಾಗಬಹುದು ಎಂಬ ಆತಂಕ ಸ್ಥಳೀಯ ರೈತರಲ್ಲಿ ವ್ಯಕ್ತವಾಗಿದೆ. ಕೃಷ್ಣಾ ನೀರಿನ ಹಂಚಿಕೆ ಈಗ ಕೇವಲ ಎರಡು ರಾಜ್ಯಗಳ ನಡುವಿನ ವಿಚಾರವಲ್ಲ; ಅದು ಎರಡೂ ರಾಜ್ಯಗಳ ರೈತರ ಬೆಳೆ, ಜನರ ಕುಡಿಯುವ ನೀರು ಮತ್ತು ಮುಂದಿನ ಹಂಗಾಮಿನ ಭದ್ರತೆಯ ಪ್ರಶ್ನೆಯಾಗಿದೆ.

ಚುನಾವಣಾ ವ್ಯವಸ್ಥೆಯನ್ನೇ ಅಲುಗಾಡಿಸಿದ ಮೋದಿ ಸರ್ಕಾರದ 10 ವಿವಾದಗಳು

ಪ್ರಜಾಪ್ರಭುತ್ವದ ಜೀವಾಳವಾದ ನಿಷ್ಪಕ್ಷಪಾತ ಚುನಾವಣಾ ವ್ಯವಸ್ಥೆಗೆ ಇಂದು ಗ್ರಹಣ ಬಡಿದಿದೆಯೇ? ಏಕಾಏಕಿ 13.8 ಕೋಟಿ ಹೆಸರುಗಳನ್ನು ಅಳಿಸಿಹಾಕಿದ (ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ) ಮಹಾವಿವಾದ ಮತ್ತು ಆಯೋಗದೊಳಗಿನ ಭಿನ್ನಮತವು ಈ ಅನುಮಾನವನ್ನು ಮತ್ತಷ್ಟು ಗಾಢವಾಗಿಸಿದೆ. ಅಸಂವಿಧಾನಿಕ ಎಲೆಕ್ಟೊರಲ್ ಬಾಂಡ್ ಹಾಗೂ ಚುನಾವಣಾ ಆಯುಕ್ತರ ನೇಮಕಾತಿ ಕಾಯ್ದೆಯಂತಹ ಕಾನೂನುಗಳನ್ನು ಮೋದಿ ಸರ್ಕಾರ ಮಾಡಿದೆ. ಇದರ ಬೆನ್ನಲ್ಲೇ ಆಯೋಗದ ದಿಢೀರ್ ಫಾರ್ಮ್ 6 ಬದಲಾವಣೆ, ದತ್ತಾಂಶ ಕೇಂದ್ರೀಕರಣ, ಸುದೀರ್ಘ ಚುನಾವಣಾ ವೇಳಾಪಟ್ಟಿ ಹಾಗೂ ನೀತಿ ಸಂಹಿತೆ ಜಾರಿಯಲ್ಲಿನ ತಾರತಮ್ಯಹೀಗೆ ಚುನಾವಣಾ ಆಖಾಡದಲ್ಲಿ ಸಮಾನ ಅವಕಾಶವನ್ನೇ ಪ್ರಶ್ನಿಸುವಂತೆ ಮಾಡಿದ ಮೋದಿ ಅಮಿತ್ ಶಾ ನೇತೃತ್ವದ ಬಿಜೆಪಿ ಸರ್ಕಾರದ 10 ಆತಂಕಕಾರಿ ವಿವಾದಗಳ ವಿಶ್ಲೇಷಣೆ ಇಲ್ಲಿದೆ.

ಭಾರತೀಯ ಚುನಾವಣಾ ಆಯೋಗವು ಇತ್ತೀಚೆಗೆ ಕೈಗೊಂಡ ವಿಶೇಷ ತೀವ್ರ ಪರಿಷ್ಕರಣೆ () ಪ್ರಕ್ರಿಯೆಯು ಇದೀಗ ದೇಶಾದ್ಯಂತ ಅಭೂತಪೂರ್ವ ರಾಜಕೀಯ ಹಾಗೂ ಸಾಂವಿಧಾನಿಕ ವಿವಾದವಾಗಿ ಸ್ಫೋಟಗೊಂಡಿದೆ. ದೇಶದ 31 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಬರೋಬ್ಬರಿ 13.8 ಕೋಟಿ (ಶೇ 14.6ರಷ್ಟು) ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಟ್ಟಿರುವುದು ಈ ವಿವಾದದ ಮೂಲ. ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಅವರ ನಿರ್ದೇಶನದ ಮೇರೆಗೆ, ಮುಂಬರುವ ಚುನಾವಣೆಗಳಲ್ಲಿ ಆಡಳಿತಾರೂಢ ಬಿಜೆಪಿಗೆ ಅನುಕೂಲ ಮಾಡಿಕೊಡುವ ಏಕೈಕ ಉದ್ದೇಶದಿಂದಲೇ ಈ ಬೃಹತ್ ಮಟ್ಟದ ಮತದಾರರ ಅಳಿಸುವಿಕೆ ನಡೆದಿದೆ ಎಂದು ವಿರೋಧ ಪಕ್ಷಗಳು ಗಂಭೀರ ಆರೋಪ ಮಾಡಿವೆ. ಈ ಆರೋಪಗಳಿಗೆ ಪುಷ್ಟಿ ನೀಡುವಂತೆ, ಮುಖ್ಯ ಚುನಾವಣಾ ಆಯುಕ್ತ () ಜ್ಞಾನೇಶ್ ಕುಮಾರ್ ಅವರು ಇತರೆ ಇಬ್ಬರು ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರ ಸತತ ಲಿಖಿತ ವಿರೋಧವನ್ನು ಕಡೆಗಣಿಸಿ ಏಕಪಕ್ಷೀಯ ನಿರ್ಧಾರಗಳನ್ನು ಕೈಗೊಂಡಿದ್ದಾರೆ ಎಂಬ ಮಾಧ್ಯಮಗಳ ತನಿಖಾ ವರದಿಗಳು ಹೊರಬಿದ್ದಿವೆ. ಶಾಸನಬದ್ಧ ಫಾರ್ಮ್ 6 ಬದಲಾವಣೆ ಹಾಗೂ ದತ್ತಾಂಶ ಕೇಂದ್ರೀಕರಣದಂತಹ ನಿರ್ಧಾರಗಳನ್ನು ಆಯುಕ್ತರಿಬ್ಬರ ಆಕ್ಷೇಪದ ನಡುವೆಯೂ ಜಾರಿಗೊಳಿಸಿದ್ದು, ಆಯೋಗವು ಸರ್ಕಾರದ ಹಸ್ತಕ್ಷೇಪಕ್ಕೆ ಮಣಿದು ವಿಪಕ್ಷಗಳ ಮತಬ್ಯಾಂಕ್‌ಗೆ ಕನ್ನ ಹಾಕುತ್ತಿದೆಯೇ ಎಂಬ ಅನುಮಾನಗಳನ್ನು ಹುಟ್ಟುಹಾಕಿದೆ.

2. ಎಲೆಕ್ಟೊರಲ್ ಬಾಂಡ್: ನ್ಯಾಯಾಲಯದಿಂದ ರದ್ದಾದ ಅಸಂವಿಧಾನಿಕ ಆರ್ಥಿಕ ನೀತಿ

ಚುನಾವಣಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರುವ ಹೆಸರಿನಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದಿದ್ದ ಎಲೆಕ್ಟೊರಲ್ ಬಾಂಡ್ (ಚುನಾವಣಾ ಬಾಂಡ್) ಯೋಜನೆಯು ವಾಸ್ತವದಲ್ಲಿ ಅಪಾರದರ್ಶಕತೆಯ ಪರಮಾವಧಿಯಾಗಿತ್ತು. ರಾಜಕೀಯ ಪಕ್ಷಗಳಿಗೆ ಯಾರು, ಎಷ್ಟು ಕೋಟಿ ರೂಪಾಯಿ ದೇಣಿಗೆ ನೀಡಿದ್ದಾರೆ ಎಂಬ ಮಾಹಿತಿಯನ್ನು ದೇಶದ ಜನರಿಂದ ಮತ್ತು ಚುನಾವಣಾ ಆಯೋಗದಿಂದಲೂ ಸಂಪೂರ್ಣವಾಗಿ ಗೌಪ್ಯವಾಗಿಡುವ ವ್ಯವಸ್ಥೆ ಇದಾಗಿತ್ತು. ಈ ಯೋಜನೆಯು ಸಾಮಾನ್ಯ ಮತದಾರನ ಮಾಹಿತಿಯ ಹಕ್ಕು ಕಾಯ್ದೆಗೆ ನೇರ ಉಲ್ಲಂಘನೆಯಾಗಿದೆ ಎಂದು ಅಭಿಪ್ರಾಯಪಟ್ಟ ಸುಪ್ರೀಂ ಕೋರ್ಟ್, ಇದನ್ನು ಸ್ಪಷ್ಟವಾಗಿ ಅಸಂವಿಧಾನಿಕ ಎಂದು ಐತಿಹಾಸಿಕ ತೀರ್ಪು ನೀಡಿ ರದ್ದುಪಡಿಸಿತು. ನ್ಯಾಯಾಲಯದ ಆದೇಶದ ಬಳಿಕ ಎಸ್‌ಬಿಐ ಒದಗಿಸಿದ ಮತ್ತು ಆಯೋಗ ಪ್ರಕಟಿಸಿದ ದತ್ತಾಂಶಗಳ ಪ್ರಕಾರ, ಏಪ್ರಿಲ್ 2019ರಿಂದ ಫೆಬ್ರವರಿ 2024ರವರೆಗೆ ಆಡಳಿತಾರೂಢ ಬಿಜೆಪಿ ಸುಮಾರು ₹6,061 ಕೋಟಿ ಮೌಲ್ಯದ ಬಾಂಡ್‌ಗಳನ್ನು ನಗದೀಕರಿಸಿಕೊಂಡಿತ್ತು. ಒಟ್ಟು ಬಾಂಡ್‌ಗಳ ಬಹುಪಾಲು ಕೇವಲ ಒಂದು ಪಕ್ಷದ ಪಾಲಾಗುವ ಮೂಲಕ ಈ ಯೋಜನೆಯು ಆಡಳಿತ ಪಕ್ಷಕ್ಕೆ ಅಭೂತಪೂರ್ವ ಆರ್ಥಿಕ ಬಲವನ್ನು ನೀಡಿತ್ತು ಎಂಬುದು ಇದರಿಂದ ಸಾಬೀತಾಯಿತು.

ಚುನಾವಣಾ ಬಾಂಡ್

3. ಚುನಾವಣಾ ಕಾಲದಲ್ಲಿ ಬಾಂಡ್ ಮಾರಾಟ ನಿಯಮಗಳ ತಿದ್ದುಪಡಿ

ಎಲೆಕ್ಟೊರಲ್ ಬಾಂಡ್ ಯೋಜನೆಯನ್ನು ಕೇವಲ ಜಾರಿಗೆ ತಂದಿದ್ದಷ್ಟೇ ಅಲ್ಲ, ಆಡಳಿತ ಪಕ್ಷಕ್ಕೆ ಆರ್ಥಿಕವಾಗಿ ಅನುಕೂಲವಾಗುವಂತೆ ಅದರ ನಿಯಮಾವಳಿಗಳನ್ನು ಮನಬಂದಂತೆ ತಿದ್ದುಪಡಿ ಮಾಡಲಾಯಿತು ಎಂಬುದು ಮತ್ತೊಂದು ಗಂಭೀರ ಆರೋಪ. ಮೂಲ ನಿಯಮದ ಪ್ರಕಾರ, ಕೇವಲ ಲೋಕಸಭಾ ಚುನಾವಣೆಯ ವರ್ಷದಲ್ಲಿ ಮಾತ್ರ ಹೆಚ್ಚುವರಿ 30 ದಿನಗಳ ಕಾಲ ಬಾಂಡ್ ಮಾರಾಟಕ್ಕೆ ಅವಕಾಶವಿತ್ತು. ಆದರೆ, 2022ರಲ್ಲಿ ಗುಜರಾತ್ ಮತ್ತು ಹಿಮಾಚಲ ಪ್ರದೇಶದ ವಿಧಾನಸಭಾ ಚುನಾವಣೆಗಳು ಎದುರಾದಾಗ, ಕೇಂದ್ರ ಸರ್ಕಾರ ನಿಯಮಗಳನ್ನು ತಿದ್ದುಪಡಿ ಮಾಡಿ ಹೆಚ್ಚುವರಿ 15 ದಿನಗಳ ಮಾರಾಟಕ್ಕೆ ಅವಕಾಶ ಕಲ್ಪಿಸಿತು. ಅಚ್ಚರಿಯೆಂದರೆ, ಈ ರಾಜ್ಯಗಳಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದಾಗಲೇ ಬಾಂಡ್ ಮಾರಾಟದ ವಿಂಡೋ ತೆರೆಯಲಾಯಿತು. ಇದು ಅಧಿಕಾರದ ಬಲವನ್ನು ಬಳಸಿ ಚುನಾವಣಾ ಸಂದರ್ಭದಲ್ಲಿ ನಿಧಿ ಕ್ರೋಢೀಕರಿಸುವ ತಂತ್ರವಾಗಿತ್ತು ಎಂದು ಪಾರದರ್ಶಕತೆ ಹೋರಾಟಗಾರರು ತೀವ್ರವಾಗಿ ಆಕ್ಷೇಪಿಸಿದ್ದರು.

ಚುನಾವಣಾ ಬಾಂಡ್

4. ಎಲೆಕ್ಟೊರಲ್ ಟ್ರಸ್ಟ್‌ಗಳು: ಮುಂದುವರಿದಿರುವ ರಾಜಕೀಯ ದೇಣಿಗೆಯ ಭಾರಿ ಅಸಮಾನತೆ

ಬಾಂಡ್ ಯೋಜನೆ ರದ್ದಾದ ಮೇಲೂ ಚುನಾವಣಾ ಆಖಾಡದಲ್ಲಿ ಹಣದ ಹೊಳೆಯ ಅಸಮಾನತೆ ಕಡಿಮೆಯಾಗಿಲ್ಲ. ಕಾರ್ಪೊರೇಟ್ ಕಂಪನಿಗಳು ಅಧಿಕೃತವಾಗಿ ರಾಜಕೀಯ ಪಕ್ಷಗಳಿಗೆ ಹಣ ನೀಡಲು ಬಳಸುವ ಎಲೆಕ್ಟೊರಲ್ ಟ್ರಸ್ಟ್‌ಗಳ ಅಂಕಿ-ಅಂಶಗಳು ಆತಂಕಕಾರಿಯಾಗಿವೆ. 202425ನೇ ಸಾಲಿನಲ್ಲಿ ಟ್ರಸ್ಟ್‌ಗಳ ಮೂಲಕ ರಾಜಕೀಯ ಪಕ್ಷಗಳಿಗೆ ಸಲ್ಲಿಕೆಯಾದ ಒಟ್ಟು ₹3,811 ಕೋಟಿ ದೇಣಿಗೆಯಲ್ಲಿ, ಬರೋಬ್ಬರಿ ₹3,112 ಕೋಟಿ (ಶೇ 82ರಷ್ಟು) ಕೇವಲ ಬಿಜೆಪಿಯ ಪಾಲಾಗಿದೆ. ಉಳಿದ ಶೇ 18ರಷ್ಟು ಹಣದಲ್ಲಿ ದೇಶದ ಎಲ್ಲ ವಿರೋಧ ಪಕ್ಷಗಳು ಹಂಚಿಕೊಳ್ಳಬೇಕಾದ ಸ್ಥಿತಿ ಇದೆ. ಇದು ಕಾನೂನುಬದ್ಧ ಮಾರ್ಗವೇ ಆಗಿದ್ದರೂ, ಆಡಳಿತ ಪಕ್ಷದ ಬಳಿ ಮಾತ್ರ ಸಾವಿರಾರು ಕೋಟಿ ರೂಪಾಯಿಗಳ ನಿಧಿ ಶೇಖರಣೆಯಾಗುತ್ತಿರುವುದು ಚುನಾವಣೆಯಲ್ಲಿ ಸಮಾನ ಪೈಪೋಟಿಯನ್ನು ಅಸಾಧ್ಯವಾಗಿಸುತ್ತಿದೆ ಎಂಬುದು ವಿಶ್ಲೇಷಕರ ಕಳವಳ.

ಹಣ ವರ್ಗಾವಣೆ

5. ಚುನಾವಣಾ ಆಯುಕ್ತರ ನೇಮಕಾತಿ ಕಾಯ್ದೆ: ಆಯೋಗದ ಮೇಲೆ ಸರ್ಕಾರದ ಹಿಡಿತ

ಚುನಾವಣಾ ಆಯೋಗದ ಸ್ವಾಯತ್ತತೆ ಮತ್ತು ನಿಷ್ಪಕ್ಷಪಾತತೆಗೆ ಅತಿ ದೊಡ್ಡ ಪೆಟ್ಟು ಬಿದ್ದಿರುವುದು 2023ರಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದ ಹೊಸ ನೇಮಕಾತಿ ಕಾಯ್ದೆಯಿಂದ. ಈ ಹಿಂದೆ, ಸುಪ್ರೀಂ ಕೋರ್ಟ್ ನೀಡಿದ್ದ ತೀರ್ಪಿನ ಅನ್ವಯ ನೇಮಕಾತಿ ಸಮಿತಿಯಲ್ಲಿ ಪ್ರಧಾನಿ, ವಿಪಕ್ಷ ನಾಯಕ ಮತ್ತು ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳು ಇರಬೇಕಿತ್ತು. ಆದರೆ, ಕೇಂದ್ರ ಸರ್ಕಾರವು ಹೊಸ ಕಾಯ್ದೆಯನ್ನು ತರುವ ಮೂಲಕ ಮುಖ್ಯ ನ್ಯಾಯಮೂರ್ತಿಗಳ ಸ್ಥಾನವನ್ನು ತೆಗೆದುಹಾಕಿ, ಆ ಜಾಗಕ್ಕೆ ಪ್ರಧಾನಿ ನಾಮನಿರ್ದೇಶನ ಮಾಡುವ ಕೇಂದ್ರ ಕ್ಯಾಬಿನೆಟ್ ಸಚಿವರೊಬ್ಬರನ್ನು ಸೇರಿಸಿತು. ಇದರ ನೇರ ಪರಿಣಾಮವೆಂದರೆ, ಮೂವರು ಸದಸ್ಯರ ಸಮಿತಿಯಲ್ಲಿ ಸರ್ಕಾರದ ಇಬ್ಬರು ಪ್ರತಿನಿಧಿಗಳಿದ್ದು, ಆಡಳಿತ ಪಕ್ಷ ತನಗೆ ಬೇಕಾದವರನ್ನೇ ಆಯುಕ್ತರನ್ನಾಗಿ ನೇಮಿಸಿಕೊಳ್ಳಲು ಸಂಪೂರ್ಣ ಬಹುಮತ ಸಿಕ್ಕಂತಾಗಿದೆ. ಅಂಪೈರ್ ಅನ್ನು ನೇಮಿಸುವ ಅಧಿಕಾರವೇ ಒಂದು ತಂಡದ ಕೈಲಿದ್ದರೆ ಆಟ ನಿಷ್ಪಕ್ಷಪಾತವಾಗಿರಲು ಹೇಗೆ ಸಾಧ್ಯ ಎಂಬುದು ವಿರೋಧ ಪಕ್ಷಗಳ ಪ್ರಶ್ನೆಯಾಗಿದೆ.

6. ಬಂಗಾಳದಲ್ಲಿ ಮತದಾರರ ಕೈಬಿಡುವಿಕೆ: ಆಡಳಿತಾತ್ಮಕ ಲೋಪಗಳ ಸರಮಾಲೆ

ಪಶ್ಚಿಮ ಬಂಗಾಳದಲ್ಲಿ ನಡೆದ ವಿಶೇಷ ತೀವ್ರ ಪರಿಷ್ಕರಣೆ () ಪ್ರಕ್ರಿಯೆಯು ಆಯೋಗದ ಕಾರ್ಯವೈಖರಿಯ ಬಗ್ಗೆ ತೀವ್ರ ಅನುಮಾನಗಳನ್ನು ಮೂಡಿಸಿದೆ. ರಾಜ್ಯದಲ್ಲಿ ಬರೋಬ್ಬರಿ 27.16 ಲಕ್ಷ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡಲಾಗಿತ್ತು. ಈ ಪ್ರಕ್ರಿಯೆ ಎಷ್ಟು ದೋಷಪೂರಿತವಾಗಿತ್ತೆಂದರೆ, ಕೈಬಿಡಲ್ಪಟ್ಟವರ ಪೈಕಿ ಸುಮಾರು 22.21 ಲಕ್ಷ ಮಂದಿ ತಾವು ಅರ್ಹರು ಎಂದು ಮರುಸೇರ್ಪಡೆಗಾಗಿ ಆಯೋಗಕ್ಕೆ ಮೇಲ್ಮನವಿ ಸಲ್ಲಿಸಿದ್ದಾರೆ. ಅಚ್ಚರಿಯೆಂದರೆ, ಸೆಪ್ಟೆಂಬರ್ ಮಧ್ಯಭಾಗದ ವೇಳೆಗೆ ಇತ್ಯರ್ಥವಾಗಬೇಕಿದ್ದ ಒಟ್ಟು 38 ಲಕ್ಷ ಮೇಲ್ಮನವಿಗಳಲ್ಲಿ ಆಯೋಗವು ಕೇವಲ ಅಲ್ಪ ಭಾಗವನ್ನಷ್ಟೇ ಪರಿಹರಿಸಿತ್ತು. ಇದು ಲಕ್ಷಾಂತರ ಜನರನ್ನು ಅವರ ಮೂಲಭೂತ ಮತದಾನದ ಹಕ್ಕಿನಿಂದ ವಂಚಿತರನ್ನಾಗಿಸುವ ವ್ಯವಸ್ಥಿತ ಲೋಪ ಎಂಬ ಆರೋಪಕ್ಕೆ ಕಾರಣವಾಯಿತು.

7. ನಿರ್ದಿಷ್ಟ ಕ್ಷೇತ್ರಗಳ ಗುರಿಯಾಗಿಸುವಿಕೆ: ಅಸಮಾನ ಅಳಿಸುವಿಕೆಯ ವಿವಾದ

ಇದೇ ಬಂಗಾಳದ ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಮತ್ತೊಂದು ಗಂಭೀರ ರಾಜಕೀಯ ಆರೋಪವೂ ಕೇಳಿಬಂತು. ಅಂಕಿ-ಅಂಶಗಳನ್ನು ಸೂಕ್ಷ್ಮವಾಗಿ ಗಮನಿಸಿದಾಗ, ಅತಿ ಹೆಚ್ಚು ಹೆಸರು ಕೈಬಿಡಲ್ಪಟ್ಟ ರಾಜ್ಯದ ಮೊದಲ ಹತ್ತು ವಿಧಾನಸಭಾ ಕ್ಷೇತ್ರಗಳೂ ಅಂದಿನ ವಿರೋಧ ಪಕ್ಷವಾದ ಟಿಎಂಸಿಯ ಪ್ರಾಬಲ್ಯದ ಕ್ಷೇತ್ರಗಳೇ ಆಗಿದ್ದವು (ಮುರ್ಷಿದಾಬಾದ್ ಮತ್ತು ಮಾಲ್ಡಾ ಜಿಲ್ಲೆಗಳು). ಉದಾಹರಣೆಗೆ, ಕೇವಲ ಸಂಶೇರ್‌ಗಂಜ್ ಕ್ಷೇತ್ರವೊಂದರಲ್ಲೇ 74,775 ಹೆಸರುಗಳನ್ನು ಅಳಿಸಿಹಾಕಲಾಗಿತ್ತು. ಇದು ಕೇವಲ ಆಡಳಿತಾತ್ಮಕ ದೋಷವಲ್ಲ, ಬದಲಾಗಿ ನಿರ್ದಿಷ್ಟ ಸಮುದಾಯ ಅಥವಾ ಪಕ್ಷದ ಬೆಂಬಲಿಗರನ್ನು ವ್ಯವಸ್ಥಿತವಾಗಿ ಮತದಾರರ ಪಟ್ಟಿಯಿಂದ ಹೊರಗಿಡುವ ತಂತ್ರಗಾರಿಕೆ ಎಂದು ವಿರೋಧ ಪಕ್ಷಗಳು ಆರೋಪಿಸಿದವು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR